ಸಂಪುಟ: 14 Volume | ಸಂಚಿಕೆ: 43 Issue | ಪುಟಗಳು 08 Pages | ಮಂಗಳವಾರ 19 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

**ಬೆಳಗು**

ಧನವಿದ್ದವರೇ ಧನಿಕರಲ್ಲ,
ಜ್ಞಾನವೇ ಧನದ ನಿಧಿ.
–ಪಂಡಿತ ತಾರಾನಾಥ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ




ಮಾನ್ಯ ಕೇಂದ್ರ ಸಚಿವರಾದ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರು ಇಂದು ಸಂಜೆ ಮಾಜಿ ಪ್ರಧಾನಿಗಳಾದ ಶ್ರೀ ಹೆಚ್.ಡಿ. ದೇವೇಗೌಡ ಅವರನ್ನು ಭೇಟಿಯಾಗಿ ಜನ್ಮದಿನದ ಶುಭಾಶಯಗಳನ್ನು ಕೋರಿ ಆಶೀರ್ವಾದ ಪಡೆದರು.



ಕೇರಳಂನ ತಿರುವನಂತಪುರ ವಿಮಾನ ನಿಲ್ದಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಸಭೆಯ ವಿಪಕ್ಷ ನಾಯಕ, ಕಾಂಗ್ರೆಸ್ ಪಕ್ಷದ ವರಿಷ್ಠರಾದ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿ ಕುಶಲೋಪಹರಿ ವಿಚಾರಿಸಿದ ಸಂದರ್ಭ.

## ಒಂದು ದೇಶ ಒಂದೇ ಚುನಾವಣೆಗೆ ಮನವಿ



**ಬೆಂಗಳೂರು:** ಲೋಕಸಭಾ ಕಾರ್ಯಾಲಯದ ಜಂಟಿ ಸಂಸದೀಯ ಸಮಿತಿಯು ಇಂದು ನಗರದ ತಾಜ್ ವೆಸ್ಟ್ ಎಂಡ್ ಗೆ ಭೇಟಿ ನೀಡಿತ್ತು. ಒಂದು ದೇಶ ಒಂದೇ ಚುನಾವಣೆ ಕುರಿತ ಸಾಂವಿಧಾನಿಕ ತಿದ್ದುಪಡಿ ವಿಚಾರದಲ್ಲಿ ರಾಜಕೀಯ ಪಕ್ಷಗಳ ಜೊತೆ ಸಮಿತಿಯು ಚರ್ಚೆ ನಡೆಸಿತು. 'ಒಂದು ದೇಶ ಒಂದೇ ಚುನಾವಣೆ' ಜಾರಿಗೆ ತರುವಂತೆ ಬಿಜೆಪಿ ವತಿಯಿಂದ ಮನವಿ ಸಲ್ಲಿಸಲಾಯಿತು. ಈ ಕುರಿತ ಚರ್ಚೆಯಲ್ಲಿ ರಾಜ್ಯ ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್, ಉಪ ನಾಯಕ ಅರವಿಂದ ಬೆಲ್ಲದ, ಮಾಜಿ ಡಿಸಿಎಂ ಮತ್ತು ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ್, ವಿಧಾನಪರಿಷತ್ ಸದಸ್ಯ ಗೋಪಿನಾಥ್ ರೆಡ್ಡಿ ಹಾಗೂ ಪ್ರಮುಖರು ಉಪಸ್ಥಿತರಿದ್ದರು.

## ಬಿವೈವಿ ಮೆಟ್ರೋ ಪ್ರಯಾಣ ಬಗ್ಗೆ ಖರ್ಗೆ ವ್ಯಂಗ್ಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ವಿಜಯೇಂದ್ರ ಮೆಟ್ರೋ ಹತ್ತಿರುವ ಬಗ್ಗೆ ಮಾಧ್ಯಮಗಳು ಪದೇ ಪದೇ ಸುದ್ದಿ ಬಿತ್ತರಿಸುತ್ತಿವೆ. ಆದರೆ,ಈ ಪರಿಸ್ಥಿತಿಗೆ ಯಾರು ಕಾರಣ ಎಂದು ಯಾಕೆ ಕೇಳುತ್ತಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಟೀಕಿಸಿದರು.

ಮಾಡಬೂಳ ಗ್ರಾಮದ ಬಳಿ ನಿರ್ಮಾಣವಾಗಿರುವ ನೂತನ ಮೃಗಾಲಯ ಉದ್ಘಾಟನೆ ನೆರವೇರಿಸಿದ ನಂತರದ ಮಾಧ್ಯಮದ ಪ್ರತಿನಿಧಿಗಳೊಂದಿಗೆ ಅವರು ಮಾತನಾಡುತ್ತಿದ್ದರು. ಮೋದಿ ವಿದೇಶದಿಂದ ತಂದ ಪ್ರಾಣಿಗಳು ಸತ್ತು ಹೋದವು. ಈಗ ನಾವು ತರುವ ಪ್ರಾಣಿಗಳನ್ನು ಸರಿಯಾಗಿ ನಿರ್ವಹಣೆ ಮಾಡಿ ಸಂರಕ್ಷಿಸಲಾಗುವುದು ಎಂದು ಪ್ರಿಯಾಂಕ್ ಹೇಳಿದರು.

ದೇಶ ಕಷ್ಟದ ಸ್ಥಿತಿಯಲ್ಲಿದ್ದಾಗ ಮೋದಿ ವಿದೇಶಕ್ಕೆ ಹೋಗುತ್ತಾರೆ. ಆರ್ಥಿಕಸ್ಥಿತಿಗತಿ, ಪೆಟ್ರೋಲಿಯಂ ಬೆಲೆ ಏರಿಕೆ ಬಗ್ಗೆ ಸಂಸತ್ತಿನಲ್ಲೇ ಹೇಳಬೇಕಿತ್ತು ನೆದರ್ ಲ್ಯಾಂಡ್ಸ್ ಗೆ ಯಾಕೆ ಹೋಗಬೇಕಿತ್ತು ಎಂದು ಖರ್ಗೆ ಕುಟುಕಿದರು. ಬೆಲೆ ಏರಿಕೆ ವಿಷಯ ಮರೆಮಾಚಲು ಮೋದಿ ಚಿನ್ನ ಖರೀದಿ ಮಾಡಬೇಡಿ ಎಂದು ಜನರಿಗೆ ಕರೆ ಕೊಡುತ್ತಾರೆ. ನೀಟ್ ಅಕ್ರಮ ಬಗ್ಗೆ ಮೋದಿ ಯಾಕೆ ಮಾತನಾಡುವುದಿಲ್ಲ. 22 ಲಕ್ಷ ವಿದ್ಯಾರ್ಥಿಗಳ ಭವಿಷ್ಯ ಹಾಳಾಗಿದೆ. ಇದಕ್ಕೆಯಾರು ಕಾರಣ? ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನ ಇನ್ನೂ ಸಚಿವರಾಗಿ ಮುಂದುವರೆಸಿದ್ದಾರೆ ಯಾಕೆ? ಎಂದು ಅರಣ್ಯ ಸಚಿವ ಪ್ರಶ್ನಿಸಿದರು.

## ನುಡಿದಂತೆ ನಡೆಯುತ್ತಿರುವ ಸಿಎಂ, ಡಿಸಿಎಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ರಾಜ್ಯಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲೊಂದಾದ "ಗೃಹಲಕ್ಷ್ಮಿ" ಯೋಜನೆಯ 30ನೇ ಕಂತಿನ ಹಣವನ್ನು ಬಿಡುಗಡೆ ಮಾಡಲಾಗಿದೆ. ಈ ಮೂಲಕ ರಾಜ್ಯದ 1,24,10,668 ಮಹಿಳೆಯರಿಗೆ ತಲಾ 60,000 ರೂ. ಹಣವನ್ನು ನೇರವಾಗಿ ಬ್ಯಾಂಕ್ ಖಾತೆಗೆ ಹಾಕುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರು ತಿಳಿಸಿದ್ದಾರೆ.

ಚುನಾವಣೆ ಪೂರ್ವದಲ್ಲಿ ನೀಡಿದ್ದ ಭರವಸೆಯಂತೆ ಮನೆಯ ಯಜಮಾನಿಯರಿಗೆ ಪ್ರತಿ ತಿಂಗಳು 2000 ರೂ.ಗಳಂತೆ ಕಳೆದ ಮೂರು ವರ್ಷದಲ್ಲಿ 60,000 ರೂ.ಗಳನ್ನು ಯಾವುದೇ ಭ್ರಷ್ಟಾಚಾರ, ಕಮಿಷನ್ ಇಲ್ಲದೇ ಡಿಬಿಟಿ ಮೂಲಕ ನೇರವಾಗಿ ಫಲಾನುಭವಿಗಳಿಗೆ ತಲುಪಿಸುತ್ತಿದೆ. ರಾಜ್ಯ ಗೃಹಲಕ್ಷ್ಮಿಯರ ಪರವಾಗಿ ಸರ್ಕಾರಕ್ಕೆ ಧನ್ಯವಾದಗಳನ್ನು ತಿಳಿಸುತ್ತೇನೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಕೈಯಲ್ಲೇ ಸಿಡಿದ ಯುವ ಶಕ್ತಿ

## ಯೂತ್ ಕಾಂಗ್ರೆಸ್ ಉಪಾಧ್ಯಕ್ಷೆ ದೀಪಿಕಾ ರೆಡ್ಡಿ ಸೇರಿದಂತೆ 15 ಪದಾಧಿಕಾರಿಗಳಿಗೆ ಕೊಕ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಕಾಂಗ್ರೆಸ್ ಒಂದಿಲ್ಲೊಂದು ಕಾರಣಕ್ಕೆ ಸದಾ ಸುದ್ದಿಯಲ್ಲಿರುತ್ತದೆ.

ಇದೀಗ ಯೂತ್ ಕಾಂಗ್ರೆಸ್ ಉಪಾಧ್ಯಕ್ಷೆ ದೀಪಿಕಾ ರೆಡ್ಡಿ ಸೇರಿದಂತೆ 15 ಪದಾಧಿಕಾರಿಗಳಿಗೆ ಕೊಕ್ ಕೊಟ್ಟ ಹಿನ್ನೆಲೆಯಲ್ಲಿ ಕೆಪಿಸಿಸಿ ಕಚೇರಿಯಲ್ಲಿ ಎರಡು ಗುಂಪುಗಳ ಬೆಂಬಲಿಗರ ನಡುವೆ ಗಲಾಟೆ ಕಲಹ ಜೋರಾಗಿ ನಡೆದಿದೆ.

**ಬೆಂಬಲಿಗರ ಆಕ್ರೋಶ:** ವಾಗ್ವಾದ ತೀವ್ರ ಸ್ವರೂಪಕ್ಕೆ ತಿರುಗಿದ್ದು, ಕಾರ್ಯಕರ್ತರು ಕೈ– ಕೈ ಮಿಲಾಯಿಸುವ ಹಂತಕ್ಕೆ ತಲುಪಿದ್ದರು. ನೋಟಿಸ್ ನೀಡದೆ ಏಕಾಏಕಿ ಪದಾಧಿಕಾರಿಗಳನ್ನು ಅಮಾನತು ಮಾಡಿದ್ದು, ಬೆಂಬಲಿಗರ ಆಕ್ರೋಶಕ್ಕೆ ಕಾರಣವಾಗಿದ್ದರಿಂದ ಇಡೀ ಘಟನೆ ಮತ್ತೊಂದು ಸ್ವರೂಪ ಪಡೆದಿದೆ.

**ಗಲಾಟೆಯ ಆರೋಪ?:** ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕೆಪಿಸಿಸಿ ಕಚೇರಿಯಲ್ಲಿ ಯೂತ್ ಕಾಂಗ್ರೆಸ್ ರಾಜ್ಯ ಕಾರ್ಯಕಾರಿ ಸಭೆ ಹಮ್ಮಿಕೊಳ್ಳಲಾಗಿತ್ತು. ಈ ಸಭೆಯಲ್ಲಿ ಯೂತ್ ಕಾಂಗ್ರೆಸ್ ಉಪಾಧ್ಯಕ್ಷೆ ದೀಪಿಕಾ ರೆಡ್ಡಿ, ಬೆಂಗಲಿಗರಿಂದ ಗಲಾಟೆ ನಡೆದಿದೆ. ಯೂತ್ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ ಗೌಡ ವಿರುದ್ಧ ರೊಚ್ಚಿಗೆದ್ದ ಬೆಂಬಲಿಗರು ತಮ್ಮ ಆಕ್ರೋಶ ಹೊರಹಾಕಿದ್ದಾರೆ.




### ಕಾರ್ಯಕರ್ತರ ಘೇರಾವ್

ಮೇ 21 ರಂದು ನೀಟ್ ಅಕ್ರಮ ಖಂಡಿಸಿ ಪ್ರತಿಭಟನೆಯನ್ನು ನಡೆಸುವ ನಿಟ್ಟಿನಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿತ್ತು. ಆದರೆ ಸಭೆಯಲ್ಲಿ ಹುದ್ದೆಯಿಂದ ಬಿಡುಗಡೆಗೊಳಿಸಲಾಗಿದ್ದ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ನೋಟಿಸ್ ನೀಡದೆ, ಹುದ್ದೆಯಿಂದ ಬಿಡುಗಡೆ ಮಾಡಿದ್ದು? ಎಂದು ಮಂಜುನಾಥ ಗೌಡ, ನಿಗಂ ಭಂಡಾರಿಗೆ ಕಾರ್ಯಕರ್ತರು ಘೇರಾವ್ ಹಾಕಿದರು.

### ಅಸಲು ವಿವಾದ ಏನು?

ಯುವ ಕಾಂಗ್ರೆಸ್‌ನ 15 ಪದಾಧಿಕಾರಿಗಳನ್ನು ಜವಾಬ್ದಾರಿಯಿಂದ ತಾತ್ಕಾಲಿಕವಾಗಿ ಮುಕ್ತಗೊಳಿಸಲಾಗಿತ್ತು. ರಾಜ್ಯ ಉಪಾಧ್ಯಕ್ಷೆ ದೀಪಿಕಾ ರೆಡ್ಡಿ, ಎಂಟು ಪ್ರಧಾನ ಕಾರ್ಯದರ್ಶಿಗಳು ಇದರಲ್ಲಿ ಒಳಗೊಂಡಿದ್ದಾರೆ. ಸಂಘಟನಾ ಚಟುವಟಿಕೆ ಇರದೆ, ಕರ್ತವ್ಯ ಲೋಪವೆಸಗಿದ್ದರಿಂದ ಯೂತ್ ಕಾಂಗ್ರೆಸ್ ರಾಷ್ಟ್ರೀಯ ನಾಯಕತ್ವ ಶಿಸ್ತುಕ್ರಮ ಕೈಗೊಂಡಿದೆ. ಇದು ಆಕ್ರೋಶಕ್ಕೆ ಕಾರಣ.

### ಈ ಕೆಳಗಿನವರಿಗೆ ಕೊಕ್

ದೀಪಿಕಾ ರೆಡ್ಡಿ, ರಾಜ್ಯ ಉಪಾಧ್ಯಕ್ಷೆ, ಸಿ.ಎಸ್. ಫ್ರಾನ್ಸಿಸ್ ಬೆನಿಟೊ–ರಾಜ್ಯ ಪ್ರಧಾನ ಕಾರ್ಯದರ್ಶಿ, ಸುಮನ್ ಸೋಮಶೇಖರ್, ರಾಜ್ಯ ಪ್ರಧಾನ ಕಾರ್ಯದರ್ಶಿಗಳು, ಬಿಂದು ಗೌಡ – ರಾಜ್ಯ ಪ್ರಧಾನ ಕಾರ್ಯದರ್ಶಿ, ಲಕ್ಷ್ಮಿ ಕೆ, ರಾಜ್ಯ ಪ್ರಧಾನ ಕಾರ್ಯದರ್ಶಿ, ವಾಣಿ ಕಾಂಬ್ಳೆ, ರಾಜ್ಯ ಪ್ರಧಾನ ಕಾರ್ಯದರ್ಶಿ, ಅಫ್ನಾನಖಾನಂ, ರಾಜ್ಯ ಪ್ರಧಾನ ಕಾರ್ಯದರ್ಶಿ ಮುಂತಾದವರಿಗೆ ಕೊಕ್ ಕೊಡಲಾಗಿದೆ.

### ಇದೆಲ್ಲಾ ಮಾಮೂಲು..!

ಘಟನೆಯ ಬಗ್ಗೆ ಪ್ರತಿಕ್ರಿಯಿಸಿದ ಯೂತ್ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ ಗೌಡ, ನಾವು ಮೌನವಾಗಿಲ್ಲ. ಅನ್ಯಾಯವಾದಾಗಲೆಲ್ಲಾ ಪ್ರತಿಯೊಂದು ವಿಷಯಕ್ಕೂ ಸ್ಪಂದಿಸ್ತಾ ಇರೋದಿಕ್ಕೆ ಈ ಘಟನೆಯೇ ಸಾಕ್ಷಿ. ಒಂದು ಸಂಘಟನೆ ಅಂದ್ಮೇಲೆ ಇದೆಲ್ಲಾ ಮಾಮೂಲು. ನಮ್ಮ ಯೂತ್ ಅಗ್ರೆಸ್ಸಿವ್ ಆಗಿದ್ದಾರೆ. ಅದಕ್ಕಾಗಿ ಈ ರೀತಯಾಗಿದೆ. ಎಲ್ಲವೂ ಸರಿ ಹೋಗಲಿದೆ ಎಂದಿದ್ದಾರೆ.

## ಜಾತ್ರಾ ಮಹೋತ್ಸವ ನಿಮಿತ್ಯ ಧರ್ಮಸಭೆಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ತಾಲೂಕಿನ ಮೈಸಲಾಗಾ ಗ್ರಾಮದಲ್ಲಿ ಶ್ರೀ ಮಹಾಲಕ್ಷ್ಮೀ 14ನೇ ಜಾತ್ರಾ ಮಹೋತ್ಸವ ನಿಮಿತ್ಯ ಜರುಗಿದ ಧರ್ಮಸಭೆಯನ್ನು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಜ್ಯೋತಿ ಬೆಳಗಿಸಿ ಉದ್ಘಾಟನೆ ಮಾಡಿದರು. ಈ ಸಂದರ್ಭದಲ್ಲಿ ಹಿರೇನಾಗಾಂವ ಪೂಜ್ಯಶ್ರೀ ಜಯಶಾಂತಲಿಂಗ ಮಹಾ ಸ್ವಾಮಿಗಳು, ತಡೋಳ ಪೂಜ್ಯಶ್ರೀ ರಾಜೇಶ್ವರ ಶಿವಾಚಾರ್ಯರು, ಖೇಳಗಿ ಪೂಜ್ಯಶ್ರೀ ಅಭಿನವ ಶಿವಲಿಂಗ ಮಹಾಸ್ವಾಮಿಗಳು,



ಮಲ್ಲಿನಾಥ ಹಿರೇಮಠ ಹಾರಕೂಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಣ್ಣತನ ಬಿಟ್ಟು ಹೃದಯ ವೈಶಾಲ್ಯತೆ ಮೆರೆಯಬೇಕು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮಿತವ್ಯಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರ ಕಳಕಳಿಯನ್ನು ಇಡೀ ದೇಶವೇ ಅರ್ಥ ಮಾಡಿಕೊಂಡಿದೆ. ಕಾಂಗ್ರೆಸ್ ಪಕ್ಷಕ್ಕೆ ಅರ್ಥವಾಗದಿರುವುದು ದುರದೃಷ್ಟಕರ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಕಟುವಾಗಿ ಟೀಕಿಸಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು; ನರೇಂದ್ರ ಮೋದಿ ಅವರ ಕಾಳಜಿ, ಕಳಕಳಿಯನ್ನು ಅರ್ಥೈಸಿಕೊಂಡು ಜವಾಬ್ದಾರಿಯುತವಾಗಿ ವರ್ತಿಸಿ ಸಾರ್ವಜನಿಕರಲ್ಲಿ ತಿಳಿವಳಿಕೆ ಮೂಡಿಸಬೇಕಿದ್ದ ಪ್ರತಿಪಕ್ಷವು ಸಣ್ಣತನದಿಂದ ಅಪಪ್ರಚಾರದಲ್ಲಿ ನಿರತವಾಗಿದೆ ಎಂದರು.

ಮಧ್ಯಪ್ರಾಚ್ಯದಲ್ಲಿ ಉಂಟಾಗಿರುವ ಬಿಕ್ಕಟ್ಟಿನಿಂದ ಜಗತ್ತಿನ ಎಲ್ಲಾ ದೇಶಗಳ ಮೇಲೆಯೂ ಪ್ರತಿಕೂಲಕರ ಪರಿಣಾಮ ಆಗಿದೆ. ತೈಲ ಉತ್ಪಾದಿಸದೇ ಕೇವಲ ಆಮದು ಮೇಲೆಯೇ ಅವಲಂಬಿತವಾಗಿರುವ ಭಾರತದ ಮೇಲೆ ಹೆಚ್ಚು ಹೊರೆ ಬೀಳುತ್ತದೆ. ಪ್ರಬಲ ರಾಷ್ಟ್ರವಾಗಿರುವ ಭಾರತ ಇಂತಹ ಅನೇಕ ಸವಾಲುಗಳನ್ನು ತಡೆದು ನಿಂತಿದೆ ಎಂದರು.

## ತೆಂಗಿನಕಾಯಿ ಹರಕೆ, ಅನ್ನಸಂತರ್ಪಣೆ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಜಿಲ್ಲಾ ಜೆಡಿಎಸ್ ವತಿಯಿಂದ ಇಂದು ಮಾಜಿ ಪ್ರಧಾನಿ ಹೆಚ್ ದೇವೇಗೌಡ ಅವರ ಹುಟ್ಟುಹಬ್ಬದ ಅಂಗವಾಗಿ ನಗರದ ಹೊರವಲಯದಲ್ಲಿರುವ ವೀರಾಂಜಿನೇಯ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ನೂರೊಂದು ತೆಂಗಿನಕಾಯಿಗಳನ್ನು ಒಡೆದು, ಬಳಿಕ ಕೇಕ್ ಕತ್ತರಿಸಿ ಅನ್ನಸಂತರ್ಪಣೆ ಮಾಡುವ ಮೂಲಕ ಅವರ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜೆಡಿಎಸ್ ಜಿಲ್ಲಾಧ್ಯಕ್ಷ ಮುಕ್ತಮುನಿಯಪ್ಪ ಅವರು, ಮಣ್ಣಿನ ಮಗ ದೇವೇಗೌಡರು ಮುಖ್ಯಮಂತ್ರಿ ಹಾಗೂ ಪ್ರಧಾನಿಯಾಗಿ ಅಪಾರ ಸೇವೆ ಸಲ್ಲಿಸಿದ್ದಾರೆ. ಅವರ ವ್ಯಕ್ತಿತ್ವ ಮತ್ತು ರಾಜಕೀಯ ಜೀವನ ಅನೇಕ ಮಂದಿಗೆ ಪ್ರೇರಣೆಯಾಗಿದೆ. ಅವರ ಮಾರ್ಗದರ್ಶನದಲ್ಲಿ ಬೆಳೆದ ಹಲವರು ಇಂದು ಉತ್ತಮ ರಾಜಕೀಯ ಸ್ಥಾನಮಾನವನ್ನು ಪಡೆದಿದ್ದಾರೆ ಎಂದು ಹೇಳಿದರು.

ಈ ವೇಳೆ ಜೆಡಿಎಸ್ ಗೌರವಾಧ್ಯಕ್ಷ ಕೆ.ಆರ್. ರೆಡ್ಡಿ ಅವರು ಮಾತನಾಡಿ, ದೇವೇಗೌಡರು ರಾಜ್ಯಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿ, ಅವರು ನಮ್ಮಂತಹ ಹಲವರಿಗೆ ಪ್ರೇರಣೆಯಾಗಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗೌರಿಬಿದನೂರು ನರಸಿಂಹಮೂರ್ತಿ, ಶಾಂತ ಮೂರ್ತಿ, ಬಂಡ್ಲು ಶ್ರೀನಿವಾಸ್, ಅಖಿಲ್ ರೆಡ್ಡಿ, ಸ್ಟುಡಿಯೋ ಮಂಜು, ಅಮರ್, ಜಫರುಲ್ಲಾ, ಸಾಧಿಕ್, ನಾಗರಾಜ್, ಜಾತವಾರ ಜಗದೀಶ್, ಲಕ್ಷ್ಮಿನರಸಪ್ಪ, ಮಾರೆಗೌಡ, ಪ್ರಭಾ ನಾರಾಯಣಗೌಡ, ಅರುಣ, ಸುನಿತ, ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.



### ಭಾರತ ರತ್ನ ಪ್ರಶಸ್ತಿಗೆ ಆಗ್ರಹ

ಇನ್ನೂ ಅವರು ದೇವೇಗೌಡರ ಸುದೀರ್ಘ ರಾಜಕೀಯ ಹಾಗೂ ಸಾಮಾಜಿಕ ಸೇವೆಯನ್ನು ಪರಿಗಣಿಸಿ ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕೆಂದು ಆಗ್ರಹಿಸಿದರು ಈ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಲಾಗುವುದು ಜೊತೆಗೆ, ದೇವೇಗೌಡರ ರಾಜ್ಯಸಭಾ ಸದಸ್ಯತ್ವ ಅವಧಿ ಮುಕ್ತಾಯವಾಗುತ್ತಿರುವ ಹಿನ್ನೆಲೆಯಲ್ಲಿ, ಅವರನ್ನು ಮತ್ತೊಮ್ಮೆ ರಾಜ್ಯಸಭಾ ಸದಸ್ಯರಾಗಿ ಆಯ್ಕೆ ಮಾಡಬೇಕೆಂದು ಒತ್ತಾಯಿಸಿದರು.

## ನಗರದ ಸಮಗ್ರ ಅಭಿವೃದ್ಧಿಗೆ ಬದ್ಧ: ಸಚಿವ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನಗರದ ಸಮಗ್ರ ಅಭಿವೃದ್ಧಿಗಾಗಿ ನೀಲಿನಕ್ಷೆ ತಯಾರಿಸಲಾಗಿದ್ದು, ವರ್ತಮಾನ ಹಾಗೂ ಭವಿಷ್ಯದ ಜನರನ್ನು ಗುರಿಯಾಗಿಸಿಕೊಂಡು ಅವರಿಗೆ ಅನುಕೂಲವಾಗುವಂತೆ ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಸೋಮವಾರ ನಗರದ ಹುಮನಾಬಾದ ರಿಂಗ್ ರಸ್ತೆ ಸರ್ಕಲ್‌ನಲ್ಲಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ ಅನುದಾನದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿಯ ಮುಂಭಾಗ ನವೀಕರಣ, ವಿವಿಧ ವಾರ್ಡಗಳಲ್ಲಿ ಉದ್ಯಾನವನ, ವೃತ್ತಗಳ ಅಭಿವೃದ್ಧಿ ಹಾಗೂ ಸ್ಮಶಾನ ಅಭಿವೃದ್ಧಿ ಕಾಮಗಾರಿ ಒಟ್ಟು ರೂ. 11.99 ಕೋಟಿ ವೆಚ್ಚದ 40 ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು ನೆರವೇರಿಸಿ ಅವರು ಮಾತನಾಡಿದರು.



### ಪ್ರತಿಯಾಗಿ ರಾಜ್ಯಕ್ಕೆ ಸಿಗುತ್ತಿರುವುದು ಶೂನ್ಯ

ಅಭಿವೃದ್ಧಿ ಕಾರ್ಯಗಳ ನಡುವೆಯೂ ಕೇಂದ್ರ ಸರ್ಕಾರದಕೆ ರಾಜ್ಯದಿಂದ ವಾರ್ಷಿಕ ರೂ. 6.50 ಲಕ್ಷ ಕೋಟಿ ತೆರಿಗೆ ಹಣ ಕೇಂದ್ರಕ್ಕೆ ಹೋಗುತ್ತಿದ್ದರೂ, ಪ್ರತಿಯಾಗಿ ರಾಜ್ಯಕ್ಕೆ ಸಿಗುತ್ತಿರುವುದು ಶೂನ್ಯ ಎಂದರು. ಜಲ್ ಜೀವನ್ ಮಿಷನ್ ಯೋಜನೆಗೆ ಬರಬೇಕಿದ್ದ ರೂ. 15,000 ಕೋಟಿ ಅನುದಾನವನ್ನು ಕೇಂದ್ರ ಬಿಡುಗಡೆ ಮಾಡದಿದ್ದರೂ, ಸಾರ್ವಜನಿಕ ಹಿತದೃಷ್ಟಿಯಿಂದ ರಾಜ್ಯ ಸರ್ಕಾರವೇ ತನ್ನ ಸ್ವಂತ ಹಣದಿಂದ ಕಾಮಗಾರಿ ಮುಂದುವರೆಸಿದೆ ಎಂದರು.

ನಗರದ ಸೌಂದರ್ಯೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, 17 ವಾರ್ಡ್‌ಗಳ ಉದ್ಯಾನವನಗಳು 3.16 ಕೋಟಿ ರೂ. ಮತ್ತು 4 ಪ್ರಮುಖ ವೃತ್ತಗಳು 5 ಕೋಟಿ, ರೂ,ಗಳಲ್ಲಿ ಹೊಸ ರೂಪ ಪಡೆಯಲಿವೆ. ಇದರೊಂದಿಗೆ ಸಾರ್ವಜನಿಕರ ದೀರ್ಘಕಾಲದ ಬೇಡಿಕೆಯಾಗಿದ್ದ 18 ರುದ್ರಭೂಮಿಗಳ ಸುಧಾರಣೆಗೆ ರೂ. 3.58 ಕೋಟಿ, 25 ಲಕ್ಷ ರೂ. ಗಳಲ್ಲಿ ಕುಡಾ ಕಚೇರಿ ನವೀಕರಣ ವಿನಿಯೋಗಿಸಲಾಗುತ್ತಿದೆ. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಅಪ್ಪಾ ಕೆರೆ ಹಾಗೂ ಕಲಬುರಗಿ ಕೋಟೆಯನ್ನೂ ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

## ರಾಜ್ಯ ಸರ್ಕಾರದ ಸಾಧನಾ ಸಮಾವೇಶವೋ, ಸಾಲದ ದಾಖಲೆ ಸಮಾವೇಶವೋ: ಬಸವರಾಜ ಬೊಮ್ಮಾಯಿ

# ಕಕ ಭಾಗದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಅಗತ್ಯ ಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**




ಪರಿಸರ ಸಮತೋಲನ ಕಾಪಾಡುವ ನಿಟ್ಟಿನಲ್ಲಿ ಪ್ರಾಣಿ, ಪಕ್ಷಿ, ಸಸ್ಯ, ಕೀಟ ಪ್ರಬೇಧಗಳ ಸಂರಕ್ಷಣೆ ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಕಲಬುರಗಿ ಅತ್ಯಾಕರ್ಷಕ ಮೃಗಾಲಯವು ವನ್ಯಜೀವಿಗಳ ಮೇಲಿನ ಕಾಳಜಿ ಹೆಚ್ಚಿಸುವುದರ ಜೊತೆಗೆ ಪ್ರದೇಶದ ಪರಿಸರ ಪ್ರೇಮಿ, ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಹಾಗೂ ಪ್ರವಾಸಿ ತಾಣವಾಗಿ ಇದು ರೂಪಗೊಳ್ಳಲಿದೆ ಎಂದು ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಜಿಲ್ಲಾಡಳಿತ, ಅರಣ್ಯ ಇಲಾಖೆ, ಕೆ.ಕೆ.ಆರ್.ಡಿ.ಬಿ. ಮಂಡಳಿ ಹಾಗೂ ಮೂರ್ತಿ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಸೋಮವಾರ ಚಿತ್ತಾಪುರ ತಾಲೂಕಿನ ಮಾಡಬೂಳ ಗ್ರಾಮದಲ್ಲಿ ಸುಮಾರು 43 ಎಕರೆ ಪ್ರದೇಶದ ವಿಸ್ತೀರ್ಣದಲ್ಲಿ 35 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿರುವ ಕಲಬುರಗಿ ಮೃಗಾಲಯವನ್ನು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಉದ್ಘಾಟಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ನಮ್ಮ ಸರ್ಕಾರ ಬಂದ ಮೇಲೆ ನೆನೆಗುದ್ದಿಗೆ ಬಿದಿದ್ದ ಈ ಕಾರ್ಯಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅವರ ವಿಶೇಷ ಆಸಕ್ತಿ ವಹಿಸಿ ಚುರುಕುಗೊಳಿಸಿದ ಪರಿಣಾಮ ಇಂದಿಲ್ಲಿ ಕಲ್ಯಾಣ ಕರ್ನಾಟಕ ಭಾಗದ ಹಂಪಿ ಹೊರತುಪಡಿಸಿದರೆ ಎರಡನೇ ಮೃಗಾಲಯ ಪ್ರದೇಶಕ್ಕೆ ಲೋಕಾರ್ಪಣೆ ಮಾಡಲಾಗಿದದ್ದು, ಎಲ್ಲಾ ವಯೋಮಾನದವರಿಗೆ ಜನಾಕರ್ಣನೆಯಾಗಲಿದೆ ಎಂದರು. ಕೆ.ಕೆ.ಆರ್.ಡಿ.ಬಿ. ಮಂಡಳಿಯಿಂದ 29 ಕೋಟಿ ರೂ., ಮೃಗಾಲಯ ಪ್ರಾಧಿಕಾರದಿಂದ 6 ಕೋಟಿ ರೂ. ಹಾಗೂ ಇನ್ಫೋಸಿಸ್ ಸಂಸ್ಥೆಯ 3.20 ಕೋಟಿ ರೂ. ನೆರವಿನಿಂದ ಇಂದಿಲ್ಲಿ ಸುಂದರ ಮೃಗಾಲಯ ಸ್ಥಾಪನೆಯಾಗಿದೆ. ಕಲಬುರಗಿ ಮೃಗಾಲಯ ರಾಜ್ಯದ 9ನೇ ಮೃಗಾಲಯವಾಗಿದ್ದು, ದೇಶದಲ್ಲಿ ಮೃಗಾಲಯ ಸಂಖ್ಯೆಯಲ್ಲಿ ರಾಜ್ಯ ಮುಂಚೂಣಿಯಲ್ಲಿದೆ ಎಂದ ಅವರು, 2022ರ ಪ್ರಾಣಿ ಜನಗಣತಿ ಪ್ರಕಾರ ರಾಜ್ಯದಲ್ಲಿ 6,395 ಆನೆ, 563 ಹುಲಿಗಳಿವೆ ಎಂದರು.

ನೂತನ ಮೃಗಾಲಯದಲ್ಲಿ 56 ವಿವಿಧ ಪ್ರಭೇದದ ಪ್ರಾಣಿ-ಪಕ್ಷಿಗಳು ವೀಕ್ಷಣೆಗೆ ಲಭ್ಯ ಇರಲಿವೆ. ಎರಡು ಸಿಂಹಗಳನ್ನು ಬನ್ನೇರುಘಟ್ಟದಿಂದ ಈಗಾಗಲೇ ತರಲಾಗಿದೆ. ಮೊಸಳೆ, ನರಿ, ಇತ್ಯಾದಿ ಪ್ರಾಣಿಗಳು ನೋಡಲು ಸಿಗುತ್ತಿವೆ. ಮುಂಬರುವ ದಿನಗಳಲ್ಲಿ ಬೇರೆ ಬೇರೆ ಪ್ರಭೇದ ಪ್ರಾಣಿ, ಪಕ್ಷಿಗಳನ್ನು ತರಿಸಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ಸಮೀಪದ ಚಿಂಚೋಳಿ ವನ್ಯಜೀವಿ ಧಾಮ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುವುದು. ಈಗಾಗಲೆ ಅಲ್ಲಿ ಬೋಟಿಂಗ್, ಸಫಾರಿಗೆ ಚಾಲನೆ ನೀಡಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಾಗಿದೆ ಎಂದರು.

**ಕಕ ಭಾಗದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಅಗತ್ಯ ಕ್ರಮ:** ಕಲ್ಯಾಣ ಕರ್ನಾಟಕ ಭಾಗದಲಭ್ಯ ಹಸಿರು ಹೊದಿಕೆ ಕೊರತೆ ಇದೆ. ಕಲಬುರಗಿ, ಬೀದರ ಯಾದಗಿರಿ, ರಾಯಚೂರು ಹೀಗೆ ಜಿಲ್ಲೆಗಳಲ್ಲಿ ಶೇ.5ಕ್ಕಿಂತ ಕಡಿಮೆ ಅರಣ್ಯ ಪ್ರದೇಶ ಹೊಂದಿದೆ. ಹೀಗಾಗಿ, ಹವಾಮಾನದಲ್ಲಿ ವೈಪರಿತ್ಯಗಳಾಗುತ್ತಿದೆ. ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಅವಶ್ಯಕತೆ ಇದೆ. ಈ ಬಗ್ಗೆ ಕೆ.ಕೆ. ಆರ್.ಡಿ.ಬಿ ಸಭೆಯಲ್ಲಿ ಚರ್ಚಿಸಿ ಅಗತ್ಯ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಕಳೆದ ಮೂರು ವರ್ಷದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 11 ಲಕ್ಷ ಸಸಿ ನೆಡಲಾಗಿದೆ. ಅವುಗಳನ್ನು ಸುಮಾರು ಶೇ.80 ನೆಟ್ಟ ಸಸಿಗಳು ಬದುಕುಳಿದಿವೆ. ಈ ತರಹದ ಸಸಿಗಳಿಗೆ ಅಗತ್ಯ ಪ್ರಮಾಣ ನೀರು ಒದಗಿಸಿ ಐದು ವರ್ಷಗಳ ಕಾಲ ಸಂರಕ್ಷಣೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಹೇಳಿದರು. ಅರಣ್ಯ ಇಲಾಖೆಯಲ್ಲಿ ಪಶುವೈದ್ಯಕೀಯ ಸಿಬ್ಬಂದಿ ಹೆಚ್ಚಿಸಲು ಸಿಎಂ ಅವರು ಅರಣ್ಯ ಇಲಾಖೆಗೆ ಅನುಮತಿ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಅರಣ್ಯ ಇಲಾಖೆಗೆ ಅಗತ್ಯವಿರುವ ಸಿಬ್ಬಂದಿ ನೇಮಕಾತಿಗೆ ಅಗತ್ಯ ಕ್ರಮವಹಿಸಲಾಗುವುದು ಎಂದು ಸಚಿವರು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

**ಅರಣ್ಯ ಭೂಮಿ ಒತ್ತುವರಿ ತೆರವಿಗೆ ಕ್ರಮ:** ರಾಜ್ಯದ ಅರಣ್ಯ ಭೂಮಿ ತೆರವಿಗೆ ಕ್ರಮವಹಿಸಲಾಗಿದ್ದು ರಾಜ್ಯದಲ್ಲಿ ಈಗಾಗಲೇ 10,000 ಕೋಟಿ ರೂ. ಮೌಲ್ಯದ ಬೆಂಗಳೂರು ಒಂದರಲ್ಲೇ 250 ಎಕರೆ ಅರಣ್ಯ ಭೂಮಿ ತೆರವು ಮಾಡಲಾಗಿದೆ. ಸುಮಾರು 1 ಕೋಟಿ ಎಕರೆ ಅರಣ್ಯ, ಕಂದಾಯ ಒತ್ತುವರಿ ಜಮೀನು ತೆರವು ಹಂತ ಹಂತವಾಗಿ ನಡೆಯಲಿದೆ. ಈ ವಿಚಾರದಲ್ಲಿ ಎಸ್.ಐ.ಟಿ. ರಚಿಸುವಂತೆ ಸುಪ್ರೀಂ ಕೋರ್ಟ್ ಸೂಚನೆ ನೀಡಿದ್ದು, ಅದರಂತೆ ಕ್ರಮ ವಹಿಸಲಾಗುತ್ತದೆ ಎಂದು ಖಂಡ್ರೆ ಹೇಳಿದರು.

**ಬೆಳಿಗ್ಗೆ 9.30 ರಿಂದ ಸಂಜೆ 5.30 ವೀಕ್ಷಣೆಗೆ ಲಭ್ಯ:** ಮೃಗಾಲಯವು ಬೆಳಿಗ್ಗೆ 9.30 ರಿಂದ ಸಂಜೆ 5.30 ವರೆಗೆ ತೆರೆಯಲಿದ್ದು, ಪ್ರಾಣಿ-ಪಕ್ಷಿಗಳ ವೀಕ್ಷಣೆಗೆ ಲಭ್ಯವಾಗಿರಲಿದೆ. ಪ್ರತಿ ಮಂಗಳವಾರ ರಜೆ ಇರಲಿದೆ. 12 ವರ್ಷ ಮೇಲ್ಪಟ್ಟವರಿಗೆ 75 ರೂ., 12 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ 40 ರೂ. ಹಾಗೂ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ 25 ರೂ. ಟಿಕೆಟ್ ದರ ನಿಗದಿ ಮಾಡಲಾಗಿದೆ. ಮೃಗಾಲಯದ ಟಿಕೆಟ್ ಕೌಂಟರ್‌ನಲ್ಲಿಯೆ ಟಿಕೆಟ್ ಪಡೆದು ವೀಕ್ಷಣೆ ಮಾಡಬಹುದಾಗಿದೆ.

ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ. ಶರಣಪ್ರಕಾಶ ಪಾಟೀಲ, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಕೆ.ರಂಗಸ್ವಾಮಿ, ಶಾಸಕರಾದ ಅಲ್ಲಮಪ್ರಭು ಪಾಟೀಲ, ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಬಿ.ಜಿ.ಪಾಟೀಲ, ಪ್ರವೀಣ ಪಾಟೀಲ, ಕೆ.ಕೆ. ಆರ್.ಟಿ.ಸಿ. ಅಧ್ಯಕ್ಷ ಅರುಣಕುಮಾರ ಪಾಟೀಲ, ಕಲಬುರಗಿ ಕಾಡಾ ಅಧ್ಯಕ್ಷ ಡಾ.ಎಂ.ಎ.ರಶೀದ್, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಶರಣಕುಮಾರ ಮೋದಿ, ಅರಣ್ಯ ಪಡೆ ಮುಖ್ಯಸ್ಥರು ಮತ್ತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ.ಮೀನಾಕ್ಷಿ ನೇಗಿ, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಕುಮಾರ ಪುಷ್ಕರ್, ರವಿಶಂಕರ ಎಸ್.ಎಸ್., ಕಲಬುರಗಿ ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ವಸಂತ ರೆಡ್ಡಿ, ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನುವಾಸುಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಕಲಬುರಗಿ ಮಹಾನಗರ ಪಾಲಿಕೆ ಡಿ.ಸಿ.ಎಫ್ ಸುಮಿತ್ ಪಾಟೀಲ, ಇನ್ಫೋಸಿಸ್ ಸಂಸ್ಥೆಯ ಪ್ರತಿನಿಧಿ ಪ್ರಿಯಾ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಾದ ಬಸವರಾಜ ಎಸ್. ಡಾಂಗೆ, ಸುನೀಲಕುಮಾರ್, ವಲಯ ಅರಣ್ಯಾಧಿಕಾರಿಗಳಾದ ನಾಗೇಶ, ವಿಜಯ ಕುಮಾರ ಸೇರಿದಂತೆ ಅರಣ್ಯ ಇಲಾಖೆಯ ಅನೇಕ ಅಧಿಕಾರಿ-ಸಿಬ್ಬಂದಿಗಳಿದ್ದರು.

## ಜೆಸ್ಕಾಂ ಇಲಾಖೆಯ ಅಧಿಕಾರಿಗಳ ಧೋರಣೆಗೆ ಬೇಸತ್ತ ಜನತೆ-ಆಕ್ರೋಶ

ಹುಮನಾಬಾದ್ ತಾಲೂಕಿನ ಜನತೆ ಇಂದು ಮೂಲಭೂತ ಸೌಲಭ್ಯಗಳ ಸಮಸ್ಯೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ಅದರಲ್ಲೂ ವಿದ್ಯುತ್ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಜೆಸ್ಕಾಂ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ ಸಾರ್ವಜನಿಕರ ಅಕ್ರೋಶಕ್ಕೆ ಕಾರಣವಾಗಿದೆ. ರೈತರು, ವ್ಯಾಪಾರಿಗಳು, ವಿದ್ಯಾರ್ಥಿಗಳು ಹಾಗೂ ಸಾಮಾನ್ಯ ನಾಗರಿಕರು ನಿರಂತರ ವಿದ್ಯುತ್ ವ್ಯತ್ಯಯದಿಂದ ತೇ-ಊಂದರೆ ಅನುಭವಿಸುತ್ತಿದ್ದರೂ ಅಧಿಕಾರಿಗಳು ಮಾತ್ರ ಜನರ ಸಮಸ್ಯೆಗೆ ಸ್ಪಂದಿಸದಿರುವುದು ವಿಷಾದನೀಯ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಗ್ರಾಮೀಣ ಭಾಗಗಳಲ್ಲಿ ಗಂಟೆಗಟ್ಟಲೆ ವಿದ್ಯುತ್ ಕಡಿತವಾಗುವುದು ಸಾಮಾನ್ಯ ಸಂಗತಿಯಾಗಿ ಪರಿಣಮಿಸಿದೆ. ಅನೇಕ ಕಡೆ ಟ್ರಾನ್ಸ್‌ಫಾರ್ಮರ್ ದೋಷಗಳು, ಲೋ ವೋಲ್ಟೇಜ್ ಸಮಸ್ಯೆಗಳು ಹಾಗೂ ಸುಟ್ಟ ವಿದ್ಯುತ್ ಉಪಕರಣಗಳ ಬಗ್ಗೆ ಜನರು ಹಲವು ಬಾರಿ ಮನವಿ ಸಲ್ಲಿಸಿದ್ದರೂ ಸಮರ್ಪಕ ಕ್ರಮ ಕೈಗೊಳ್ಳಲಾಗುತ್ತಿಲ್ಲ ಎಂಬ ಆರೋಪ ಕೇಳಿಬರುತ್ತಿದೆ. ರೈತರು ಬೆಳೆಗಳಿಗೆ ನೀರು ಹರಿಸಲು ರಾತ್ರಿಯಿಡೀ ಕಾದು ಕುಳಿತುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ.

ವಿದ್ಯುತ್ ಬಿಲ್ ಪಾವತಿಯಲ್ಲಿ ಜನತೆ ವಿಳಂಬ ಮಾಡಿದರೆ ಇಲಾಖೆ ಕಠಿಣ ಕ್ರಮ ಕೈಗೊಳ್ಳುತ್ತದೆ. ಆದರೆ ಜನರ ಸಮಸ್ಯೆಗಳಿಗೆ ಪರಿಹಾರ ನೀಡುವಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಏಕೆ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ. ಹಲವೆಡೆ ಸಿಬ್ಬಂದಿಯ ವರ್ತನೆ ಕೂಡ ಜನರಿಗೆ ನೋವುಂಟು ಮಾಡುತ್ತಿದೆ. ಜನಪ್ರತಿನಿಧಿಗಳು ಹಾಗೂ ಹಿರಿಯ ಅಧಿಕಾರಿಗಳು ಈ ಕುರಿತು ಗಂಭೀರವಾಗಿ ಗಮನ ಹರಿಸಿ ಸಮಸ್ಯೆ ಪರಿಹರಿಸಬೇಕಾಗಿದೆ. ವಿದ್ಯುತ್ ಎಂಬುದು ಕೇವಲ ಸೌಲಭ್ಯವಲ್ಲ, ಅದು ಜನರ ದೈನಂದಿನ ಬದುಕಿನ ಅವಿಭಾಜ್ಯ ಅಂಗವಾಗಿದೆ. ವಿದ್ಯಾರ್ಥಿಗಳ ಶಿಕ್ಷಣ, ರೈತರ ಕೃಷಿ ಚಟುವಟಿಕೆ, ಸಣ್ಣ ವ್ಯಾಪಾರಗಳ ಬದುಕು ಎಲ್ಲವೂ ವಿದ್ಯುತ್ ಮೇಲೆಯೇ ಅವಲಂಬಿತವಾಗಿದೆ. ಆದ್ದರಿಂದ ಜೆಸ್ಕಾಂ ಇಲಾಖೆ ಜನಸೇವೆಯ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ದೋಷಗಳನ್ನು ಶೀಘ್ರ ಪರಿಹರಿಸುವ ಕೆಲಸ ನಡೆಯಬೇಕು. ಹುಮನಾಬಾದ್ ಜನರ ಸಹನೆಯನ್ನು ಪರೀಕ್ಷಿಸುವ ಬದಲು, ಜೆಸ್ಕಾಂ ಅಧಿಕಾರಿಗಳು ಜನರ ವಿಶ್ವಾಸ ಗೆಲ್ಲುವ ಕಾರ್ಯ ಮಾಡಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಜನರ ಅಕ್ರೋಶ ಇನ್ನಷ್ಟು ಹೆಚ್ಚುವ ಸಾಧ್ಯತೆ ಇದೆ.

## ಬೃಹತ್ ಉದ್ಯೋಗ ಮೇಳ



**ಹುಣಸೂರು:** ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್.ಪಿ.ಮಂಜುನಾಥ್ ರವರ 59ನೇ ಹುಟ್ಟು ಹಬ್ಬದ ಅಂಗವಾಗಿ ಸ್ನೇಹಜೀವಿ ಬಳಗದ ಸಹಯೋಗದಲ್ಲಿ ಹುಣಸೂರಿನ ಅಂಬೇಡ್ಕರ್ ಭವನದಲ್ಲಿ ಮೇ.23ರ ಶನಿವಾರ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ವಿಷನ್ ಅಸ್ತ್ರ ಇ.ವಿ.ಅಕಾಡೆಮಿ ಸಿ.ಇ.ಒ. ನಿಖಿಲ್ ಜೈನ್ ಸಿ.ಎಸ್. ತಿಳಿಸಿದರು. ನಗರದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕರೆಯಲಾಗಿದೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಮಾಜಿ ಶಾಸಕ ಎಚ್.ಪಿ.ಮಂಜುನಾಥ್ ಹುಟ್ಟು ಹಬ್ಬದ ಅಂಗವಾಗಿ ಆಯೋಜಿಸಿರುವ ಉದ್ಯೋಗ ಮೇಳ ಕುರಿತ ಪೋಸ್ಟರ್‌ನ್ನು ಉದ್ಯೋಗ ಮೇಳದ ಕುರಿತು ಯದುಜತವರ್ಧನ್, ನಿಖಿಲ್ ಜೈನ್, ಆನಂದ್ ಬಿಡುಗಡೆಗೊಳಿಸಿದರು. ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮೋ, ಪದವಿಯ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಉದ್ಯೋಗ ಮೇಳ ಆಯೋಜಿಸಲಾಗಿದ್ದು. ಹುಣಸೂರು, ಕೆ.ಆರ್.ನಗರ, ಎಚ್.ಡಿ.ಕೋಟೆ, ಪಿರಿಯಪಟ್ಟಣ ತಾಲೂಕುಗಳ ಪುರುಷರು 18-30, ಮಹಿಳೆಯರು 18-25 ವಯೋಮಿತಿಯ ಉದ್ಯೋಗಾಕಾಂಕ್ಷಿಗಳು ಮೇಳದಲ್ಲಿ ಭಾಗವಹಿಸಬಹುದಾಗಿದೆ. ಮೈಸೂರಿನ ಕಡಕೊಳದ ಟಿ.ವಿ.ಎಸ್. ಕಂಪನಿಯಲ್ಲಿ ಉದ್ಯೋಗ ಕಲ್ಪಿಸಲಾಗುವುದು. ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ. ಐಟಿಐ ಅಭ್ಯರ್ಥಿಗಳಿಗೆ 17.500-19 ಸಾವಿರ ಹಾಗೂ ಡಿಪ್ಲೊಮೋ ಮತ್ತು ಡಿಗ್ರಿ ಪಾಸಾದವರಿಗೆ 19-20,500ರೂ ಸಂಬಳ. ಊಟದ ವ್ಯವಸ್ಥೆ. ಪಿ.ಎಫ್, ಇ.ಎಸ್.ಐ. ಸೌಲಭ್ಯ ಸಿಗಲಿದ್ದು. ಆಸಕ್ತರು ಮೇಳದಲ್ಲಿ ಬಾಗವಹಿಸುವಂತೆ ಮನವಿ ಮಾಡಿದರು.

## ಎಲ್ಲೆಂದರಲ್ಲಿ ತ್ಯಾಜ್ಯ ಎಸೆದರೆ ಕಾನೂನು ಕ್ರಮ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**




ಮಾಂಸ ಮಾರಾಟದ ವರ್ತಕರು-ಉದ್ದಿಮೆದಾರರು ಇತರೆ ತ್ಯಾಜ್ಯವನ್ನು ಬೀದಿಯಲ್ಲಿ ಅಥವಾ ವರಾಂಡದಲ್ಲಿ ಎಸೆಯುವುದು ಹಾಗೂ ಹಾಕುವುದನ್ನು ಮಹಾನಗರ ಪಾಲಿಕೆ ನಿಷೇಧಿಸಿದ್ದು, ಆದಾಗ್ಯೂ ಎಲ್ಲೆಂದರಲ್ಲಿ ತ್ಯಾಜ್ಯ ಎಸೆಯುವುದು ಕಂಡು ಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪಾಲಿಕೆ ಪರಿಸರ ವಿಭಾಗದ ಕಾರ್ಯಪಾಲಕ ಅಭಿಯಂತರರು ಎಚ್ಚರಿಕೆ ನೀಡಿದ್ದಾರೆ.

ತ್ಯಾಜ್ಯ ಉತ್ಪಾದಿಸುವ ಪ್ರತಿಯೊಬ್ಬ ನಾಗರೀಕರು, ಉದ್ದಿಮೆದಾರರು ಎಲ್ಲೆಂದರಲ್ಲಿ ತ್ಯಾಜ್ಯ ವಿಸರ್ಜಿಸದೆ ತ್ಯಾಜ್ಯ ವಿಂಗಡಣೆ ಮಾಡಬೇಕು. ವಿಂಗಡಣೆ ಮಾಡಿದ ತ್ಯಾಜ್ಯವನ್ನು ಮಹಾನಗರಪಾಲಿಕೆ ದಿನನಿತ್ಯ ಕಳುಹಿಸಿಕೊಡುವ ತ್ಯಾಜ್ಯ ವಾಹನಕ್ಕೆ ಹಾಕಬೇಕು. ಆದರೆ ಕಳೆದ ಕೆಲ ದಿನಗಳಿಂದ ತ್ಯಾಜ್ಯವನ್ನು ಮಹಾನಗರಪಾಲಿಕೆಯ ವಾಹನಕ್ಕೆ ವಿಲೇವಾರಿ ಮಾಡದೇ ತ್ಯಾಜ್ಯವನ್ನು ರಸ್ತೆ ಬದಿ, ಖಾಲಿ ನಿವೇಶನ, ಸಾರ್ವಜನಿಕ ಇತರೆ ಸ್ಥಳಗಳಲ್ಲಿ ಸಾರ್ವಜನಿಕರು ಎಸೆಯುತ್ತಿದ್ದಾರೆ. ಮಾಂಸ ಮಾರಾಟದ ವರ್ತಕರು ಮಾಂಸದ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿಗೊಳಿಸದೆ ಮಾಂಸದ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯುತ್ತಿದ್ದಾರೆ ಹಾಗಾಗಿ ಮಟನ್ ಮತ್ತು ಚಿಕನ್ ಉದ್ದಿಮೆದಾರರು ತಮ್ಮ ಬಳಿ ಸಂಗ್ರಹವಾಗುವ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಹಾಕದೇ ಹಾಗೂ ಎಸೆಯದೇ ಪಾಲಿಕೆಯ ವಾಹನಕ್ಕೆ ಹಾಕುವುದು ಕಡ್ಡಾಯ. ಒಂದು ವೇಳೆ ತಪ್ಪಿದಲ್ಲಿ ದಂಡ ವಿಧಿಸಿ. ಕರ್ನಾಟಕ ಪೌರ ಅಧಿನಿಯಮ 1976 ರೀತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪಾಲಿಕೆ ಪರಿಸರ ವಿಭಾಗದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

## ಕಲೆಯೇ ನಮ್ಮ ಸಂಸ್ಕøಯ ಕನ್ನಡಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಜಾನಪದ ಸಂಗೀತವು ಸಮಾಜದ ಬದುಕಿನ ಪ್ರತಿಬಿಂಬವಾಗಿದ್ದು, ನಮ್ಮ ಸಂಸ್ಕೃತಿ, ಪರಂಪರೆ ಹಾಗೂ ಗ್ರಾಮೀಣ ಜೀವನದ ನೈಜ ಚಿತ್ರಣವನ್ನು ಜನತೆಗೆ ಪರಿಚಯಿಸುವ ಶಕ್ತಿಯುತ ಮಾಧ್ಯಮವಾಗಿದೆ ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷರಾದ ಡಾ.ಜಗನ್ನಾಥ್ ಹೆಬ್ಬಾಳೆ ಅವರು ಹೇಳಿದರು.


ಸೋಮವಾರ ಬೆಳಿಗ್ಗೆ ಬೀದರ್ ನಗರದ ಸರಸ್ವತಿ ಶಾಲೆ ಹತ್ತಿರದಲ್ಲಿರುವ ಸವಿತಾ ಸಮುದಾಯ ಭವನದಲ್ಲಿ ನಡೆದ ಜೈ ಭವಾನಿ ರಂಗಭೂಮಿ ಕಲಾವಿದರ ಸಂಘ(ರಿ) ಚಿಟ್ಟಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರದಲ್ಲಿ 2025-26ನೇ ಸಾಲಿನ ಸಂಘ ಸಂಸ್ಥೆಗಳ ಧನ ಸಹಾಯದ ವಿಶೇಷ ಘಟಕ ಯೋಜನೆಯಡಿಯಲ್ಲಿ ಹಮ್ಮಿಕೊಂಡಿದ್ದ "ಜಿಲ್ಲಾ ಮಟ್ಟದ ರಂಗಭೂಮಿ ಕಲಾವಿದರ ಸಾಹಿತ್ಯ ಸಾಂಸ್ಕೃತಿಕ ಜಾನಪದ ಸಂಭ್ರಮ" ಕಾರ್ಯಕ್ರಮವು ಡೊಳ್ಳು ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು ಮಾತನಾಡುತ್ತಾ, ಕಲಾವಿದರು ವೇದಿಕೆಗೆ ಬಂದಾಗ ತಮ್ಮ ಕಲಾತಂಡದ ಉಡುಪುಗಳನ್ನು ಆಕರ್ಷಕವಾಗಿ ಹಾಗೂ ಸಂಪ್ರದಾಯಬದ್ಧವಾಗಿ ಧರಿಸಬೇಕು, ಕಲಾವಿದರೊಳಗಿನ ಭಿನ್ನಾಭಿಪ್ರಾಯ, ಟೀಕೆ ಟಿಪ್ಪಣಿಗಳನ್ನು ಬಿಟ್ಟು ಎಲ್ಲರೂ ಒಗ್ಗಟ್ಟಿನಿಂದ ಸಾಗಬೇಕೆಂದು ಸಲಹೆ ನೀಡಿದರು.

ನಮ್ಮೊಳಗಿನ ಏಕತೆಯೇ ಕಲೆಯನ್ನು ಉಳಿಸುವ ದೊಡ್ಡ ಶಕ್ತಿ. ಪರಸ್ಪರ ಪ್ರೋತ್ಸಾಹ ನೀಡಿದಾಗ ಮಾತ್ರ ಜಾನಪದ ಕಲೆಗಳು ಇನ್ನಷ್ಟು ಬೆಳೆಯುತ್ತವೆ ಎಂದು ಹೇಳಿದರು.

## ವನ್ಯಜೀವಿಗಳಿಂದ ನಿರ್ದಿಷ್ಟ ಅಂತರ ಕಾಯ್ದುಕೊಳ್ಳಲು ಆದೇಶ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಕೊಡಗು ಜಿಲ್ಲೆ ದುಬಾರೆ ಶಿಬಿರದಲ್ಲಿ ಎರಡು ಸಾಕಾನೆಗಳ ಕಾದಾಟದ ವೇಳೆ ಅನಿರೀಕ್ಷಿತವಾಗಿ ಆಯ ತಪ್ಪಿ ಬಿದ್ದ ಆನೆಯ ಕೆಳಗೆ ಸಿಲುಕಿ ಮಹಿಳೆಯೊಬ್ಬರು ಮೃತಪಟ್ಟಿದ್ದು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸಂತಾಪ ಸೂಚಿಸಿದ್ದಾರೆ.

ಇದು ಅತ್ಯಂತ ಆಘಾತಕರ ಘಟನೆ, ಆನೆಗಳನ್ನು ಸ್ನಾನ ಮಾಡಿಸುವಾಗ ನದಿಯ ಬಳಿ ನಿಂತು ನೋಡುತ್ತಿದ್ದ ತಮಿಳುನಾಡಿನ ಪ್ರವಾಸಿ ಮಹಿಳೆ ತುಳಸಿ (33) ಈ ಅಪಘಾತದಂತಹ ಘಟನೆಯಲ್ಲಿ ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಮಗೆ ತಿಳಿಸಿದ್ದು, ಇದು ಅತ್ಯಂತ ನೋವಿನ ಸಂಗತಿ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ, ಈ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದವರಿಗೆ ದೇವರು ನೀಡಲಿ ಎಂದು ಸಚಿವರು ಪ್ರಾರ್ಥಿಸಿದ್ದಾರೆ.

ಸಾಕಾನೆಗಳಾದ ಕಂಚನ್ ಮತ್ತು ಮಾರ್ತಾಂಡ ಆನೆಗಳು ಸ್ನಾನ ಮಾಡಿಸುತ್ತಿದ್ದ ವೇಳೆ ಪರಸ್ಪರ ಕಾದಾಟ ನಡೆಸಿದ್ದು, ಮಾವುತರು ನಿಯಂತ್ರಿಸುತ್ತಿದ್ದರೂ ಮುನ್ನುಗ್ಗಿದ ಕಂಜನ್ ಆನೆ, ಮಾರ್ತಾಂಡ ಆನೆಗೆ ಗುದ್ದಿದ್ದು, ಮಾರ್ತಾಂಡ ಆಯ ತಪ್ಪಿ ಕೆಳಗೆ ಬಿದ್ದಾಗ, ಈ ಮಹಿಳೆ ಆನೆಯ ಕೆಳಗೆ ಸಿಲುಕಿ ಮೃತಪಟ್ಟಿದ್ದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಇದು ಯಾರೂ ಊಹಿಸದಂತಹ ಘಟನೆಯಾಗಿದ್ದು, ಈ ಬಗ್ಗೆ ಸಮಗ್ರ ತನಿಖೆ ನಡೆಸಿ ಇಂತಹ ಅಚಾತುರ್ಯಗಳು ಆಗದ ರೀತಿಯಲ್ಲಿ ಕ್ರಮ ವಹಿಸಲು ಸೂಚಿಸಿರುವುದಾಗಿ ತಿಳಿಸಿದ್ದಾರೆ.

**ನಿರ್ದಿಷ್ಟ ಅಂತರ ಕಾಯ್ದುಕೊಳ್ಳಲು ಸೂಚನೆ:**

ಆನೆಗಳು ಸೇರಿದಂತೆ ವನ್ಯಜೀವಿಗಳನ್ನು ಎಷ್ಟೇ ಪಳಗಿಸಿದ್ದರೂ, ಪ್ರಾಣಿಗಳ ಸ್ವಭಾವವನ್ನು ಅರ್ಥ ಮಾಡಿಕೊಳ್ಳುವುದು ಕಷ್ಟಸಾಧ್ಯವಾಗಿದ್ದು, ಅವು ಯಾವಾಗ ಯಾವ ರೀತಿ ವರ್ತಿಸುತ್ತವೆ ಎಂದು ಊಹಿಸುವುದೂ ಕಷ್ಟವಾಗುತ್ತದೆ. ಹೀಗಾಗಿ ಆನೆಗಳ ಸೊಂಡಿಲು ಮುಟ್ಟುವುದು, ಪಕ್ಕದಲ್ಲಿ ನಿಂತು ಫೋಟೋ ತೆಗೆಸಿಕೊಳ್ಳುವುದು, ಪ್ರವಾಸಿಗರಿಗೆ ಆನೆ ಮೈ ತೊಳೆಯಲು ಅವಕಾಶ ನೀಡುವುದು, ಅವರಿಂದ ಬೆಲ್ಲ, ಬಾಳೆಹಣ್ಣು ಇತ್ಯಾದಿ ಆಹಾರ ತಿನ್ನಿಸುವುದನ್ನು ನಿರ್ಬಂಧಿಸಲು ಕ್ರಮ ವಹಿಸುವಂತೆ ಮತ್ತು ವನ್ಯಜೀವಿಗಳಿಂದ ಪ್ರವಾಸಿಗರು ನಿರ್ದಿಷ್ಟ ಅಂತರ ಕಾಯ್ದುಕೊಳ್ಳುವಂತೆ ಕ್ರಮ ವಹಿಸುವಂತೆ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

## ಪ.ಜಾತಿ, ಪ.ಪಂಗಡದ ರೈತರಿಗೆ ತರಕಾರಿ ಬೀಜದ ಕಿಟ್ ವಿತರಣೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**




ದಕ್ಷಿಣ ಕ್ಷೇತ್ರದಲ್ಲಿ ರೈತರ ಆರ್ಥಿಕ ಅಭಿವೃದ್ಧಿ ಹಾಗೂ ತೋಟಗಾರಿಕೆ ಬೆಳೆಗಳ ಉತ್ತೇಜನದ ನಿಟ್ಟಿನಲ್ಲಿ ಶಾಸಕರ ಕಚೇರಿಯಲ್ಲಿ ತೋಟಗಾರಿಕೆ ಇಲಾಖೆಯ ವತಿಯಿಂದ ಸರ್ಕಾರದ ಯೋಜನೆಗಳಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಗೆ ತರಕಾರಿ ಬೀಜ ಕಿಟ್ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರು ಚಾಲನೆ ನೀಡಿ ರೈತರಿಗೆ ತರಕಾರಿ ಬೀಜಗಳ ಕಿಟ್ ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು, ಕೃಷಿ ಕ್ಷೇತ್ರದ ಬಲವರ್ಧನೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ರೈತಪರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುತ್ತಿದ್ದು, ರೈತರು ಆ ಯೋಜನೆಗಳ ಸದುಪಯೋಗಪಡೆದುಕೊಳ್ಳಬೇಕು ಎಂದು ತಿಳಿಸಿದರು. ವಿಶೇಷವಾಗಿ ತೋಟಗಾರಿಕೆ ಬೆಳೆಗಳು ಕಡಿಮೆ ಅವಧಿಯಲ್ಲಿ ಉತ್ತಮ ಆದಾಯ ತಂದುಕೊಡುವ ಸಾಮರ್ಥ್ಯ ಹೊಂದಿರುವುದರಿಂದ ರೈತರು ತರಕಾರಿ ಬೆಳೆಗಳತ್ತ ಹೆಚ್ಚಿನ ಆಸಕ್ತಿ ತೋರಬೇಕು ಎಂದು ಕರೆ ನೀಡಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರ ಆರ್ಥಿಕ ಸಬಲೀಕರಣದ ಉದ್ದೇಶದಿಂದ ಸರ್ಕಾರ ವಿವಿಧ ಸಹಾಯಧನ ಹಾಗೂ ಪ್ರೋತ್ಸಾಹಕ ಯೋಜನೆಗಳನ್ನು ಜಾರಿಗೆ ತಂದಿದ್ದು, ರೈತರು ಆಧುನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡು ಹೆಚ್ಚಿನ ಉತ್ಪಾದನೆ ಸಾಧಿಸಬೇಕು ಎಂದು ಹೇಳಿದರು.

ಗ್ರಾಮೀಣ ಭಾಗದ ರೈತರಿಗೆ ಕೃಷಿ ಚಟುವಟಿಕೆಗಳಲ್ಲಿ ನೆರವು ನೀಡುವ ನಿಟ್ಟಿನಲ್ಲಿ ಗುಣಮಟ್ಟದ ಬೀಜ, ರಸಗೊಬ್ಬರ, ನೀರಾವರಿ ಸೌಲಭ್ಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ ಅವರು, ರೈತರ ಅಭಿವೃದ್ಧಿಯೇ ಸರ್ಕಾರಗಳ ಪ್ರಮುಖ ಗುರಿಯಾಗಿದೆ ಎಂದರು.

ತರಕಾರಿ ಬೆಳೆಗಳಿಂದ ರೈತರು ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಲಾಭ ಗಳಿಸಲು ಸಾಧ್ಯವಿದ್ದು, ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆ ಇರುವ ಬೆಳೆಗಳನ್ನು ಬೆಳೆಸುವ ಮೂಲಕ ಸ್ವಾವಲಂಬಿ ಬದುಕು ರೂಪಿಸಿಕೊಳ್ಳಬಹುದು ಎಂದು ಸಲಹೆ ನೀಡಿದರು. ಜೊತೆಗೆ ರೈತರು ಕೃಷಿಯೊಂದಿಗೆ ತೋಟಗಾರಿಕೆ ಚಟುವಟಿಕೆಗಳನ್ನು ಸಂಯೋಜನೆ ಮಾಡಿಕೊಂಡು ಆರ್ಥಿಕವಾಗಿ ಮತ್ತಷ್ಟು ಸದೃಢರಾಗಬೇಕು ಎಂದು ತಿಳಿಸಿದರು. ರೈತರು ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ಕೃಷಿ ಕ್ಷೇತ್ರದಲ್ಲಿ ಹೊಸ ಸಾಧನೆ ಮಾಡಬೇಕು ಎಂದು ಕಾರ್ಯಕ್ರಮದಲ್ಲಿ ಕರೆ ನೀಡಲಾಯಿತು.

ಈ ಸಂದರ್ಭದಲ್ಲಿ ಹಿರಿಯ ಸಹಾಯಕ ತೋಟಗಾರಿಕೆ ಇಲಾಖೆ ನಿರ್ದೇಶಕರಾದ ಸಚೀನ್, ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಸಂಗಮೇಶ ಘಾಳೆ, ಹೋಬಳಿ ತೋಟಗಾರಿಕೆ ಇಲಾಖೆ ಅಧಿಕಾರಿಗಳಾದ ಚಿರಂಜೀವಿ ರೆಡ್ಡಿ, ಕಾಶಿನಾಥ ಸ್ವಾಮಿ ಮತ್ತು ಮುಖಂಡರಾದ ಉದಯ ತೋರಣ, ಶಿವಕುಮಾರ ನಾಗಲಗಿದ್ದಿ, ಶಿವಕುಮಾರ ಸುಲ್ತಾನಪುರ, ಗಜಾನಂದ ತೋರಣ, ಸಾಯಿನಾಥ ಪಾಟೀಲ, ವಿರೇಶ ಕಂಗನಕೋಟ, ಮಲ್ಲಯ್ಯ ಸ್ವಾಮಿ, ಅನೀಲ ಪಲ್ಲಾಪುರ, ಶ್ರೀನಿವಾಸ ಹೂಗಾರ, ಸಿದ್ದಾರೂಢ ಭಾಲ್ಕೆ, ಗೋಪಾಲ ರೆಡ್ಡಿ, ಬಸು ಹೇಡೆ, ಸುನೀಲ, ಶಿವಕುಮಾರ ಶಹಾಪುರ ಮತ್ತಿತರರು ಉಪಸ್ಥಿತರಿದ್ದರು.

# ನೆಮ್ಮದಿಯ ಬದುಕಿಗೆ ಸಂಗೀತ ಸಹಕಾರಿ : ಕಿರಣ ಮಹಾರಾಜ



• **ಮಲ್ಲಮ್ಮ ನುಡಿ ವಾರ್ತೆ ಬೀದರ**

ನಗರದರಾಂಪೂರೆಕಾಲೋನಿಯಲ್ಲಿರುವ ಶ್ರೀದತ್ತಾಶ್ರಮದಆವರಣದಲ್ಲಿಭಾನುವಾರ ಸಂಜೆನಡೆದಅಕ್ಕಮಹಾದೇವಿ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘ ಗುಮ್ಮೆ ಕಾಲೋನಿ, ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿನಡೆದಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನುಹಿರಿಯ ಸಾಹಿತಿ ಎಂ.ಜಿ. ದೇಶಪಾಂಡೆ ಉದ್ಘಾಟಿಸಿ ಮಾತನಾಡಿದ ಅವರು, ಬೀದರ ಜಿಲ್ಲೆಯಲ್ಲಿ ಕಲೆ, ಸಾಹಿತ್ಯ, ಸಂಗೀತ ಉಳಿಸಿ ಬೆಳೆಸಲು ಇಂತಹ ಕಾರ್ಯಕ್ರಮಗಳಮೂಲಕಸಾಧ್ಯವಾಗಲಿದೆ ಎಂದರು. ಮನೆಗೆಲಸಗಳಿಗೆ ಸೀಮಿತವಾಗಿದ್ದ ಮಹಿಳೆಯರು ಇಂದಿನ ದಿನಮಾನಗಳಲ್ಲಿ ಸಾಂಸ್ಕೃತಿಕ, ಸಾಮಾಜಿಕ, ಧಾರ್ಮಿಕ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿಯೂ ಕೂಡ ಕೆಲಸ ನಿರ್ವಹಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸರಸ್ವತಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಪ್ರತಿಭಾ ಚಾಮಾ ಮಾತನಾಡಿ, ಮಹಿಳೆಯರು ತಮ್ಮ ಕುಟುಂಬದ ಜೊತೆಗೆ ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ, ಒಳ್ಳೆಯ ನಾಗರಿಕರನ್ನಾಗಿ ಮಾಡುವುದು ಇಂದಿನ ದಿನಮಾನಗಳಲ್ಲಿ ತುಂಬ ಅವಶ್ಯಕವಾಗಿದೆ ಎಂದರು. ಇಂತಹ ಕಾರ್ಯಕ್ರಮಗಳಲ್ಲಿ ಮಕ್ಕಳನ್ನು ಕೂಡ ಕರೆದುಕೊಂಡು ಬಂದಲ್ಲಿ ಅವರಿಗೂ ಕೂಡ ಸಾಮಾಜಿಕ ಪರಿಜ್ಞಾನ ಮೂಡುತ್ತದೆ. ಮಕ್ಕಳು ಕೆಟ್ಟ ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ಶ್ರೀ ದತ್ತಾಶ್ರಮ ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಶ್ರೀ ಕಿರಣ ಮಹಾರಾಜರು ಸಾನಿಧ್ಯವಹಿಸಿ ಮಾತನಾಡಿ, ಸಂಗೀತ ಆಲಿಸುವುದರಿಂದ ಮಾನಸಿಕ ನೆಮ್ಮದಿ ಕಾಣಲು ಸಾಧ್ಯವಾಗಲಿದೆ. ಇಂದಿನ ಯಾಂತ್ರಿಕ ಬದುಕಿನ ಜಂಜಾಟದಲ್ಲಿ ಸುಮಧುರ ಗೀತೆಗಳು, ಶಾಸ್ತ್ರೀಯ ಸಂಗೀತ, ಜಾನಪದ ಹಾಗೂ ವಚನ ಗಾಯನ ಕೇಳುವುದರಿಂದ ಆರೋಗ್ಯ ಪೂರ್ಣ ಜೀವನ ನಡೆಸಲು ಸಾಧ್ಯವಾಗಲಿದೆ ಎಂದರು.

ಅತಿಥಿಗಳಾಗಿ ರೇಣುಕಾ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದಅಶೋಕಬೂದಿಹಾಳ್ ಆಗಮಿಸಿದರು. ಅಕ್ಕಮಹಾದೇವಿ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷೆ ಶ್ರೀಮತಿ ಮಹಾದೇವಿ ಶಂಕರೆಪ್ಪಾ ಬಿರಾದಾರ ಅಧ್ಯಕ್ಷತೆ ವಹಿಸಿದರು. ಪ್ರೊ. ಉಮಾಕಾಂತ ಮೀಸೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲೆಯ ಖ್ಯಾತ ಸಂಗೀತ ಕಲಾವಿದರಾದ ಸಂಜೀವಕುಮಾರ ಸ್ವಾಮಿ ಉಜನಿ ಜಾನಪದ ಹಾಗೂ ವಚನ ಗಾಯನ ಪ್ರಸ್ತುತಪಡಿಸಿದರು. ಮಲ್ಲಿಕಾರ್ಜುನ ನಾಗಮಾರಪಳ್ಳಿ ಹಾಗೂ ರಾಜಕುಮಾರ ಬಂಪಳ್ಳಿ ತಬಲಾ ಸಾಥ ಮಾಡಿದರು.

ರಾಂಪೂರೆ ಕಾಲೋನಿಯ ಅಕ್ಕನ ಬಳಗ ಸಾಂಸ್ಕೃತಿಕ ಸಂಘ, ಜಗನ್ಮಾತೆ ಅಕ್ಕಮಹಾದೇವಿ ಮಹಿಳಾ ಸಾಂಸ್ಕೃತಿಕ ಸಂಘ, ಡೊಂಗರಗಿ ಗ್ರಾಮದ ಅಕ್ಕಮಹಾದೇವಿ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘ ಹಾಗೂ ಜೈ ಹನುಮಾನ ಭಜನೆ ಮತ್ತು ಸಾಂಸ್ಕೃತಿಕ ಸಂಘದವರು ಭಜನೆ ಕಾರ್ಯಕ್ರಮ ನಡೆಸಿದರು. ರಾಧಾಕೃಷ್ಣ ಮಹಿಳಾ ಕೋಲಾಟ ಸಂಘದ ಸದಸ್ಯರು ಆಕರ್ಷಕ ಕೋಲಾಟ ಪ್ರಸ್ತುತಪಡಿಸಿದರು. ಕುಮಾರಿ ಆಸ್ತಾ ಬಚ್ಚಣ್ಣಳ ಭರತನಾಟ್ಯ ಮನಮೋಹಕವಾಗಿತ್ತು.

ಇದೇ ಸಂದರ್ಭದಲ್ಲಿ ಶ್ರೀ ವೈಷ್ಣೋದೇವಿ ಕಲ್ಚರಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಸಂಗಮೇಶ ಬಿರಾದರಗೆ 'ಕಾಯಕ ಸೇವಾ ರತ್ನ ಪ್ರಶಸ್ತಿ', ಬಸವೇಶ್ವರ ಮಹಾವಿದ್ಯಾಲಯದ ಉಪನ್ಯಾಸಕಿ ಡಾ. ವೀಣಾ ಜಲಾದೆ ಇವರಿಗೆ 'ಶಿಕ್ಷಣ ಸೇವಾ ರತ್ನ ಪ್ರಶಸ್ತಿ', ಶಿವಶಕ್ತಿ ಸತ್ಸಂಗ ಬಳಗದ ಅಧ್ಯಕ್ಷ ಸಿದ್ರಾಮಯ್ಯ ಸ್ವಾಮಿ ಹಿರೇಮಠ ಇವರಿಗೆ 'ಸಂಗೀತ ಸೇವಾ ರತ್ನ ಪ್ರಶಸ್ತಿ' ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಕವಿತಾ ಸ್ವಾಮಿ ಹಾಗೂ ಸಂಗೀತಾ ಪಾಟೀಲ್ ಸ್ವಾಗತ ಗೀತೆ ನಡೆಸಿಕೊಟ್ಟರು. ರೇಖಾ ವಗದಾಳೆ, ರೂಪಾ ಪಾಟೀಲ್ ಮತ್ತು ರಾಜೇಶ್ವರಿ ವಚನ ಗಾಯನ ಪ್ರಸ್ತುತ ಪಡಿಸಿದರು. ವೈಜಿನಾಥ ಪಾಟೀಲ್ ನಿರೂಪಿಸಿದರೆ, ಭಾರತಿ ಸಂಗಮೇಶ ಬಿರಾದಾರ ವಂದಿಸಿದರು.

ಈ ಸಂದರ್ಭದಲ್ಲಿ ಈರಮ್ಮ, ರೇಖಾ, ಸರೋಜನಿ, ನಿರ್ಮಲಾ ಸ್ವಾಮಿ, ಪ್ರೇಮಲತಾ, ವಿದ್ಯಾವತಿ, ಉಮಾದೇವಿ, ಕೋಕಿಲಾ ಮಹಾದೇವಪ್ಪ, ರೇವಣಪ್ಪ ಮೂಲಗೆ, ನೂರಂದಪ್ಪ ಬಾಳೂರೆ, ಗೀತಾ ಪಾಟೀಲ್, ಪುಷ್ಪಲತಾ ಮುಂತಾದವರು ಉಪಸ್ಥಿತರಿದ್ದರು.



ಬಸವನಬಾಗೇವಾಡಿ : ಎಸ್. ಎಸ್. ಎಲ್. ಸಿ ಪರೀಕ್ಷೆಯಲ್ಲಿ ತಾಲೂಕಿಗೆ ಅತಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಕೃಷಿ ಮಾರುಕಟ್ಟೆ ಹಾಗೂ ಜವಳಿ ಸಚಿವ ಶಿವಾನಂದ ಎಸ್ ಪಾಟೀಲ್ ಸೋಮವಾರ ಪಟ್ಟಣದ ಪುರಸಭೆ ಸಭಾಭವನದಲ್ಲಿ ಅಭಿನಂದಿಸಿ ಸನ್ಮಾನಿಸಿ ಶುಭ ಕೋರಿದರು.ನಂತರ ಹೊರಗಡೆ ವಿದ್ಯಾರ್ಥಿಗಳು ಹಾಗೂ ಪಾಲಕರೊಂದಿಗೆ ಆತ್ಮೀಯವಾಗಿ ಫೋಟೋ ತೆಗೆಸಿಕೊಂಡರು.

## ದೇಶ– ಆರೋಗ್ಯಕ್ಕಾಗಿ ಸೈಕಲ್ ಸವಾರಿಯಲ್ಲಿ

# ಯೋಗ ಗುರು ಕಾಶಿನಾಥ ಅವಟಿ

• **ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ**



ಪಕ್ಷಭೇದ ಮರೆತು ನಾವೆಲ್ಲರೂ ಮಾನ್ಯ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದಂತೆ, ಚಿನ್ನ, ಬೆಳ್ಳಿ,ಖರೀದಿ ಕಡಿಮೆ ಮಾಡಿ ಹಾಗೂ ಪೆಟ್ರೋಲ್, ಡಿಸೆಲ್ ಮಿತವ್ಯಯದಿಂದ ಬಳಸಿ,ಎನ್ನುವ ಕರೆಗೆ ಸ್ಪಂದಿಸಿದ ಪಟ್ಟಣದ ಆವಟಿ ಕೋಚಿಂಗ್ ಸಂಸ್ಥೆಯ ಅಧ್ಯಕ್ಷ ಕಾಶಿನಾಥ್ ಎಸ್ ಅವಟಿಯವರು ಪಟ್ಟಣದಲ್ಲಿ ಸಣ್ಣ, ಪುಟ್ಟ ಕೆಲಸಗಳಿಗೆ ಸೈಕೆಲ್ ತೆಗೆದುಕೊಂಡು ಹೋಗುತ್ತಿರುವುದು ನಿಜಕ್ಕೂ ಶ್ಲಾಘನೀಯವಾಗಿದೆ. ವಿದೇಶಿ ವಿನಿಮಯ ಮೀಸಲು ನಿಧಿಯನ್ನು ರಕ್ಷಿಸಲು, ರೂಪಾಯಿ ಮೌಲ್ಯದ ಕುಸಿತವನ್ನು ತಡೆಯಲು ,ಹಾಗೂ ದೇಶವನ್ನು ಆರ್ಥಿಕ ಹೊಡೆತದಿಂದ ಕಾಪಾಡುವ ಧ್ಯೇಯವನ್ನು ಇಟ್ಟುಕೊಂಡು ನಾವೆಲ್ಲರೂ ಈ ದಿಸೆಯಲ್ಲಿ ಹೆಜ್ಜೆ ಇಡೋಣ. ಆ ದಿಸೆಯಲ್ಲಿ ನನ್ನದೊಂದು ಚಿಕ್ಕ ಪ್ರಯತ್ನ.

ಇದರಿಂದ ಆರೋಗ್ಯದೃಷ್ಟಿಯಿಂದ ಒಳ್ಳೆಯ ವ್ಯಾಯಾಮ ಆಗುತ್ತದೆ, ದೇಹವು ಸದೃಢವಾಗುತ್ತದೆ ಎನ್ನುವದನ್ನು ಕೂಡಾ ಸ್ಮರಣೆಗೆ ತಂದುಕೊಳ್ಳುವುದು ಔಚಿತ್ಯಪೂರ್ಣವಾಗಿದೆ. ಹಾಗೇ ಒಂದು ಟ್ರಾಯಲ್ ಮಾಡಿ ನೋಡಿ , ನಮ್ಮ ದೇಶಕ್ಕಾಗಿ ನಮ್ಮ ಆರೋಗ್ಯಕ್ಕಾಗಿ ಎನ್ನುವ ಧ್ಯೇಯಮಂತ್ರದೊಂದಿಗೆ ಮುನ್ನಡೆಯೋಣ ಎನ್ನುತ್ತಾರೆ ತಾಲೂಕಾ ಪತಂಜಲಿ ಯೋಗ ಪ್ರಭಾರಿಗಳಾದ ಕಾಶೀನಾಥ ಅವಟಿ ಅವರು.

# ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ: ಸಿಇಒ ಬದೋಲೆ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಮೇ.18: ಬೇಸಿಗೆಯ ತೀವ್ರತೆ ಹಿನ್ನೆಲೆಯಲ್ಲಿ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ ಹೇಳಿದರು.ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಜರುಗಿದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಅಭಿವೃದ್ಧಿ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯ ಪರಿಹಾರಕ್ಕೆ ಪ್ರಥಮ ಆದ್ಯತೆ ನೀಡಿ ತುರ್ತು ಪರಿಹಾರ ಕೈಗೊಳ್ಳಬೇಕು. ಸಮಸ್ಯೆ ಇರುವ ಗ್ರಾಮಗಳಲ್ಲಿ ಟ್ಯಾಂಕರ್, ಖಾಸಗಿ ಬಾವಿ ಹಾಗೂ ಬೋರ್‌ವೆಲ್‌ಗಳ ಮೂಲಕ ನೀರು ಪೂರೈಸಬೇಕು. ಜನರಿಗೆ ಸಮರ್ಪಕವಾಗಿ ನೀರು ಪೂರೈಕೆ ಆಗುವಂತೆ ಕಟ್ಟುನಿಟ್ಟಿನ ಕ್ರಮವಹಿಸಬೇಕು ಎಂದು ಖಡಕ್ಕಾಗಿ ತಿಳಿಸಿದರು.ಉದ್ಯೋಗ ಖಾತ್ರಿ ಯೋಜನೆಯ ಅನುಮೋದಿತ ಕ್ರೀಯಾ ಯೋಜನೆಯಡಿ ನರೇಗಾ ಕೂಲಿ ಕಾರ್ಮಿಕರಿಗೆ ಹಳೆಯ ಆನ್ ಗೋಯಿಂಗ್ ಸಮುದಾಯ ಕಾಮಗಾರಿಗಳಲ್ಲಿ ಕೆಲಸ ಕೊಡಿ.

ಕಾಮಗಾರಿ ಸ್ಥಳದಲ್ಲಿ ಅವರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಿ. ಗ್ರಾಮ ಪಂಚಾಯಿತಿ ತೆರಿಗೆ ಸಂಗ್ರಹ ಕಾರ್ಯ ತೀವ್ರಗೊಳಿಸಿ ಎಂದರು. ಜಿಲ್ಲಾ ಪಂಚಾಯಿತಿ ಸಹಾಯಕ ಕಾರ್ಯದರ್ಶಿ (ಆಡಳಿತ) ಶಿವಲೀಲಾ, ತಾಲ್ಲೂಕು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಮಾಣಿಕರಾವ್, ನರೇಗಾ ಸಹಾಯಕ ನಿರ್ದೇಶಕ ಬಾಲಾಜಿ ಕೋಟೆ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗಳ ಪಿಡಿಒ, ಕಾರ್ಯದರ್ಶಿ ಹಾಗೂ ಕರವಸೂಲಿಗಾರರು ಸಭೆಯಲ್ಲಿ ಹಾಜರಿದ್ದರು.

# ಎಸ್.ಎಸ್.ಎಲ್.ಸಿ ಪರೀಕ್ಷೆ-2 ಶುಭಾರಂಭ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ತಾಲೂಕಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ–2 ಶುಭಾರಂಭವಾಗಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಗೆ 893 ವಿದ್ಯಾರ್ಥಿಗಳು ನೊಂದಣಿಯಾಗಿದ್ದು, ಸೋಮವಾರ ನಡೆದ ಪ್ರಥಮಭಾಷೆ ವಿಷಯಕ್ಕೆ 606 ವಿದ್ಯಾರ್ಥಿಗಳು ನೊಂದಣಿಯಾಗಿದ್ದರು. ಅವರಲ್ಲಿ 424 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 182 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಮಲ್ಲಿಕಾರ್ಜುನ ಕನ್ನಾಳೆ ತಿಳಿಸಿದ್ದಾರೆ.

ತಾಲೂಕಿನಲ್ಲಿ ಒಟ್ಟು ನಾಲ್ಕು ಪರೀಕ್ಷಾಕೇಂದ್ರಗಳಿದ್ದು, ಪಟ್ಟಣದಲ್ಲಿ ಸರ್ಕಾರಿ ಪ್ರೌಢಶಾಲೆ, ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯಗಳಲ್ಲಿ ಪರೀಕ್ಷಾ ಕೇಂದ್ರಗಳು ನಡೆಯುತ್ತಿದ್ದು, ಗ್ರಾಮೀಣ ಭಾಗದ ಸರ್ಕಾರಿ ಪ್ರೌಢಶಾಲೆ ಹಲಬರ್ಗಾ ಮತ್ತು ಸರ್ಕಾರಿ ಪ್ರೌಢಶಾಲೆ ಭಾತಂಬ್ರಾಗಳಲ್ಲಿ ಪರೀಕ್ಷಾ ಕೇಂದ್ರಗಳು ನಡೆಯುತ್ತಿವೆ. ಪಟ್ಟಣ ಮತ್ತು ಗ್ರಾಮೀಣ ಭಾಗದ ಎಲ್ಲಾ ನಾಲ್ಕೂ ಪರೀಕ್ಷಾ ಕೇಂದ್ರಗಳಲ್ಲಿ ಸುಸೂತ್ರವಾಗಿ ಪರೀಕ್ಷೆಗಳು ನಡೆದಿದ್ದು, ಯಾವುದೇ ತರಹದ ಅಹಿತಕರ ಘಟನೆಗಳು ನಡೆದಬಗ್ಗೆ ತಿಳಿದು ಬಂದಿಲ್ಲ. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್, ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಮಲ್ಲಿಕಾರ್ಜುನ ಕನ್ನಾಳೆಯವರು ಎಲ್ಲಾ ಪರೀಕ್ಷಾ ಕೇಂದ್ರಗಳಿಗೂ ಭೇಟಿ ನೀಡಿ, ವೆಬ್ ಕಾಸ್ಟಿಂಗ್ ಸಿ.ಸಿ.ಕ್ಯಾಮರಾಗಳು ಚೆಕ್ ಮಾಡುವುದಲ್ಲದೇ, ವಿದ್ಯಾರ್ಥಿಗಳ ಆಸನ ವ್ಯವಸ್ಥೆ, ಮೂಲಭೂತ ಸೌಕರ್ಯಗಳಬಗ್ಗೆ ಕೂಲಂಕುಶವಾಗಿ ಪರಿಶೀಲನೆ ನಡೆಸಿದರು. ಇವತ್ತು ನಡೆದ ಪರೀಕ್ಷೆಯಲ್ಲಿ ಯಾವುದೇ ರೀತಿಯ ಅವ್ಯವಹಾರ ನಡೆದಿಲ್ಲ, ಪರೀಕ್ಷೆಗಳು ಸುಸೂತ್ರವಾಗಿ ನಡೆದಿವೆ ಎಂದು ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಮಲ್ಲಿಕಾರ್ಜುನ ಕನ್ನಾಳೆ ತಿಳಿಸಿದ್ದಾರೆ.

# ತಂತ್ರಜ್ಞಾನದಿಂದ ಉಜ್ವಲ ಭವಿಷ್ಯ ಡಾ. ಉದಯಕುಮಾರ ಕಲ್ಯಾಣೆ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

: ತಂತ್ರಜ್ಞಾನದಿಂದ ಉಜ್ವಲ ಭವಿಷ್ಯ ನಿರ್ಮಾಣ ಮಾಡಬಹುದು ಎಂದು ಬಿ.ಕೆ.ಐ.ಟಿ ಪ್ರಾಂಶುಪಾಲ ಡಾ।ಉದಯಕುಮಾರ ಕಲ್ಯಾಣೆ ಅಭಿಪ್ರಾಯಪಟ್ಟರು.

ಪಟ್ಟಣದ ಭೀಮಣ್ಣ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸೋಮವಾರ ನಡೆದ ಪದವಿ ಪ್ರಧಾನ ಸಮಾರಂಭದಲ್ಲಿ (ಗ್ರಾಜುವೇಶನ್ ಡೇ) ಪದವಿ ಪಡೆದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು. ಜೀವನದಲ್ಲಿ ತಂತ್ರಜ್ಞಾನಕ್ಕೆ

ಸಾಕಷ್ಟು ಮಹತ್ವವಿದೆ. ಎಲ್ಲಾ ರಂಗದಲ್ಲಿಯೂ ತಂತ್ರಜ್ಞಾನವು ಹಾಸುಹೊಕ್ಕಾಗಿದೆ. ಹೀಗಾಗಿ ಇಂಜಿನಿಯರಿಂಗ್ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ಜೀವನದಲ್ಲಿ ಸೋಲನ್ನೇ ಕಾಣುವುದಿಲ್ಲ. ಹೀಗಾಗಿ ತಂತ್ರಜ್ಞಾನದಿಂದ ಉಜ್ವಲ ಭವಿಷ್ಯ ನಿರ್ಮಾಣ ಮಾಡಬಹುದು ಎಂದು ಹೇಳಿದರು.

ಇದೇವೇಳೆ ಕಂಪ್ಯೂಟರ್, ಎಲೆಕ್ಟ್ರಾನಿಕ್ಸ್, ಸಿವಿಲ್, ಮೆಕಾನಿಕಲ್ ಸೇರಿದಂತೆ ವಿವಿಧ ವಿಭಾಗದ ಅಂಡರ್ ಗ್ರಾಜ್ಯುವೇಟ್ 335 ಬಿ.ಇ ಮತ್ತು ಪೋಸ್ಟ್ ಗ್ರಾಜುವೇಟ್ 45 ಎಮ್‌ಸಿಎ ಮತ್ತು ಎಮ್‌ಟೆಕ್ ಒಟ್ಟು 380 ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ನೀಡಿ ಗೌರವಿಸಿದರು. ಶಿಕ್ಷಣ ಇಲಾಖೆಯ ಶಾಂತಾ ಮಹಾದೇವ ಸಜ್ಜನ ದಂಪತಿಗಳ ಪುತ್ರಿ ವಿಜೇತಾ ಮಹಾದೇವ ಸಜ್ಜನ ರವರು ಪ್ರತಿವರ್ಷ ಕಂಪ್ಯೂಟರ್ ಇಲಾಖೆಯಲ್ಲಿ ಕಾಲೇಜಿಗೆ ಪ್ರಥಮ ಹಾಗು ದ್ವಿತೀಯ ಸ್ಥಾನ ಪಡೆಯುತ್ತಿರುವ ಹಿನ್ನಲೆಯಲ್ಲಿ ವಿಶೇಷ ಸನ್ಮಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಪ್ರಮುಖರಾದ ಡಾ। ಸೂರ್ಯಕಾಂತ.ಬಿ, ಡಾ। ಬಸವರಾಜ ಕಾವಡಿ, ಪ್ರೊ। ನಾಗೇಶ.ಎಮ್, ಡಾ। ಪ್ರಶಾಂತ, ಕಲ್ಪನಾ ಚಿಕಟವಾರ, ರಾಜಶೇಖರ ಮಠಪತಿ, ಲೆಕ್ಕಿಗ ಸಂಗ್ರಾಮ, ಗಿರಿಧರ ತಿವಾರಿ, ಡಾ। ಅಶೋಕಕುಮಾರ ಕೋಟೆ, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಗಣಪತಿ ಬೋಚರೆ, ಪ್ರವೀನ ಮೇತ್ರೆ, ವಿಜಯಕುಮಾರ ಪರ್ಮಾ, ದಿಲೀಪ ಸೇರಿಕಾರ, ಸಂತೋಷ ಬಿಜಿಪಾಟೀಲ ಉಪಸ್ಥಿತರಿದ್ದರು. ಪ್ರೊ।ನಾಗೇಶ.ಎಮ್ ಸ್ವಾಗತಿಸಿದರು. ಡಾ। ಪ್ರಶಾಂತ ನಿರೂಪಿಸಿದರು. ಗುರುನಾಥ ಕುಡತೆ ವಂದಿಸಿದರು.

> ಜೀವನದಲ್ಲಿ ಮುಂದೆ ಬರಬೇಕಾದರೆ ತಂತ್ರಜ್ಞಾನದಲ್ಲಿ ಪರಿಣಿತಿ ಇರಬೇಕು. ಇಂಜಿನಿಯರಿಂಗ್ ವಿದ್ಯಾರ್ಥಿಗಳು ಎಲ್ಲಾ ತರಹದ ಪರಿಣಿತಿ ಪಡೆದು ಜೀವನದ ನೊಗ ಸಾಗಿಸಲು ಸನ್ನದ್ಧರಾಗಿರುತ್ತಾರೆ.
> **– ಡಾ। ಉದಯಕುಮಾರ ಕಲ್ಯಾಣೆ, ಪ್ರಾಂಶುಪಾಲರು, ಬಿ.ಕೆ.ಐ.ಟಿ ಭಾಲ್ಕಿ.**

# ಮಳೆಗಾಲ ಸಮೀಪಿಸಿದರೂ ಗಟಾರ ವ್ಯವಸ್ಥೆ ಸರಿಯಾಗದೇ ವಾಹನಗಳ ಒದ್ದಾಟ



ಗೋಕರ್ಣ : ಮಳೆಗಾಲ ಸಮೀಪಿಸುತ್ತಿದ್ದು ಈಗಾಗಲೇ ಅಕಾಲಿಕ ಮಳೆಯು ಸುರಿದಿದೆ. ಆದರೆ ಸ್ಥಳೀಯ ಗ್ರಾಮ ಪಂಚಾಯಿತಿಯವರು ಗಟಾರ ಸ್ವಚ್ಛತೆ ಮತ್ತು ಮುಚ್ಚಳಿಕೆಯ ಬಗ್ಗೆ ಇದುವರೆಗೂ ಎಚ್ಚೆತ್ತುಕೊಂಡಂತಿಲ್ಲ. ಹೀಗಾಗಿ ಕೆಲವು ಸ್ಥಳಗಳಲ್ಲಿ ವಾಹನಗಳು ಸರಿಯಾಗಿ ಮುಚ್ಚಳಿಕೆ ಅಳವಡಿಸದ ಸ್ಥಳಗಳಲ್ಲಿ ಸಿಲುಕಿ ಅನಾಹುತಕ್ಕೆ ಒಳಗಾಗುತ್ತಿದೆ.

ಶ್ರೀ ಕ್ಷೇತ್ರ ಗೋಕರ್ಣಕ್ಕೆ ಪ್ರತಿದಿನ ಸಾವಿರಾರು ಭಕ್ತರು ಮತ್ತು ಪ್ರವಾಸಿಗರು ಆಗಮಿಸುತ್ತಾರೆ. ಜಿಲ್ಲೆಯಲ್ಲಿಯೇ ಅತಿದೊಡ್ಡ ಗ್ರಾಮ ಪಂಚಾಯತ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಆದರೆ ಸದಸ್ಯರ ಅವಧಿ ಮುಗಿದಿದ್ದರಿಂದಾಗಿ ಈಗ ಅಧಿಕಾರಿಗಳದ್ದೆ ದರ್ಬಾರ ಎನ್ನುವಂತಾಗಿದೆ. ಮುಖ್ಯವಾಗಿ ಮೂಲ ಸೌಲಭ್ಯ ಇಲ್ಲದೇ ಗೋಕರ್ಣ ಪರದಾಡುವಂತಾಗಿದೆ.

ಪ್ರತಿವರ್ಷ ಮಳೆಗಾಲ ಶುರುವಾಯಿತೆಂದರೆ ಎಲ್ಲೆಂದರಲ್ಲಿ ನೀರು ನಿಂತು ಗೋಕರ್ಣದ ಪವಿತ್ರತೆಯೇ ಅಪವಿತ್ರ ಎನ್ನುವಂತೆ ಮಾಡುತ್ತದೆ. ಯಾವ ರಸ್ತೆಯಲ್ಲಿ ನೋಡಿದರೂ ನೀರು ನಿಂತು ವಾಹನ ಸಂಚಾರಕ್ಕೆ ತೊಡಕುಂಟಾಗುತ್ತಿದೆ. ಆದರೂ ಕೂಡ ಶಾಸಕರಾಗಲಿ, ಜಿಲ್ಲಾಡಳಿತವಾಗಲಿ ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದಿರುವುದು ವಿಪರ್ಯಾಸವಾಗಿದೆ.

ಮಹಾಬಲೇಶ್ವರನ ಆತ್ಮಲಿಂಗವಿರುವ ಸ್ಥಳವೂ ಕೂಡ ಒಳಚರಂಡಿ ವ್ಯವಸ್ಥೆ ಸರಿ ಇಲ್ಲದಿದ್ದರಿಂದಾಗಿ ಅಲ್ಲಿಯೂ ಕೂಡ ನೀರು ನುಗ್ಗಿ ಅವಾಂತರ ಸೃಷ್ಟಿಸುತ್ತದೆ. ಇದು ಭಕ್ತರಿಗೂ ಕೂಡ ಆಘಾತ ಎನ್ನುವಂತಾಗಿದೆ. ಪುರಾಣ ಪ್ರಸಿದ್ಧ ಶ್ರೀ ಮಹಾಬಲೇಶ್ವರ ದೇವಸ್ಥಾನಕ್ಕೆ ನೀರು ನುಗ್ಗುತ್ತದೆ ಎಂದರೆ ಇಲ್ಲಿಯ ಆಡಳಿತ ವ್ಯವಸ್ಥೆ ಎಷ್ಟು ಕೆಟ್ಟುನಿಂತಿದೆ ಎನ್ನುವುದು ಇದರಿಂದ ತಿಳಿಯುತ್ತದೆ. ಹೀಗಾಗಿ ಕೇವಲ ಗ್ರಾಮ ಪಂಚಾಯಿತಿಯವರಿಂದ ಇದು ಸಾಧ್ಯವಾಗದ ಮಾತಾಗಿದೆ. ಹೀಗಾಗಿ ತಾಲೂಕಾಡಳಿತ, ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳು ಈ ಬಗ್ಗೆ ಗಮನ ಹರಿಸಬೇಕಿದೆ.

**CITATION**

**IN THE COUR OF THE I ADDL. CIVIL JUDGE AND JMFC., AT HUMNABAD**

**CRL. MISC. No. 2300/2026.**

Petitioners :

1. Jaganath S/o Mallappa Hosmani, Age; 58-year, Occu: Agriculture
2. Shivamma D/o Mallappa, Age; 54-year, Occu: Agriculture
3. Gundamma d/o Mallappa, Age; 39-year, Occu: Agriculture

All R/o Walkhindi Tq:Chitguppa Dist:Bidar.

Respondent:

The Registrar of Birth and Death through The Tahasildar Chitguppa.

**Sub:- Petition U/Sec. 13 (3) of Birth and Death Registration Act-1969.**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Mother of Petitioner no. 1 to 3 Deceased by namely LATE. SHATAMMA W/O LATE MALLAPPA, who wad died on 09.03.2009 at Village Walkhindi. Tq:Chitguppa Dist:Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 29.05.2026 at 1..00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of the court, this the 24-04-2026.

**//By order of the court//**
**Chief Ministerial Officer**
**Prl. Civil Judge & JMFC Court, Humnabad**

# ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 18 : ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ದೇವಾಪೂರ 110/11 ಕೆ.ವಿ ವಿದ್ಯುತ್ ಕೇಂದ್ರದಿಂದ ಹೊಸದಾಗಿ ಲಿಂಕ್ ಲೈನ್ ಕಾಮಗಾರಿ ಹಿನ್ನೆಲೆ 2026ರ ಮೇ 19 ರಿಂದ 27ರ ವರೆಗೆ ಒಂದು ವಾರದ ಮಟ್ಟಿಗೆ ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಸುರಪುರ ಕಾರ್ಯ ಮತ್ತು ಪಾಲನೆ ವಿಭಾಗ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯನಿರ್ವಾಹಕ ಅಭಿಯಂತರರು (ವಿ) ಅವರು ತಿಳಿಸಿದ್ದಾರೆ.

ವಿತರಣ ಕೇಂದ್ರದಿಂದ ಹಾದು ಹೋಗುವ 11ಕೆವಿ ಫೀಡರ್‌ಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ತೊಂದರೆಯಾಗುತ್ತದೆ. ದೇವಾಪೂರ 110/11ಕೆವಿ ವಿದ್ಯುತ್ ಕೇಂದ್ರದಿಂದ ವಿದ್ಯುತ್ ಪಡೆಯುವ ಈ ಗ್ರಾಮಗಳಿಗೆ ವಿದ್ಯುತ್ ವ್ಯತ್ಯವಾಗುತ್ತದೆ. ಫೀಡರ್ ಕೃಷ್ಣಾ ಐಪಿ ಫೀಡರ್ ವಿದ್ಯುತ್ ನಿಲುಗಡೆಯಾಗುವ ಗ್ರಾಮ ದೇವಾಪೂರ, ತಿಂಥಣಿ, ಅರಳಹಳ್ಳಿ, ಕಂಪಾಪೂರ, ಎಫ್ 12 ಲಕ್ಷೀಶ ಎನ್‌ಜಿವೈ ನಿಲುಗಡೆಯಾಗುವ ಗ್ರಾಮ ಸಾಯಿನಗರ, ದೇವಾಪೂರ ಕ್ರಾಸ್, ಅರಳಹಳ್ಳಿ, ಶಾಂತಪೂರ. ಎಫ್ 1 ಜಾಕ್‌ವೆಲ್ ನಿಲುಗಡೆಯಾಗುವ ಗ್ರಾಮ ಸುರಪುರ ಪಟ್ಟಣದ ಕುಡಿಯುವ ನೀರಿನ ಘಟಕ ಈ ಗ್ರಾಮಗಳ ರೈತರು ಸಾರ್ವಜನಿಕರು ಹಾಗೂ ಗ್ರಾಹಕರು ಜೆಸ್ಕಾಂಗೆ ಸಹಕರಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಕೀಲರಿಗೆ ಪ್ರೋತ್ಸಾಹ ಧನ ಯೋಜನೆಯಡಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 18 : 2026–27ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆದಿಂದ ವಕೀಲರಿಗೆ ಪ್ರೋತ್ಸಾಹ ಧನ ಯೋಜನೆಯಡಿ ಅರ್ಹ ಕಾನೂನು ಪದವೀಧರ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ ಎಂ.ನಾರಾಯಣಕರ್ ಅವರು ತಿಳಿಸಿದ್ದಾರೆ.

ಯಾದಗಿರಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಕೀಲರಿಗೆ ಪ್ರೋತ್ಸಾಹ ಧನ ಯೋಜನೆಯಡಿ ಅರ್ಹ ಕಾನೂನು ಪದವೀಧರ ಅಭ್ಯರ್ಥಿಗಳಿಂದ ಈ ನಿಬಂಧನೆಗೊಳಪಟ್ಟು ಹಿಂದುಳಿದ ವರ್ಗಗಳ ಪ್ರವರ್ಗ–1 ರಲ್ಲಿ ಬರುವ ಸಮುದಾಯದ ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು 3.50 ಲಕ್ಷ ರೂ.ಗಳ ಒಳಗಿರಬೇಕು. ಪ್ರವರ್ಗ–2ಎ, 3ಎ, 3ಬಿ ಅಭ್ಯರ್ಥಿಗಳಿಗೆ 2.50 ಲಕ್ಷ ರೂ.ಗಳ ಆದಾಯ ಮಿತಿ ನಿಗದಿಪಡಿಸಲಾಗಿದೆ. ಅಭ್ಯರ್ಥಿ ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೊಂದಾಯಿಸಿರಬೇಕು. ಅರ್ಜಿಸಲ್ಲಿಸಲು ನಿಗದಿಪಡಿಸಿದ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯ ಪ್ರವರ್ಗ 1ರ ಅಭ್ಯರ್ಥಿಗಳಿಗೆ 40 ವರ್ಷ ಒಳಗಿರಬೇಕು, ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 38 ವರ್ಷ ಒಳಗಿರಬೇಕು, ಅಭ್ಯರ್ಥಿಯು ಅಂಗೀಕೃತ ವಿಶ್ವವಿದ್ಯಾಲಯದಿಂದ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಅವಧಿ ನಾಲ್ಕು ವರ್ಷ ಇರುತ್ತದೆ. ಪ್ರತಿ ಮಾಹೆ ಅಭ್ಯರ್ಥಿಗಳಿಗೆ 4000 ರೂ.ಗಳ ದಂತೆ ತರಬೇತಿ ಭತ್ಯೆ ನೀಡಲಾಗುವುದು. ಅಭ್ಯರ್ಥಿಗಳು ಜಿಲ್ಲಾ ಕಛೇರಿದಿಂದ ಪಡೆದ ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿಮಾಡಿ 2026ರ ಮೇ 30ರ ಒಳಗೆ ಅರ್ಜಿಸಲ್ಲಿಸಬೇಕು. ನಂತರ ಬಂದ ಅರ್ಜಿ ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯ ದೂ.ಸಂ.08473253742ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಕ್ರೀದ್ ಹಬ್ಬದ ಆಚರಣೆ ಶಾಂತಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 18 : ಯಾದಗಿರಿ ಜಿಲ್ಲೆಯಾದ್ಯಂತ ಇದೇ 2026ರ ಮೇ 28 ರಂದು ಬಕ್ರೀದ್ ಹಬ್ಬದ ಆಚರಣೆ ಹಿನ್ನೆಲೆಯಲ್ಲಿ ಶಾಂತಿ ಸಭೆಯನ್ನು 2026ರ ಮೇ 21ರ ಗುರುವಾರ ರಂದು ಮಧ್ಯಾಹ್ನ 1 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಬಕ್ರೀದ್ ಹಬ್ಬದ ಶಾಂತಿ ಸುವ್ಯವಸ್ಥೆಯಿಂದ ಆಚರಣೆ ಮಾಡುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವ ಸಭೆಗೆ ಅಂದು ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಹಾಗೂ ಸಂಘ ಸಂಸ್ಥೆಯ ಪ್ರತಿನಿಧಿಗಳು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಂದಳ್ಳಿ ಗ್ರಾಮ ಏಕಲವ್ಯ ಪಿ.ಯು.ಸಿ ಪ್ರಥಮ (ವಿಜ್ಞಾನ) ಕಾಲೇಜು ಪ್ರವೇಶಾತಿಗೆ ಅರ್ಜಿ ಆಹ್ವಾನ


• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 18 : ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ ಬಂದಳ್ಳಿ ಗ್ರಾಮದಲ್ಲಿ 2026–27ನೇ ಶೈಕ್ಷಣಿಕ ವರ್ಷದಲ್ಲಿ ಏಕಲವ್ಯ ಪಿ.ಯು.ಸಿ ಪ್ರಥಮ (ವಿಜ್ಞಾನ) ಕಾಲೇಜು ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಬಂದಳ್ಳಿ ಏಕಲವ್ಯ ಮಾದರಿ ಶಾಲೆ ಪ್ರಾಂಶುಪಾಲರಾದ ಸುನೀಲ್ ಅವರು ತಿಳಿಸಿದ್ದಾರೆ.

ಬಂದಳ್ಳಿ ಏಕಲವ್ಯ ಮಾದರಿ ಶಾಲೆಯ ಪ್ರಸ್ತುತ ಶೈಕ್ಷಣಿಕ ಸಾಲಿನ ಪಿಯುಸಿ–1 (ವಿಜ್ಞಾನ)ದಲ್ಲಿ ಖಾಲಿ ಇರುವ ಸೀಟುಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೊಂಡ ಕುರುಬ ನೌಕರರ ಸಭೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ತಾಲೂಕಿನ ಗೊಂಡ (ಕುರುಬ) ನೌಕರರ ಸಂಘ ತಾಲೂಕು ಘಟಕದ ಹಲವಾರು ಪದಾಧಿಕಾರಿಗಳು ವರ್ಗಾವಣೆಯಾಗಿದ್ದು ಹಾಗೂ ಕೆಲವು ಹಿರಿಯ ನೌಕರರು ನಿವೃತ್ತಿ ಹೊಂದಿರುವ ಹಿನ್ನೆಲೆಯಲ್ಲಿ ಸಂಘಟನೆಯ ಚಟುವಟಿಕೆಗಳು ನಿಶ್ಕ್ರಿಯಗೊಂಡಿವೆ.ಈ ಹಿನ್ನೆಲೆಯಲ್ಲಿ ಸಂಘಟನೆಯನ್ನು ಪುನರ್ ಸಂಘಟಿಸಿ ಹೊಸ ಪದಾಧಿಕಾರಿಗಳನ್ನು ಆಯ್ಕೆ ಮಾಡುವ ಉದ್ದೇಶದಿಂದ ಭಾಲ್ಕಿ ತಾಲೂಕಿನ ಸಮಸ್ತ ಗೊಂಡ (ಕುರುಬ) ನೌಕರರ ಸಭೆಯನ್ನು ದಿನಾಂಕ 20.05.2026 ರಂದು ಬೆಳಿಗ್ಗೆ 10:00 ಗಂಟೆಗೆ ಕನಕ ಭವನದಲ್ಲಿ ಆಯೋಜಿಸಲಾಗಿದೆ.

ಸಮಾಜದ ಎಲ್ಲಾ ನೌಕರ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕಾಗಿ ಸಂಘದ ಪ್ರಧಾನ ಕಾರ್ಯದರ್ಶಿ ವೆಂಕಟ ಮಲಗೊಂಡಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೃಹತ್ ತ್ಯಾಜ್ಯ ಉತ್ಪಾದಕರು ಬಿಡಬ್ಲೂ ಜಿಎಸ್ ಕಡ್ಡಾಯವಾಗಿ 4 ವಿಧದ ತ್ಯಾಜ್ಯ ವಿಂಗಡಣೆಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 18 : ಯಾದಗಿರಿ ನಗರಸಭೆ ವ್ಯಾಪ್ತಿಯಲ್ಲಿ ಎಲ್ಲಾ ಘನ ತ್ಯಾಜ್ಯ ನಿರ್ವಹಣಾ ಎಸ್‌ಡಬ್ಲೂ ಎಮ್ ನಿಯಮಗಳು–2006ರ ಅನುಸಾರವಾಗಿ ಎಲ್ಲಾ ನಾಗರಿಕರು, ವಾಣಿಜ್ಯ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಅಪಾರ್ಟ್‌ಮೆಂಟ್‌ಗಳು, ಕೈಗಾರಿಕೆಗಳು, ಹೋಟೆಲ್‌ಗಳು, ಉಪಹಾರ ಗೃಹಗಳು, ಮಾರುಕಟ್ಟೆಗಳು ಹಾಗೂ ಬೃಹತ್ ತ್ಯಾಜ್ಯ ಉತ್ಪಾದಕರು ಬಿಡಬ್ಲೂ ಜಿಎಸ್ ಕಡ್ಡಾಯವಾಗಿ 4 ವಿಧದ ತ್ಯಾಜ್ಯ ವಿಂಗಡಣೆಯನ್ನು ಮೂಲದಲ್ಲಿಯೇ ಜಾರಿಗೆ ತರಬೇಕೆಂದು ಸಾರ್ವಜನಿಕರಿಗೆ ಗಮನಕ್ಕೆ ತಿಳಿಸಿದೆ ಎಂದು ಯಾದಗಿರಿ ನಗರಸಭೆ ಪೌರಾಯುಕ್ತರು ಉಮೇಶ ಚವ್ಹಾಣ ಅವರು ತಿಳಿಸಿದ್ದಾರೆ.ಎಲ್ಲಾ ತ್ಯಾಜ್ಯ ಉತ್ಪಾದಕರು ಕೆಳಕಂಡ ನಾಲ್ಕು ವಿಭಾಗಗಳಲ್ಲಿ ತ್ಯಾಜ್ಯವನ್ನು ಪ್ರತ್ಯೇಕಿಸಬೇಕು, ಹಸಿ, ತ್ಯಾಜ್ಯ, ಆಹಾರ ತ್ಯಾಜ್ಯ ತರಕಾರಿ ತ್ಯಾಜ್ಯ ಜೈವಿಕವಾಗಿ ಕರಗುವ ತ್ಯಾಜ್ಯ. ಒಣ ತ್ಯಾಜ್ಯ ಪ್ಲಾಸ್ಟಿಕ್, ಕಾಗದ, ಲೋಹ, ಗಾಜು ಹಾಗೂ ಮರುಬಳಕೆ ಯೋಗ್ಯ ವಸ್ತುಗಳು. ವಿಶೇಷ ಕಾಳಜಿ ತ್ಯಾಜ್ಯ, ಸ್ಕಾ ??ನಿಟರಿ ತ್ಯಾಜ್ಯಡೈಪರ್‌ಗಳು, ಬ್ಯಾಟರಿ, ಔಷಧಿ ಅವಶೇಷಗಳು, ಬಣ್ಣದ ಡಬ್ಬಿಗಳು, ಇ–ತ್ಯಾಜ್ಯ ಇತ್ಯಾದಿ. ಸ್ಯಾನಿಟರಿ ತ್ಯಾಜ್ಯ ಮರುಬಳಕೆ ಆಗದ ಹಾಗೂ ಜೈವಿಕವಾಗಿ ಕರಗದ ತ್ಯಾಜ್ಯ,ನಾಗರಿಕರು ವಿಂಗಡಿಸಲಾದ ತ್ಯಾಜ್ಯವನ್ನು ಪ್ರತ್ಯೇಕವಾಗಿ ಅಧಿಕೃತ ತ್ಯಾಜ್ಯ ಸಂಗ್ರಹಕಾರರು, ಪೌರಾಕಾರ್ಮಿಕರಿಗೆ ಹಸ್ತಾಂತರಿಸಬೇಕು, ತ್ಯಾಜ್ಯ ಮಿಶ್ರಣ ಮಾಡುವುದು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಇದಲ್ಲದೆ, ಎಲ್ಲಾ ಬೃಹತ್ ತ್ಯಾಜ್ಯ ಉತ್ಪಾದಕರು ಬಿಡಬ್ಲೂ ??ಜಿಎಸ್ ಅಪಾರ್ಟ್‌ಮೆಂಟ್‌ಗಳು, ವಸತಿ ಸಮುಚ್ಚಯಗಳು, ಹೋಟೆಲ್‌ಗಳು ಮತ್ತು ಉಪಹಾರ ಗೃಹಗಳು, ಕಲ್ಯಾಣ ಮಂಟಪಗಳು, ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ವಾಣಿಜ್ಯ ಸಂಕೀರ್ಣಗಳು, ಮಾರುಕಟ್ಟೆಗಳು, ಮಂಡಿಗಳು, ಕೈಗಾರಿಕೆಗಳು ಮತ್ತು ಕಚೇರಿಗಳು ಈ ಕೆಳಗಿನ ಮಾನದಂಡಗಳನ್ನು ಹೊಂದಿದಲ್ಲಿ.20,000 ಚ.ಮೀ.ಗಿಂತ ಹೆಚ್ಚಿನ ನಿರ್ಮಿತ ಪ್ರದೇಶ ಹೊಂದಿದಲ್ಲಿ ಅಥವಾ ದಿನಕ್ಕೆ 40 ಕೆಎಲ್‌ಡಿ ಗಿಂತ ಹೆಚ್ಚಿನ ನೀರಿನ ಬಳಕೆ, ಅಥವಾ 100 ಕೆ.ಜಿ.ಗಿಂತ ಹೆಚ್ಚು ತ್ಯಾಜ್ಯ ಉತ್ಪಾದನೆ ಇದ್ದಲ್ಲಿ. ತಮ್ಮ ಸಂಸ್ಥೆಯನ್ನು ನಗರ ಸ್ಥಳೀಯ ಸಂಸ್ಥೆಯಲ್ಲಿ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು, ಹಾಗೂ ಎಸ್‌ಡಬ್ಲೂ ??ಎಮ್ ನಿಯಮಗಳು–2026ರ ಪ್ರಕಾರ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ ಮತ್ತು ನಿರ್ವಹಣೆಯನ್ನು ಅನುಸರಿಸಬೇಕು. ಘನ ತ್ಯಾಜ್ಯ ನಿರ್ವಹಣಾ ಎಸ್‌ಡಬ್ಲೂ ??ಎಮ್ ನಿಯಮಗಳು–2026ರ ಉಲ್ಲಂಘನೆ ಮಾಡಿದಲ್ಲಿ, ಸರ್ಕಾರದ ನಿಯಮಗಳು ಮತ್ತು ಪೌರಸಭೆ, ಉಪ ನಿಯಮಗಳು ಪ್ರಕಾರ ದಂಡ ಹಾಗೂ ಕಾನೂನು ಕ್ರಮ ಕೈಗೊಳ್ಳಲಾಗುವುದು. ನಗರದ ಸ್ವಚ್ಛತೆ ಪರಿಸರ ಸಂರಕ್ಷಣೆ ಹಾಗೂ ಶಾಶ್ವತ ಘನ ತ್ಯಾಜ್ಯ ನಿರ್ವಹಣೆಗೆ ಎಲ್ಲಾ ನಾಗರಿಕರು ಹಾಗೂ ಸಂಸ್ಥೆಗಳು ಸಹಕರಿಸುವಂತೆ ವಿನಂತಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿ ಶೋಭಾ ರಾನಡೆ ನಿವಾಸಕ್ಕೆ ಕೌಟೆ ಪುಂಡಲೀಕರಾವ ಭೇಟಿ: ಕುಟುಂಬಸ್ಥರಿಗೆ ಸಾಂತ್ವನ

• ಮಲ್ಲಮ್ಮ ನುಡಿ ವಾರ್ತೆಕಮಲನಗರ



ತಾಲೂಕಿನ ಭೋಪಾಳಗಡ್ ಬೇಳಕುಣಿ ಗ್ರಾಮದ ವಿದ್ಯಾರ್ಥಿನಿ ಶೋಭಾ ತಂದೆ ಸಂತೋಷ ರಾನಡೆ ಅವರ ಧೀಢೀರ್ ಸಾವಿನ ಸುದ್ದಿ ಇಡೀ ರಾಜ್ಯವನ್ನೇ ಬೆಚ್ಚಿಬೀಳಿಸಿದೆ. ಮಗಳ ನಿಗೂಢ ಸಾವಿನಿಂದ ತೀವ್ರ ಆಘಾತ ಹಾಗೂ ನೋವಿನಲ್ಲಿರುವ ಶೋಭಾ ಅವರ ನಿವಾಸಕ್ಕೆ ಮಾಜಿ ವಿಧಾನಪರಿಷತ್ ಸದಸ್ಯರು, ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಸದಸ್ಯರು, ಕೆಪಿಸಿಸಿ ಉಪಾಧ್ಯಕ್ಷರು ಹಾಗೂ ಸಮತಾ ಪ್ರತಿಷ್ಠಾನ ಕಾರ್ಯ ಸಮಿತಿಯ ಅಧ್ಯಕ್ಷರಾದ ಕೌಟೆ ಪುಂಡಲೀಕರಾವ ಶೇಟ್ಟಿಬಾ ಅವರು ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.ಮೃತ ವಿದ್ಯಾರ್ಥಿನಿ ಶೋಭಾಳ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದ್ದು, ಪೋಷಕರ ಕಣ್ಣೀರು ಭೇಟಿ ನೀಡಿದ ಪ್ರತಿಯೊಬ್ಬರ ಮನ ಕರಗಿಸುವಂತಿತ್ತು.ಮಗಳ ಅಗಲಿಕೆಯಿಂದ ಕಂಗಾಲಾಗಿರುವ ಪೋಷಕರೊಂದಿಗೆ ಎಸ್‌ಪಿಕೆ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಕೆ. ಪುಂಡಲೀಕರಾವ ಅವರು ಕೆಲ ಕಾಲ ಚರ್ಚಿಸಿ, ಧೈರ್ಯ ತುಂಬಿದರು.ಇದೇ ವೇಳೆ, "ನಮ್ಮ ಮಗಳ ಸಾವಿಗೆ ಕಾರಣವಾದ ಆರೋಪಿಗೆ ಯಾವುದೇ ಕಾರಣಕ್ಕೂ ವಿನಾಯಿತಿ ನೀಡಬಾರದು, ಆತನಿಗೆ ಕಠಿಣಾತಿ ಕಠಿಣ ಶಿಕ್ಷೆಯಾಗಬೇಕು,"ಎಂದು ಮೃತಳ ಪಾಲಕರು ಕಣ್ಣೀರಿಡುತ್ತಾ ಆಗ್ರಹಿಸಿದರು.ನಾಲಂದಾ ಶಾಲಾ ಸಿಬ್ಬಂದಿಯಿಂದ ಕಂಬನಿ:ಇದೇ ಸಂದರ್ಭದಲ್ಲಿ ಔರಾದ್ (ಬಾ) ನಗರದ ನಾಲಂದಾ ಪ್ರೌಢ ಶಾಲೆಯ ಸಮಸ್ತ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಮೃತಳ ನಿವಾಸಕ್ಕೆ ಭೇಟಿ ನೀಡಿದ್ದರು.ಶೋಕಸಾಗರದಲ್ಲಿ ಮುಳುಗಿರುವ ಕುಟುಂಬದವರ ದುಃಖದಲ್ಲಿ ಭಾಗಿಯಾಗಿ ಕಂಬನಿ ಮಿಡಿದ ಸಿಬ್ಬಂದಿ, ಕುಟುಂಬಕ್ಕೆ ಧೈರ್ಯ ತುಂಬಿ ತಾವೆಲ್ಲರೂ ಜೊತೆಗೆ ಇರುವುದಾಗಿ ಅಭಯ ವ್ಯಕ್ತಪಡಿಸಿದರು.

ಸ್ಥಳೀಯ ಮುಖಂಡರು, ಗ್ರಾಮಸ್ಥರು ಹಾಗೂ ಶೋಭಾಳ ಹಿತೈಷಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದು, ಮೃತಳ ಆತ್ಮಕ್ಕೆ ಶಾಂತಿ ಕೋರಿದರು.

# ಕೊಂಚೂರು ಡಿಗ್ಗಿ ತಾಂಡಾ ಗುಂಡಿಗೆ ಬಿದ್ದು ಮಗು ಸಾವನಪ್ಪಿದ ಪ್ರಕರಣ:ಅಕ್ರಮ ಗಣಿಗಾರಿಕೆ ನಡೆದಿಲ್ಲ, ಇಲಾಖೆ ಸ್ಪಷ್ಟನೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.18–ಕಳೆದ ಮೇ 6 ರಂದು ಜಿಲ್ಲೆಯ ಚಿತ್ತಾಪುರ ತಾಲೂಕಿನ ಕೊಂಚೂರು ಡಿಗ್ಗಿ ತಾಂಡಾ ಬಳಿಯ ಹೊಂಡದಲ್ಲಿ ಮಗುವೊಂದು ಬಿದ್ದು ಸಾವನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಕ್ರಮ ಗಣಿಗಾರಿಕೆಯಿಂದ ಮಗು ಸಾವನಪ್ಪಿದೆ ಎಂದು ಕೆಲವರು ಆರೋಪಿಸುತ್ತಿದ್ದು ಇದು ಸತ್ಯಕ್ಕೆ ದೂರಾಗಿದೆ. ಅಲ್ಲಿ ನಡೆಯುತ್ತಿರುವ ಗಣಿಗಾರಿಕೆ ಕಾನೂನುಬದ್ದವಾಗಿಯೆ ನಡೆ–ಯುತ್ತಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಉಪನಿರ್ದೇಶಕ ಸೋಮಶೇಖರ ಮತ್ತು ಕಲಬುರಗಿ ನಗರದ ದಕ್ಷಿಣ ಉಪ ವಿಭಾಗದ ಎ.ಸಿ.ಪಿ ಎಸ್. ಎಚ್.ಸುಬೇದಾರ ಅವರು ಸ್ಪಷ್ಟನೆ ನೀಡಿದ್ದಾರೆ.ಚಿತ್ತಾಪುರ ತಾಲೂಕಿನ ಕೊಂಚೂರು ಗ್ರಾಮದ ಸರ್ವೆ ನಂ. 99/*/2 ರಲ್ಲಿ ಐದು ಎಕರೆ ಪಟ್ಟಾ ಜಮೀನಿನಲ್ಲಿ ಮುರಂ ತೆರವುಗೊಳಿಸಲು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ–1994ರ ತಿದ್ದುಪಡಿ ನಿಯಮಗಳು–2020ರ ನಿಯಮ 3A(b) ರನ್ವಯ ದಿ.17.02.2022 ರಂದು ಸಂಬಂಧಪಟ್ಟ ಹಿಡುವಳಿದಾರರಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ವತಿಯಿಂದ ಕಾರ್ಯದೇಶ ನೀಡಲಾಗಿದೆ..

ಅದರಂತೆ ಹಿಡುವಳಿದಾರರು ಸದರಿ ಜಮೀನಿನಿಂದ 60,700 ಮೆಟ್ರಿಕ್ ಟನ್ ಮುರುಮ್ ಸಾಗಾಣಿಕೆ ಮಾಡಲು ಕೆ.ಎಂ.ಎಂ.ಸಿ.ಆರ್. 1994ರ ಶೆಡ್ಯೂಲ್–ಖಖ ರನ್ವಯ ರಾಜಧನ 24,28,000 ರೂ., ಡಿ.ಎಂ.ಎಫ್ 2,42,800 ರೂ. ಹಾಗೂ ಇತರೆ ಶುಲ್ಕ ಸೇರಿ ಒಟ್ಟು 38,84,800 ರೂ. ಪಾವತಿಸಿ ಸದರಿ ಮುರಂ ಉಪಖನಿಜವನ್ನು ಸಮೀಪದ ರೈಲ್ವೆಲೈನ್ ಅಭಿವೃದ್ಧಿ ಕಾಮಗಾರಿಗೆ ಬಳಸಲಾಗುತ್ತಿದೆ. ಇನ್ನು ಸದರಿ ಸ್ಥಳದಲ್ಲಿ ತಂತಿಬೇಲಿಯ ಮೂಲಕ ಸುರಕ್ಷತಾ ಕ್ರಮಗಳನ್ನು ಸಹ ಕೈಗೊಳ್ಳಲಾಗಿದೆ.

ಹೀಗಿದ್ದಾಗಿಯೂ ಮೇ 6 ರಂದು ನಡೆದ ದುರ್ಘಟನೆಯ ಹಿನ್ನೆಲೆಯಲ್ಲಿ ಕೆಲವು ವ್ಯಕ್ತಿಗಳು ಸಾಮಾಜಿಕ ಜಾಲತಾಣಗಳಲ್ಲಿ, ಅಕ್ರಮ ಗಣಿಗಾರಿಕೆ ನಡೆದಿದೆ ಎಂಬ ರೀತಿಯಲ್ಲಿ ಸುಳ್ಳು ಹಾಗೂ ಸಾರ್ವಜನಿಕರನ್ನು ದಾರಿತಪ್ಪಿಸುವ ಮಾಹಿತಿ ಹರಡುತ್ತಿದ್ದು, ಇಂತಹ ಸುಳ್ಳು ಸುದ್ದಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು ಎಂದಿರುವ ಅವರು, ಸಾರ್ವಜನಿಕರಲ್ಲಿ ಅನಾವಶ್ಯಕ ಗೊಂದಲ ಹಾಗೂ ಶಾಂತಿ ಭಂಗ ಉಂಟುಮಾಡುವ ಉದ್ದೇಶದಿಂದ ಇಂತಹ ಸುಳ್ಳು ಮಾಹಿತಿ ಹರಡುವವರ ವಿರುದ್ಧ ಕಾನೂನು ಕ್ರಮ ಸಹ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

# ಮೈಸೂರು ಸಂಸದರಿಗೆ ಆದಿವಾಸಿಗಳ ಮನವಿ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರಕ್ಕೆ ಆಗಮಿಸಿದ್ದ ಮೈಸೂರು ಕೊಡಗು ಕ್ಷೇತ್ರದ ಸಂಸದರು ಯದುವೀರ್ ಶ್ರೀಕಂಠ ದತ್ತ ಒಡೆಯರ್ ರವರಿಗೆ ಕುಮಾರ್ ಸ್ವಾಮಿ ಗಣೇಶ ರವರ ನೂತನ ಹೋಟೆಲ್ಲನಲ್ಲಿ ನಡೆದ ಸಭೆಯಲ್ಲಿ ಡೀಡ್ ಶ್ರೀಕಾಂತ್ ಮೂರು ಪ್ರಮುಖ ಮನವಿ ಸಲ್ಲಿಸಿದರು. ಹುಣಸೂರು ನಗರ ವ್ಯಾಪ್ತಿಯಲ್ಲಿ ಲಕ್ಷ್ಮಣ ತೀರ್ಥ ನದಿ ನಗರದ ಕೊಳಚೆ ನೀರಿನಿಂದ ಕಲುಷಿತ ಗೊಂಡಿದೆ. ಇದರ ರಕ್ಷಣೆಗೆ ಹುಣಸೂರು ನಗರ ಸಭೆ ಮುಂದಾಗಲು ಕೇಂದ್ರ ಹಾಗು ರಾಜ್ಯ ಸರ್ಕಾರಗಳು ವಿಶೇಷ ಅನುದಾನ ದೊಂದಿಗೆ ನೆರವು ನೀಡುವಂತೆ ತಾವು ಮುಂದಾಳತ್ವ ವಹಿಸಬೇಕು ಎಂದು ಮನವಿ ಮಾಡಿದ್ದಾರೆ. ಅಲ್ಲದೆ ಚಿಕ್ಕಹುಣಸೂರು ಗದ್ದೆ ಬಯಲಿಗೆ ಚಿಕ್ಕಹುಣಸೂರು ಬಡಾವಣೆಯ ಕೊಳಚೆ ನೀರು 15ಎಕರೆ ಬತ್ತದ ಗದ್ದೆಗೆಹರಿದು ಕೃಷಿಗೆ ತೊಂದರೆ ಆಗಿದೆ, ನಗರಸಭೆ ಗಮನಕ್ಕೆ ತಂದರೂ ಕ್ರಮವಹಿಸುತ್ತಿಲ್ಲ ಕೂಡಲೆ ಸಿಮೆಂಟ್ ಚರಂಡಿ ನಿರ್ಮಿಸಿ ಬತ್ತದ ಗದ್ದೆಗೆ ಕೊಚೆ ಸೇರದಂತೆ ಕ್ರಮವಹಿಸಲು ಸೂಚಿಸಬೇಕೆಂದು ವಿನಂತಿಸಿದ್ದಾರೆ.ಚಿಕ್ಕ ಹುಣಸೂರು ಕೆರೆ ಕಸದ ತೊಟ್ಟಿ ಯಂತಾಗಿದೆ ಗೋವಿಂದನಹಳ್ಳಿ ಗ್ರಾಮ ಪಂಚಾಯತ್ ಹಾಗು ಹುಡಾ ಕೆರೆರಕ್ಷಿಸಲು ಜೈವಿಕ ಇಂಧನ ಮರಬೆಳೆಸಲು,ಪಾದಚಾ ರಿಗಳಿಗೆ ನಿರ್ಮಿಸಿರುವ ದಾರಿಯಲ್ಲಿ ಮುಳ್ಳಿನ ಗಿಡ ಬೆಳೆದಿರುವುದನ್ನು ತೆಗೆದು ದಾರಿ ಸುಗಮಗೊಳಿಸಲು ಮುಂದಾಗುವಂತೆ ಸೂಚಿಸಲು ವಿನಂತಿಸಿದ್ದಾರೆ.ಎನ್ ಎಸ್ ತಿಟ್ಟಿನ ಅರಸು ಬಡಾವಣೆ ಕೊಳಚೆ ನೀರು ಡೀಡ್ ನಿವೇಶನಕ್ಕೆ ಬಿಟ್ಟು ಕಲುಷಿತ ಗೊಳಿಸಲಾಗುತ್ತಿದೆ. ನಗರ ಸಭೆಗೆ ಈ ಸಂಬಂಧ ಮನವಿ ಮಾಡಿದರೂ ಕ್ರಮವಹಿಸುತ್ತಿಲ್ಲ ಕಾನೂನಿನಂತೆ ಕ್ರಮವಹಿಸಲು ಸೂಚಿಸಬೇಕೆಂದು ಮನವಿ ಮಾಡಿದ್ದಾರೆ.

ಕರ್ನಾಟಕ ಸರ್ಕಾರ ಹೈ ಕೋರ್ಟ್ ಆದೇಶ ಜಾರಿಗೊಳಿಸದೇ ಹತ್ತುವರ್ಷ ಸುಮ್ಮನೆ ಇರುವುದರಿಂದ 3418 ಆದಿವಾಸಿ ಕುಟುಂಬಗಳಿಗೆ ಪುನರ್ವಸತಿ ಸಿಗದೇ ಕೂಲಿ ಮಾಡಿ ಕಷ್ಟದಲ್ಲಿ ಜೀವಿಸುವಂತಾಗಿದೆ. ಅಲ್ಲದೆ ಒಳಮೀಸಲಾತಿಯನ್ನು ಹೈ ಕೋರ್ಟ್ ಸಮಿತಿ ಅಸ್ನಾದಿ ವರದಿಯಂತೆ ಜಾರಿಮಾಡದೆ ಇರುವುದರಿಂದ ಆದಿವಾಸಿಗಳು ರಾಜಕೀಯ ಶಕ್ತಿ ಯಿಂದ ವಂಚಿತ ರಾಗಿದದ್ದಾರೆ ಈ ಸಂಬಂಧ ರಾಜ್ಯ ಹಾಗು ಕೇಂದ್ರ ಸರ್ಕಾರಗಳೊಂದಿಗೆ ಆದಿವಾಸಿಗಳ ಪರವಾಗಿ ಮಾತನಾಡಿ ಆದಿವಾಸಿಯೊಬ್ಬರನ್ನು ಎಂ ಎಲ್ ಸಿ ಯಾಗಿ ನಾಮನಿರ್ದೇಶನ ಮಾಡಲು ಕರ್ನಾಟಕ ಸರ್ಕಾರವನ್ನು ಒತ್ತಾಯಿಸಲು ವಿನಂತಿಸಿದ್ದಾರೆ.ಈ ಸಂದರ್ಭ ದಲ್ಲಿ ತಾಲೂಕಿನ ಬಿ ಜೆ ಪಿ ಮುಖಂಡರು ಗಳಾದ ನಾಗರಾಜ್ ಮಲ್ಲಾಡಿ, ಹಳ್ಳದಕೊಪ್ಪಲ್ ನಾಗಣ್ಣ, ಗಣೇಶ ಕುಮಾರಸ್ವಾಮಿ, ಹನಗೋಡು ಮಂಜುನಾಥ್ ಕಚ್ಚುವಿನಹಳ್ಳಿ ಗಣಪತಿ, ಮುಖಂಡ ನಾರಾಯಣ,ವಿವೇಕಾನಂದ ಉಪಸ್ಥಿತರಿದ್ದರು

# ಕೆ.ಕೆ.ಆರ್.ಡಿ.ಬಿ ಮಂಡಳಿಯಲ್ಲಿ ಕಾನೂನು ಸಲಹೆಗಾರರ ಹುದ್ದೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.18: ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಾರ್ಯಾಲಯದಲ್ಲಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸಲು ಓರ್ವ ಕಾನೂನು ಸಲಹೆಗಾರರ ಹುದ್ದೆಗೆ ಅರ್ಹ ಎಲ್.ಎಲ್.ಬಿ ಕಾನೂನು ಪದವಿಧರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಬಾರ್ ಕೌನ್ಸಿಲ್ ಆಫ್ ಇಂಡಿಯಾ ಅಥವಾ ಬಾರ್ ಕೌನ್ಸಿಲ್ ಆಫ್ ಕರ್ನಾಟಕದಲ್ಲಿ ನೋಂದಣಿಯಾಗಿರಬೇಕು. ವಕೀಲ ವೃತ್ತಿಯಲ್ಲಿ ಸಿವಿಲ್ ಪ್ರಕರಣಗಳಲ್ಲಿ ಕನಿಷ್ಠ 5 ವರ್ಷಗಳ ಅನುಭವ ಹೊಂದಿದ ಹಾಗೂ ಕಲಬುರಗಿಯಲ್ಲಿ ವಕೀಲ ವೃತ್ತಿಯ ಕಚೇರಿ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಆಯ್ಕೆಯಾಗುವ ಅಭ್ಯರ್ಥಿಗೆ ಮಾಸಿಕ 30,000 ರೂ. ಗೌರವಧನ ನೀಡಲಾಗುವುದು ಎಂದು ಮಂಡಳಿ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲೆಗಳು ಮತ್ತು ತಮ್ಮ ಸ್ವ–ವಿವರದೊಂದಿಗೆ ಇದೇ ಮೇ 25ರೊಳಗಾಗಿ ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಕಲಬುರಗಿ ಇವರಿಗೆ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.ಹೆಚ್ಚಿನ ಮಾಹಿತಿಗಾಗಿ ಮಂಡಳಿಯ ಅಧಿಕೃತ ವೆಬ್‌ಸೈಟ್ hkrdb.kar.nic.in ವೀಕ್ಷಿಸಬಹುದು ಅಥವಾ ಮಂಡಳಿ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ.

# ಗುರುಮಠಕಲ್ ಪೊಲೀಸ್ ಠಾಣೆಗೆ ಹೊಸ ಸಾರಥಿಯಾಗಿ ದೌಲತ್ ಎನ್. ಕುರಿ ನೇಮಕ.



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ರಾಜ್ಯ ಪೊಲೀಸ್ ಇಲಾಖೆಯಲ್ಲಿ ನಡೆದ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆಯಲ್ಲಿ ಗುರುಮಠಕಲ್ ಪೊಲೀಸ್ ಠಾಣೆಗೆ ದೌಲತ್ ಎನ್. ಕುರಿ ಅವರನ್ನು ನೂತನ ಪೊಲೀಸ್ ಇನ್ಸ್‌ಪೆಕ್ಟರ್ ಆಗಿ ನೇಮಕ ಮಾಡಲಾಗಿದೆ.ದೌಲತ್ ಎನ್. ಕುರಿ ಅವರು ಈ ಹಿಂದೆ ಕಲಬುರಗಿ ನಗರ ವ್ಯಾಪ್ತಿಯಲ್ಲಿ ಸೇವೆ ಸಲ್ಲಿಸುತ್ತಿದ್ದು, ಇದೀಗ ಗುರುಮಠಕಲ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಆಗಿ ಭಾನುವಾರ ಅಧಿಕಾರ ಸ್ವೀಕರಿಸಿದ್ದಾರೆ.ಹೊಸ ಇನ್ಸ್‌ಪೆಕ್ಟರ್ ಆಗಿ ಆಗಮಿಸಿದ ಅವರನ್ನು ಪೊಲೀಸ್ ಠಾಣೆಯ ಸಿಬ್ಬಂದಿ ಆತ್ಮೀಯವಾಗಿ ಸ್ವಾಗತಿಸಿದರು.

# ಹಜ್ ಯಾತ್ರಿಗಳಿಗೆ ಶುಭಕೋರಿ ಬಿಳ್ಕೋಡುಗೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಹಜ್ ಯಾತ್ರೆಗೆ ತೆರಳುತ್ತಿರುವ ಯಾತ್ರಿಗಳಿಗೆ 10ನೆಯ ಬ್ಯಾಚಿನ ಬೆಂಗಳೂರಿನ ಹಜ್ ಭವನ್ ಶುಭ ಹಾರಿಸಿದರು ರಾಜ್ಯದ ಹಜ್ ಸಮಿತಿಯ ಅಧ್ಯಕ್ಷರಾದ ಜುಲೆಕಾರ್ ರವರನ್ನು ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು ಎಂದು ಮೈಸೂರು ಜಿಲ್ಲಾ ಹಜ್ಜೆ ಸಮಿತಿಯ ಸದಸ್ಯರು ಅಜ್ಗರ್ ಪಾಶ ತಿಳಿಸಿದ್ದಾರೆ

ನಂತರ ಸುದ್ದಿಗಾರರೊಂದಿಗೆ ಮಾತನಾಡಿ ರಾಜ್ಯದಿಂದ ಹಜ್ಜೆ ಯಾತ್ರೆಗೆ ತರಳುತ್ತಿರುವ ಯಾತ್ರಿಗಳಿಗೆ ಹತ್ತನೇ ವಿಮಾನ ಇದಾಗಿದೆ ಎಲ್ಲಾ ಯಾತ್ರಿಗಳು 620 ಮಂದಿಗಳಿಗೆ ಯಶಸ್ವಿಯಾಗಿ ಶುಭ ಕೋರಿ ತಾಯ್ನಾಡಿಗೆ ಶ್ರದ್ಧೆ ಭಕ್ತಿಯಿಂದ ಪ್ರಾರ್ಥನೆ ಸಲ್ಲಿಸಿ ಮರಳಿ ಎಂದು ಶುಭ ಹಾರೈಸುತ್ತೇವೆ ಎಂದರು

ಈ ಸಂದರ್ಭದಲ್ಲಿ ಹಜ್ಜೆ ಸಮಿತಿಯ ಮೈಸೂರಿನ ಜಿಲ್ಲಾಧ್ಯಕ್ಷರಾದ ಅಜಿಜುಲ್ಲಾ ಅಜ್ಜು ಸಮಿತಿಯ ಸದಸ್ಯರಾದ ಅಜ್ಗರ್ ಪಾಷಾ ಸಮೀವುಲ್ಲಾ ಪ್ರಮುಖ ಗುರುಗಳಾದ ಶಾಬುದ್ದೀನ್ ಇಬ್ರಾಹಿಂ ಹಾಗೂ ಇನ್ನಿತರು ಹಾಜರಿದ್ದರು

# ಸಾರ್ವಜನಿಕರಿಗೆ ನಿಗದಿತ ಸಮಯದಲ್ಲಿ ಸೌಲಭ್ಯ ದೊರೆಯಲಿ: ಜಿಲ್ಲಾಧಿಕಾರಿ ಎಸ್.ಪೂವಿತಾ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.18: ಸಾರ್ವಜನಿಕರಿಗೆ ನಿಗದಿತ ಸಮಯದಲ್ಲಿ ಸರ್ಕಾರದ ಯೋಜನೆ, ಸೌಲಭ್ಯಗಳು ದೊರೆಯಬೇಕು. ಅಲ್ಲದೆ ಕಂದಾಯ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ಆದ್ಯತೆ ಮೇರೆಗೆ ವಿಲೇವಾರಿ ಮಾಡಬೇಕೆಂದು ಜಿಲ್ಲಾಧಿಕಾರಿಗಳಾ ಎಸ್.ಪೂವಿತಾ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೇ.18ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ತಹಶಿಲ್ದಾರರೊಂದಿಗೆ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆಡಳಿತಾತ್ಮಕ ಸುಧಾರಣೆ, ಭೂ ದಾಖಲೆಗಳ ನಿರ್ವಹಣೆ ಮತ್ತು ಸಾರ್ವಜನಿಕ ಸೇವೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಪೋಡಿ, ದುರಸ್ತಿ, ಪಹಣಿ ತಿದ್ದುಪಡಿ, ಮತ್ತು ಭೂ ಒತ್ತುವರಿ ತೆರವು ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಅಗತ್ಯ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪಿಂಚಣಿ ಯೋಜನೆಗಳು, ಆರ್‌ಟಿಸಿ ವಿತರಣೆ, ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು



ಕಾಲಮಿತಿಯೊಳಗೆ ಜನರಿಗೆ ತಲುಪಿಸಬೇಕು. ಸರ್ಕಾರದ ಬಾಕಿ ಬಿದ್ದಿರುವ ಕಂದಾಯ, ಮತ್ತು ಮರಳು ಗಣಿಗಾರಿಕೆಯ ಮೇಲಿನ ದಂಡಗಳನ್ನು ಸಮರ್ಪಕವಾಗಿ ವಸೂಲಿ ಮಾಡಬೇಕು. ಅಲ್ಲದೆ ಪ್ರಾಕೃತಿಕ ವಿಕೋಪಗಳ ಸಂದರ್ಭದಲ್ಲಿ ಕೈಗೊಳ್ಳಬೇಕಾದ ತುರ್ತು ಪರಿಹಾರ ಕ್ರಮಗಳ ಕುರಿತು ಅಗತ್ಯ ಸಿದ್ಧತೆ ಕೈಗೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಕೆಳಮಟ್ಟದ ಕಂದಾಯ ಕಚೇರಿಗಳಾದ ನಾಡ ಕಚೇರಿಗಳು ಮತ್ತು ತಹಶೀಲ್ದಾರ್ ಕಚೇರಿಯಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಪಾರದರ್ಶಕ ಆಡಳಿತ ಸಂಬಂಧಿಸಿದ ಅಧಿಕಾರಿಗಳು ನೀಡಬೇಕು. ಹಾಗೂ ಸಾರ್ವಜನಿಕರಿಂದ ಸ್ವೀಕರಿಸಲ್ಪಟ್ಟ ಅರ್ಜಿಗಳ ಪ್ರಗತಿ ಪರಿಶೀಲನೆ ನಡೆಸಿ, ನಿಗದಿತ ಗಡುವಿನೊಳಗೆ ಕೆಲಸಗಳನ್ನು ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ವಿಭಾಗದ ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಲಿಂಗಸುಗೂರು ವಿಭಾಗದ ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮಾ, ಲಿಂಗಸುಗೂರು ತಹಶಿಲ್ದಾರ್ ಸತ್ಯಮ್ಮ, ದೇವದುರ್ಗ ತಹಶಿಲ್ದಾರ್ ನಾಗಮ್ಮ ಕಟ್ಟಿಮನಿ, ಸಿಂಧನೂರು ತಹಶಿಲ್ದಾರ್ ಅರುಣ್ ಕುಮಾರ್ ದೇಸಾಯಿ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿಯ ಕಂದಾಯ ವಿಭಾಗದ ವಿವಿಧ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

# ಬುಡಕಟ್ಟು ಸಮುದಾಯವನ್ನು ಮುಖ್ಯ ವಾಹಿನಿಗೆ ತರುವ ಕಾರ್ಯವಾಗಲಿ: ಎಡಿಸಿ ಶಿವಾನಂದ

• ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.18: ಸರ್ಕಾರದ ಯೋಜನೆಗಳನ್ನು ಬುಡಕಟ್ಟು ಸಮುದಾಯದ ಅರ್ಹ ಫಲಾನುಭವಿಗಳ ಮನೆ ಮನೆಗೆ ತಲುಪಿಸುವ ಮೂಲಕ ಅವರನ್ನು ಆರ್ಥಿಕ ಹಾಗೂ ಸಾಮಾಜಿಕವಾಗಿ ಮುಖ್ಯ ವಾಹಿನಿಗೆ ತರುವ ಕಾರ್ಯ ಆಗಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮೇ.18ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ರಾಯಚೂರು ಇವರ ಸಹಯೋಗದಲ್ಲಿ ಏರ್ಪಡಿಸಿದ್ದ ಧರ್ತಿ ಆಭಾ ಜನಜಾತೀಯ ಗ್ರಾಮ ಉತ್ಕರ್ಷ್ ಅಭಿಯಾನ ಕಾರ್ಯಕ್ರಮದಡಿ ಜನ್ ಭಾಗೀದಾರ ಸಬ್ಸೆ ದೂರ, ಸಬ್ಸೆ ಪೆಹ್ಲೆ ಅಭಿಯಾನ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಅಭಿಯಾನದಲ್ಲಿ ಆಧಾರ್ ಕಾರ್ಡ್, ರೇಷನ್ ಕಾರ್ಡ್, ಆಯುಷ್ಮಾನ್ ಭಾರತ ಕಾರ್ಡ್ , ಜಾತಿ ಪ್ರಮಾಣ ಪತ್ರ, ಪಿಎಂ ಕಿಸಾನ್ ಕ್ರೆಡಿಟ್ ಕಾರ್ಡ್, ಜನಧನ್ ಬ್ಯಾಂಕ್ ಖಾತೆ, ಸಾಮಾಜಿಕ ಭದ್ರತಾ ಯೋಜನೆಗಳಾದ ವೃದ್ದಾಪ್ಯ ಪಿಂಚಣಿ, ವಿಧವಾ ಪಿಂಚಣಿ, ದಿವ್ಯಾಂಗ ಪಿಂಚಣಿ ಹಾಗೂ ಉದ್ಯೋಗ ಮತ್ತು ಜೀವನೋಪಾಯ ಯೋಜನೆಗಳಾದ ಪಿಎಂ ವಿಶ್ವಕರ್ಮ, ಮುದ್ರಾ ಸಾಲಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡದರು.

ಗ್ರಾಮ ಮಟ್ಟದಲ್ಲಿ ಫಲಾನುಭವಿಗಳಿಗೆ ಆರೋಗ್ಯತಪಾಸಣೆ ಶಿಬಿರ ಕಾರ್ಯಕ್ರಮಗಳನ್ನು ಆಯೋಜಿಸುವುದು. ಆದಿಕರ್ಮಯೋಗಿ ಹಾಗೂ ಎನ್.ಜಿ.ಓ.ಗಳ ಮೂಲಕ ಗ್ರಾಮಗಳಲ್ಲಿ ಟ್ರಾನ್ಸೆಕ್ಸ್ ವಾಕ್ ನಡೆಸಬೇಕು. ಅವರ ಅಹವಾಲು ಸ್ವೀಕಾರ ಹಾಗೂ ತ್ವರಿತವಾಗಿ ಪರಿಹಾರ ಕೈಗೊಳ್ಳಬೇಕು. ಈ ಕುರಿತು ಪ್ರಗತಿ ವರದಿ ಸಿದ್ಧಪಡಿಸಿ, ಅದರಂತೆ ಮುಂದಿನ ಕ್ರಮ ಕೈಗೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಸಿಡಾಕ್ ಜಂಟಿ ನಿರ್ದೇಶಕ ಜಿ.ಯು.ಹುಡೇದ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶಿವಮಾನ್ಯಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಶರಣಮ್ಮ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

# ಮೇ 20ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.18: ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.20ರ ಬೆಳಿಗ್ಗೆ 08 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಕಲ್ಮಲಾ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ 8ರಿಂದ ಕಲ್ಮಲಾ, ಮುರಾಂಪುರ, ಸುಲ್ತಾನಪುರ, ಜಾಗೀರವೆಂಕಟಪುರ, ಮಂಚ್ಲಾಪುರ, ಜೇಗರಕಲ್, ರಘುನಾಥನಹಳ್ಳಿ, ವಿಜಯನಗರಕ್ಯಾಪ್, ಮಾರೆಮ್ಮಕ್ಯಾಪ್, ಹುಣಿಸಿಹಾಳಹುಡ, ಕಸ್ಬೆಕ್ಯಾಂಪ್, ಸೀತಾನಗರನಗರ ಕ್ಯಾಂಪ್, ಹೊಸ್ಪೇಟ, ಮರ್ಚೆಡ್, ಗೋನಾಳ, ಪತ್ತೇಪುರ, 7 ಮೇಲ್ ಇಂಡಸ್ಟ್ರೀಯಲ್ ಏರಿಯಾ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರು ನಾರಿ-ಕಿಲ್ಟ್ ಯೋಜನೆ ಸೌಲಭ್ಯ ಪಡೆದುಕೊಳ್ಳಿ : ಪಿಡಿಒ ನಾಗರತ್ನ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ, 18 :ಕರ್ನಾಟಕ ಸರ್ಕಾರವು ಗ್ರಾಮೀಣ ಪ್ರದೇಶದ ಅತ್ಯಂತ ನಿರ್ಗತಿಕ ಕುಟುಂಬಗಳು, ವಿಶೇಷವಾಗಿ ಮಹಿಳೆಯರ ಸಬಲೀಕರಣಕ್ಕಾಗಿ ಜಾರಿಗೆ ತಂದಿರುವ ಮಹತ್ವಕಾಂಕ್ಷೆಯ ನಾರಿ–ಕಿಲ್ಪ್ ಯೋಜನೆಯಡಿ ದೊರೆಯುವ ಸೌಲಭ್ಯಗಳನ್ನು ಪ್ರತಿಯೊಬ್ಬ ನಾಗರೀಕರು ಪಡೆದುಕೊಳ್ಳಬೇಕು ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ನಾಗರತ್ನ ತಿಳಿಸಿದರು. ತಾಲೂಕ ಪಂಚಾಯತಿ ಗುರುಮಠಕಲ್, ಗ್ರಾಮ ಪಂಚಾಯತಿ ಯಲ್ಹೇರಿ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಯಾದಗಿರಿ ಸಹಯೋಗದಲ್ಲಿ "ಪ್ರತಿ ನಾಗರಿಕರಿಗೆ ದಾಖಲೆ, ಪ್ರತಿ ಹಕ್ಕಿಗೆ ಭದ್ರತೆ" ಎಂಬ ಘೋಷ ವಾಕ್ಯದಡಿಯಲ್ಲಿ ಆಯೋಜಿಸಲಾದ ದಾಖಲಾತಿ ಸಪ್ತಾಹ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸಾರ್ವಜನಿಕರಿಗೆ ಸರಕಾರದಿಂದ ಅನುಷ್ಟಾನಗೊಳ್ಳುತ್ತಿರುವ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಉಚಿತವಾಗಿ ಆಯುಷ್ಮಾನ್, ಇ–ಶ್ರಮ, ಆಧಾರ ಕಾರ್ಡ್, ಪ್ಯಾನ್ ಕಾರ್ಡ್ ಹಾಗೂ ಪ್ರಧಾನ ಮಂತ್ರಿ ರೈತ ಸಮ್ಮಾನ್ ಪಿಂಚಣಿ ಯೋಜನೆಯಂತಹ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದರು. ನಾರಿ ಕಿಲ್ಪ್ ತಾಲ್ಲೂಕು ಸಂಯೋಜಕರಾದ ಶ್ರೀ. ಬಂದೇನವಾಜ್ ಮಾತನಾಡಿ ಗ್ರಾಮೀಣ ಪ್ರದೇಶದಲ್ಲಿ ಸರಕಾರದಿಂದ ಉಚಿತವಾಗಿ ದೊರೆಯುವ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಂಡು ಆರ್ಥಿಕವಾಗಿ ಸದೃಢರಾಗಲು ಸಾಕಷ್ಟು ಅವಕಾಶಗಳಿವೆ. ಅವುಗಳನ್ನು ಸುಲಭವಾಗಿ ಸಾರ್ವಜನಿಕರು ಪಡೆದುಕೊಳ್ಳಬಹುದು. ಶಿಬಿರದಲ್ಲಿ ಆಯುಷ್ಮಾನ್ ಕಾರ್ಡ್–45, ಇ–ಶ್ರಮ ಕಾರ್ಡ್–15, ಪ್ಯಾನ್ ಕಾರ್ಡ್–3 ಹಾಗೂ ಪ್ರಧಾನ ಮಂತ್ರಿ ರೈತ ಸಮ್ಮಾನ್ ಪಿಂಚಣಿ ಯೋಜನೆಯಡಿ 5 ಅರ್ಜಿಗಳನ್ನು ಸಲ್ಲಿಸಿ ಉಚಿತವಾಗಿ ದಾಖಲೆಗಳನ್ನು ವಿತರಿಸಲಾಯಿತು ಎಂದು ಅಭಿಯಾದಲ್ಲಿ ತಿಳಿಸಿದರು. ಅಭಿಯಾನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿ. ಸಿ. ಟ್ರಸ್ಟ್ (ರಿ) ಯಾದಗಿರಿ ತಾಲೂಕ ನೋಡಲ್ ಅಧಿಕಾರಿ ಸುನೀಲ್, ಯಲ್ಹೇರಿ ಗ್ರಾಮ ಪಂಚಾಯತ ನಾರಿ–ಕಿಲ್ಪ್ ಸಂಪನ್ಮೂಲ ವ್ಯಕ್ತಿ ಶಾರದಮ್ಮ, ಪಂಚಾಯತ ಸಿಬ್ಬಂದಿಗಳು, ಗ್ರಾಮದ ಮುಖಂಡರು ಹಾಗೂ ಸಾರ್ವಜನಿಕರು ಅಭಿಯಾನದಲ್ಲಿ ಉಪಸ್ಥಿತರಿದ್ದರು.

# ಮಹಾನ್ ಮಾನವತಾವಾದಿ ಜ್ಯೋತಿರಾವ್ ಫುಲೆ ಅವರ ಜೀವನ ವ್ಯಕ್ತಿತ್ವ ಮಕ್ಕಳು ಬೆಳಿಸಿಕೊಳ್ಳಬೇಕು : ಶರಣು ಗಡ್ಡಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಹಾನ್ ಮಾನವತಾವಾದಿ ಜ್ಯೋತಿರಾವ್ ಫುಲೆ ಅವರ 200 ನೇ ಜನ ವಾರ್ಷಿಕೋತ್ಸವ ಸಂದರ್ಭದಲ್ಲಿ ಎಐಡಿಎಸ್‌ಓ ವತಿಯಿಂದ ಹಿರೇಕಾಸನಕಂಡಿ ಗ್ರಾಮದಲ್ಲಿ ಮಕ್ಕಳ ಶಿಬಿರ ಸಂಘಟಿಸಲಾಗಿತ್ತು. ಶಿಬಿರವನ್ನು ಉದ್ದೇಶಿಸಿ ಮಾತನಾಡಿದ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಜಿಲ್ಲಾ ಮುಖಂಡರು ಹಾಗೂ ಹೋರಾಟಗಾರರಾದ ಶರಣು ಗಡ್ಡಿ ಅವರು, ಇಂದಿನ ಸಾಮಾಜಿಕ ವಾತಾವರಣ ಮೌಲ್ಯಗಳಿಲ್ಲದೆ ಕೊಳೆತು ಹೋಗಿದೆ, ಇಂತಹ ಪರಿಸ್ಥಿತಿಯಲ್ಲಿ ಮಕ್ಕಳಿಗೆ ಕೇವಲ ಅಂಕಗಳಿಸಲು ಶಿಕ್ಷಣ ನೀಡುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ, ಆದ್ದ–ರಿಂದ ಮಕ್ಕಳೆಲ್ಲರೂ ಮಹಾನ್ ವ್ಯಕ್ತಿಗಳ ಹೋರಾಟದ ಬದುಕು ಮತ್ತು ಅವರು ಪಾಲಿಸಿದ ನೈತಿಕ ಪರಿಚಯಿಸುವುದರಿಂದ ಮಾತ್ರ ನಿಮ್ಮಲ್ಲಿ ಸದೃಢ ವ್ಯಕ್ತಿತ್ವ ರೂಪಿಸಲು ಸಾಧ್ಯ, ಎಂದು ಹೇಳಿದರು.

ಶಿಬಿರದ ಮೊದಲ ಗೋಷ್ಠಿಯಲ್ಲಿ ಜ್ಯೋತಿಬಾ ಫುಲೆ ಅವರ ಜೀವನ ಕಥೆಯನ್ನು ಹೇಳುತ್ತಾ, ಅಂದು ಫುಲೆ ಅವರು ಸಾಮಾಜಿಕ ಸಂಪ್ರದಾಯದ ವಿರೋಧದ ಮಧ್ಯೆ, ಹೆಣ್ಣು ಮಕ್ಕಳಿಗಾಗಿ



ಮತ್ತು ದಲಿತ ದಮನಿತ ಮಕ್ಕಳಿಗಾಗಿ ಶಾಲೆಯನ್ನು ತೆರೆಯದಿದ್ದರೆ, ಇಂದು ನಾವ್ಯಾರೂ ಈ ಮಟ್ಟದ ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಶಿಕ್ಷಣವು ಪ್ರತಿಯೊಬ್ಬ ವ್ಯಕ್ತಿಗೂ ಉಚಿತವಾಗಿ ಮತ್ತು ಸಮಾನವಾಗಿ ಸಿಗಬೇಕು ಎಂಬುದು ಅವರ ಆಶಯವಾಗಿತ್ತು, ತಿಳಿಸಿದರು.

ಇಂದಿನ ಶಿಕ್ಷಣ ವ್ಯವಸ್ಥೆಯ ಕುರಿತು ಕಳವಳ ವ್ಯಕ್ತಪಡಿಸಿದ ಅವರು, ಒಂದೆಡೆ ಸರ್ಕಾರಗಳು ಇಂದು ಶಿಕ್ಷಣವನ್ನು ವ್ಯಾಪಾರೀಕರಣ ಮಾಡುತ್ತಿವೆ. *ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಸಾವಿರಾರು ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸಿ ಮುಚ್ಚಲಾಗುತ್ತಿದೆ. ಇದು ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳನ್ನು ಶಿಕ್ಷಣದಿಂದ ವಂಚಿತರನ್ನಾಗಿ ಮಾಡುವ ಸಂಚು ಎಂದು ಹೇಳಿದರು.

ಶಿಬಿರದಲ್ಲಿ ಮನೋರಂಜನೆ ಆಟಗಳು, ಹಾಡುಗಳು ಹಾಗೂ ಇನ್ನಿತರ ಚಟುವಟಿಕೆಗಳನ್ನು ಏರ್ಪಡಿಸಲಾಗಿತ್ತು. ಗ್ರಾಮದ ಮುಖಂಡರು ಮತ್ತು ಹಿರೇಕಾಸನಕಂಡಿ ಸಾರ್ವಜನಿಕ ಶಿಕ್ಷಣ ಸಮಿತಿಯ ದೇವಪ್ಪ, ಬಸವರಾಜಪ್ಪ, ವೀರಯ್ಯ, ವೀರೇಶ್, ಮುದಿಯಪ್ಪ, ಹನುಮಂತಪ್ಪ, ಫಕೀರಗೌಡ್ರು, ಶಾರದ ಗಡ್ಡಿ ಎಐಡಿಎಸ್‌ಓ ಜಿಲ್ಲಾ ಸಂಘಟನಾಕಾರರಾದ ಪ್ರದೀಪ್ ಪೂಜಾರ್ ಮತ್ತು ಊರಿನ ಮಕ್ಕಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜೈಲು ಬಂದಿಗಳ ಮನ ಪರಿವರ್ತನೆಗಾಗಿ ಕೊಪ್ಪಳ ಜಿಲ್ಲಾ ಕಾರಾಗೃಹದಲ್ಲಿ ಸಂವಾದ




• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ಜಿಲ್ಲಾ ಕಾರಾಗೃಹದಲ್ಲಿ 140ಕ್ಕೂ ಹೆಚ್ಚು ಬಂದಿಗಳಿದ್ದು, ಅವರ ಮನ ಪರಿವರ್ತನೆಗಾಗಿ ನಾಡಿನ ಖ್ಯಾತ ಬರಹಗಾರರು ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ನಾಡೋಜ ಡಾ. ಕುಂ.ವೀರಭದ್ರಪ್ಪರವರಿಂದ ಮೇ 15 ರಂದು ಕಾರಾಗೃಹದಲ್ಲಿ ಸಂವಾದ ನಡೆಯಿತು.

ಜಿಲ್ಲಾ ಕಾರಾಗೃಹ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಹಮ್ಮಿಕೊಂಡ ಈ ವಿಶೇಷ ಸಂವಾದ ಕಾರ್ಯಕ್ರಮದಲ್ಲಿ ಮನುಷ್ಯನ ವರ್ತನೆ, ಪೋಸ್ಕೊ ಪ್ರಕರಣಗಳು, ಜಾತಿ ವ್ಯವಸ್ಥೆ, ಬಡತನ, ಹಸಿವು ಹೀಗೆ ವಿವಿಧ ಆಸಕ್ತಿದಾಯಕ ವಿಷಯಗಳ ಕುರಿತಾಗಿ ಜೈಲು ಬಂದಿಗಳು ಪ್ರಶ್ನೆಗಳನ್ನು ಕೇಳಿ ಕುಂ.ವೀರಭದ್ರಪ್ಪ ರವರಿಂದ ಉತ್ತರ ಪಡೆದುಕೊಂಡರು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್.ಎಸ್.ದರಗದ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಅವರು ಮಾತನಾಡಿ, ಕಾರಾಗೃಹದಲ್ಲಿನ ಬಂದಿಗಳು ಮುಕ್ತವಾಗಿ ಮಾತನಾಡುವಂತಹ ವಾತಾವರಣ ಕಲ್ಪಿಸಲು ಕುಂ.ವೀರಭದ್ರಪ್ಪ ಅವರಂತಹ ಸಾಹಿತಿಗಳನ್ನು ಕಾರಾಗೃಹಕ್ಕೆ ಕರೆಯಿಸಿ ಸಂವಾದ ನಡೆಸಿದ್ದು ವಿಶೇಷ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾರಾಗೃಹದ ಅಧೀಕ್ಷಕ ಅಂಬರೀಷ್.ಎಸ್.ಪೂಜಾರಿ ಅವರು ಮಾತನಾಡಿ, ಬಂದಿಗಳ ತಲೆ ಎಣಿಸಿ ಕರ್ತವ್ಯ ನಿರ್ವಹಿಸಿದರೆ, ಕಾರಾಗೃಹದ ಬಂದಿಗಳು ಬದಲಾವಣೆ ಹೊಂದುವುದಿಲ್ಲ. ಬಂದಿಗಳನ್ನು ಬದಲಾವಣೆ ಮಾಡುವುದು ಕಾರಾಗೃಹದ ಮುಖ್ಯ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಈ ಸಂವಾದವನ್ನು ಆಯೋಜಿಸಲಾಗಿದೆ. ಡಾ. ಕುಂ.ವೀರಭದ್ರಪ್ಪ ಅವರಂತಹ ಬರಹಗಾರರ ಮಾತಿನಿಂದ ಬದಲಾವಣೆ ಹೊಂದಿ ಮರು ಸಾವಾಜೀಕರಣಗೊಂಡು ತಮ್ಮ ಕುಟುಂಬದ ಜೊತೆ ಸುಂದರ ಜೀವನ ನಡೆಸಿದರೆ ಕಾರ್ಯಕ್ರಮದ ಉದ್ದೇಶ ಸಾರ್ಥಕವಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಸಹಾಯಕ ಜೈಲರ್ ಎಫ್.ಜಿ.ಬಾರಿಕೇರ್, ಸೈಕ್ಯಾಟ್ರಿಕ್ ಕೌನ್ಸಲರ್ ಎ.ಕೆಹಾವೋಜಿ ಸೇರಿದಂತೆ ಕಾರಾಗೃಹದ ಇತರೆ ಅಧಿಕಾರಿ, ಸಿಬ್ಬಂದಿ ಹಾಗೂ ಬಂದಿಗಳು ಉಪಸ್ಥಿತರಿದ್ದರು.

# ಆರೋಗ್ಯ ಶಿಕ್ಷಣ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ ಐಸಿಸಿ/ಬಿಸಿಸಿ ವಿಭಾಗ ಕೊಪ್ಪಳ ಮತ್ತು ಸಮುದಾಯ ಆರೋಗ್ಯ ಕೇಂದ್ರ ಕುಕನೂರ ಇವರುಗಳ ಸಹಯೋಗದಲ್ಲಿ ಜ್ಞಾನ ಸಾಗರ ಕೋಚಿಂಗ್ ಕೇಂದ್ರ ಕುಕನೂರನಲ್ಲಿ ಆರೋಗ್ಯ ಶಿಕ್ಷಣ ಕಾರ್ಯಕ್ರಮ ವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಪೂಜಾರ ಮಾತನಾಡಿ ಸಾಂಕ್ರಾಮಿಕ ಮತ್ತು ಆ ಸಾಂಕ್ರಾಮಿಕ ರೋಗ ಕುರಿತು, ಬಾಲ್ಯ ವಿವಾಹ, ರೇಬಿಸ್ ,ಲೆಪ್ರೋಸಿ,ಕ್ಷಯರೋಗ,ಹದಿ ಹರೆಯದವರಲ್ಲಿ ಆಗುವ ದೈಹಿಕ ,ಮಾನಸಿಕ ,ಸಾಮಾಜಿಕ ಬದಲಾವಣೆಗಳು,ಪೌಷ್ಟಿಕ ಆಹಾರ ಸೇವನೆ,ವೈಯಕ್ತಿಕ ಸ್ವಚ್ಛತೆ,ಮುಂತಾದ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ರಾಮನಗೌಡ ಹುಚುನೂರ್ ಶಿಕ್ಷಕರು ಅನ್ವರ ಪಾಷಾ ಶಿಕ್ಷಕರು, ಕಾಳಪ್ಪ ಕುಂಬಾರ HIO, ಕಳಕಪ್ಪ ಬಂಡಿ RKSK ಆಪ್ತಸಮಾಲೋಚಕರು ಮತ್ತು ಮುದ್ದು ವಿದ್ಯಾರ್ಥಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಪ ಪಂ.ಮ್ಯೂಟೇಶನ್ ಶುಲ್ಕದ ಹೆಸರಿನಲ್ಲಿ ಶೇ.2 ವಸೂಲಿ ಸಾರ್ವಜನಿಕರ ಪರ ಧ್ವನಿಯಾದ ಹಿತರಕ್ಷಣಾ ಸಮಿತಿ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಪಟ್ಟಣ ಪಂಚಾಯತಿಯಲ್ಲಿ ಹಕ್ಕು ಬದಲಾವಣೆ (Mutation) ಪ್ರಕ್ರಿಯೆಗೆ ಮಾರುಕಟ್ಟೆ ಮೌಲ್ಯದ 2% ಶುಲ್ಕ ವಿಧಿಸಲಾಗುತ್ತಿರುವ ಕುರಿತು ಸಾರ್ವಜನಿಕರಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗುತ್ತಿರುವ ಹಿನ್ನಲೆಯಲ್ಲಿ, ಕುಕನೂರು ಪಟ್ಟಣ ಹಿತರಕ್ಷಣಾ ಸಮಿತಿಯ ಸಹಸಂಚಾಲಕರಾದ ಮಂಜುನಾಥ ನಾಡಗೌಡರ ಅವರು ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿ ನಾಗೇಶ್ ಅವರಿಗೆ ಮನವಿ ಸಲ್ಲಿಸಿ ಸಂಪೂರ್ಣ ಮಾಹಿತಿ ಬಹಿರಂಗಪಡಿಸುವಂತೆ ಹಾಗೂ ಸಾರ್ವಜನಿಕರ ಮೇಲಿನ ಆರ್ಥಿಕ ಭಾರವನ್ನು ತಕ್ಷಣ ಕಡಿಮೆ ಮಾಡುವಂತೆ ಆಗ್ರಹಿಸಿದರು.

ಮನವಿಯಲ್ಲಿ, 1964ರ ಕರ್ನಾಟಕ ಪೌರಸಭೆಗಳ ಅಧಿನಿಯಮ ಮತ್ತು ಸಂಬಂಧಿತ ನಿಯಮಾವಳಿಗಳ ಪ್ರಕಾರ ಇಂತಹ 2% ಶುಲ್ಕ ವಿಧಿಸಲು ಸ್ಪಷ್ಟವಾದ ಕಾನೂನು ಆಧಾರವಿದೆಯೇ ಎಂಬ ಪ್ರಶ್ನೆಯನ್ನು ಎತ್ತಲಾಗಿದೆ. ಜಿಲ್ಲೆಯ ಇತರೆ ಸ್ಥಳೀಯ ಸಂಸ್ಥೆಗಳಲ್ಲಿ ಅತಿ ಕಡಿಮೆ ಶುಲ್ಕ ವಸೂಲಿ ಮಾಡಲಾಗುತ್ತಿದ್ದು, ಕುಕನೂರಿನಲ್ಲಿ ಮಾತ್ರ ಮಾರುಕಟ್ಟೆ ಮೌಲ್ಯದ ಆಧಾರದ ಮೇಲೆ ಸಾವಿರಾರು ರೂಪಾಯಿ ಸಂಗ್ರಹಿಸಲಾಗುತ್ತಿದೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ತಮ್ಮ ಆಸ್ತಿ ಹಕ್ಕು ಬದಲಾವಣೆ ಮಾಡಲು ಅನಗತ್ಯ ಆರ್ಥಿಕ ಸಂಕಷ್ಟ ಅನುಭವಿಸುತ್ತಿವೆ ಎಂದು ಮಂಜುನಾಥ ನಾಡಗೌಡರ ಆರೋಪಿಸಿದರು. ಪಟ್ಟಣ ಪಂಚಾಯತಿ ಸಾರ್ವಜನಿಕರ ತೆರಿಗೆ ಹಣದಿಂದ ನಡೆಯುವ ಸಂಸ್ಥೆಯಾಗಿದ್ದು, ಯಾವುದೇ ತೆರಿಗೆ ಅಥವಾ ಶುಲ್ಕ ವಿಧಿಸುವ ಮೊದಲು ಸರ್ಕಾರದ ಆದೇಶ, ಬೈಲಾ ಹಾಗೂ ಸಾಮಾನ್ಯ ಸಭೆಯ ಅನುಮೋದನೆ ಕಡ್ಡಾಯವಾಗಿದೆ. ಆದ್ದರಿಂದ ಈ 2% ಶುಲ್ಕ ವಸೂಲಿಗೆ ಸಂಬಂಧಿಸಿದ ಸರ್ಕಾರದ ಆದೇಶ, ಸಾಮಾನ್ಯ ಸಭೆಯ ನಿರ್ಣಯ, ಬೈಲಾ ಮತ್ತು ಲೆಕ್ಕಪತ್ರಗಳ ಸಂಪೂರ್ಣ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡಬೇಕು ಎಂದು ಅವರು ಒತ್ತಾಯಿಸಿದರು. ಈ ಕುರಿತು ಪ್ರತಿಕ್ರಿಯಿಸಿದ ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳಾದ ನಾಗೇಶ್ ಅವರು, ಸಾರ್ವಜನಿಕರ ಮನವಿಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ವಿಷಯವನ್ನು ನಾಳೆ ನಡೆಯಲಿರುವ ಸಾಮಾನ್ಯ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು, ಕಾನೂನುಬದ್ಧವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸಮಿತಿಯ ಸಂಚಾಲಕರಾದ ರವಿ ಜಕ್ಕ, ಸದಸ್ಯರಾದ ಬಸಪ್ಪ ಲಾಲಗೊಂಡ್ರ, ಬಸವಣ್ಣ ಈಬೇರಿ, ರಾಮನಗೌಡ ಅರಿಶಿನಬಿಡಿ, ಶರಣಪ್ಪ ಚೆಂಡೂರು, ವೀರೇಶ ಸಬರದ, ಮಾಂತೇಶ ಹುಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಸಮಸ್ಯೆಗಳ ಶೀಘ್ರ ಇತ್ಯರ್ಥಕ್ಕೆ ಆಯೋಗದ ಭರವಸೆ: ಡಾ.ಮೂರ್ತಿ. ಎಲ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡಗಳ ಕಲ್ಯಾಣ ಹಾಗೂ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದರಚನೆಯಾಗಿರುವಆಯೋಗವು ಈ ವರ್ಗದ ಜನರ ಸಮಸ್ಯೆಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಅವುಗಳ ಶೀಘ್ರ ಇತ್ಯರ್ಥಕ್ಕೆ ಬದ್ಧವಾಗಿದೆ ಎಂದು ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷಡಾ.ಮೂರ್ತಿ.ಎಲ್ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್,ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ನಗರದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರೊಂದಿಗೆ ಕುಂದುಕೊರತೆಗಳ ಸಭೆ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಯೋಗವು ಈಗಾಗಲೇ ರಾಜ್ಯದ ಸುಮಾರು 15 ಜಿಲ್ಲೆಗಳಿಗೆ ಪ್ರವಾಸ ಕೈಗೊಂಡು ಸ್ಥಳೀಯ ಪರಿಸ್ಥಿತಿಯನ್ನು ಪರಿಶೀಲಿಸಿದೆ. ಇದರೊಂದಿಗೆ, ಪ್ರತಿ ಗುರುವಾರ ಮತ್ತು ಶುಕ್ರವಾರದಂದು ಸಾರ್ವಜನಿಕರಿಂದ ಸ್ವೀಕರಿಸಲಾಗುವ ಅಹವಾಲುಗಳನ್ನು ಆಲಿಸಿ, ಕೋರ್ಟ್ ಮತ್ತು ಕಚೇರಿ ಪ್ರಕ್ರಿಯೆಗಳ ಮೂಲಕ ಸುಮಾರು 800 ಕ್ಕೂ ಹೆಚ್ಚು ಪ್ರಕರಣಗಳನ್ನು ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಆಯೋಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯಕ್ಕೆ ಸೇರಿದ ಜನರ ನೂರಾರು ಸಮಸ್ಯೆಗಳಿಗೆ ಸಂಬಂಧಿಸಿದಂತೆ ಒಟ್ಟು 4,250 ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿದ್ದು, ಕಾನೂನು ಪ್ರಕ್ರಿಯೆಯ ವಿವಿಧ ಹಂತಗಳಲ್ಲಿವೆ. ಇದರ ಜೊತೆಗೆ ದಿನನಿತ್ಯ ಹೊಸ ದೂರುಗಳು ಕೂಡ ಆಯೋಗಕ್ಕೆ ಬರುತ್ತಿವೆ ಎಂದು ತಿಳಿಸಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಲು ಪ್ರತಿ ಜಿಲ್ಲೆಯಲ್ಲೂ ಆಯೋಗವು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಸಾರ್ವಜನಿಕರು ನೀಡುವ ದೂರುಗಳ ಆಧಾರದ ಮೇಲೆ ಸ್ಥಳದಲ್ಲೇ ಅಧಿಕಾರಿಗಳಿಂದ ವಿವರಣೆ ಕೇಳಿ, ಸೂಕ್ತ ಕ್ರಮ ಜರುಗಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗುತ್ತಿದೆ ಎಂದರು.

ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡಗಳ ಸಮುದಾಯದವರು ತಮ್ಮ ಗಂಭೀರವಾದ ಸಮಸ್ಯೆಗಳನ್ನು ಮಾತ್ರ ಸಂಕ್ಷಿಪ್ತವಾಗಿ ಮತ್ತು ಸ್ಪಷ್ಟವಾಗಿ ಆಯೋಗದ ಗಮನಕ್ಕೆ ತರಬೇಕು. ಅರ್ಜಿದಾರರು ತಮ್ಮ ಸಮಸ್ಯೆಗಳನ್ನು ಲಿಖಿತ ರೂಪದಲ್ಲಿ ಅಹವಾಲುಗಳನ್ನು ಸಲ್ಲಿಸಿದಲ್ಲಿ, ಪ್ರತಿಯೊಬ್ಬರ ಸಮಸ್ಯೆಗೂ ಸೂಕ್ತ ಸ್ಪಂದನೆ ಸಿಗಲಿದೆ ಎಂದು ಭರವಸೆ ನೀಡಿದರು.

ಇಂದಿನ ಸಭೆಗಳಲ್ಲಿ ಸ್ವೀಕರಿಸಲಾದ ದೂರು, ನ್ಯೂನತೆಗಳನ್ನು ಗಂಭಿರವಾಗಿ ಪರಿಗಣಿಸಿ ಇವುಗಳಿಗೆ ಸೂಕ್ತ ಪರಿಹಾರವನ್ನು ತ್ವರಿತವಾಗಿ ಒದಗಿಸಲಾಗುವುದು ಅಲ್ಲದೇ ವಿವಿಧ ಜಿಲ್ಲೆಗಳಲ್ಲಿ ಆಲಿಸಿದ ಹಾಗೂ ಸ್ವೀಕರಿಸಲಾದ ಅಹವಾಲುಗಳ ಕುರಿತ ವರದಿಯನ್ನು ಮಾನ್ಯ ಮುಖ್ಯಮಂತ್ರಿಗಳಿಗೆ ಶೀಘ್ರದಲ್ಲಿಯೇ ಸಲ್ಲಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಮುಖಂಡರು ಶಿಕ್ಷಣ, ಸುಸಜ್ಜಿತ ವಸತಿ ನಿಲಯ,ಅತ್ಯಾಧುನಿಕಗ್ರಂಥಾಲಯನಿರ್ಮಾಣ ಬೇಡಿಕೆ, ಆರೋಗ್ಯ ಸೇವೆ, ಸಮುದಾಯದ ವಾರ್ಡ್‌ಗಳಲ್ಲಿ ಮೂಲಭೂತ ಸೌಕರ್ಯಗಳ ಬೇಡಿಕೆ, ಭೂಮಿ ಮಂಜೂರು ಸೇರಿದಂತೆ ವಿವಿಧ ಅಹವಾಲುಗಳನ್ನು ಆಯೋಗದ ಅಧ್ಯಕ್ಷರಿಗೆ ಸಲ್ಲಿಸಿದರು.

ಇದಕ್ಕೂ ಮುನ್ನ ಗಣ್ಯರು ಡಾ.ಬಿ.ಆರ್. ಅಂಬೇಡ್ಕರ್, ಡಾ.ಬಾಬು ಜಗಜೀವನ್ ರಾಮ್, ಮಹರ್ಷಿ ವಾಲ್ಮೀಕಿ ಮಹನೀಯರಿಗೆ ಪುಷ್ಪನಮನ ಸಲ್ಲಿಸಿದರು. ಬಳಿಕ ಸಂವಿಧಾನ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.

ಸಭೆಯಲ್ಲಿ ಆಯೋಗದ ಸದಸ್ಯರುಗಳಾದ ದಿವಾಕರ.ಎನ್., ಗೀತಾ ಥಾವಂಶಿ, ಕಾರ್ಯದರ್ಶಿ ಡಾ.ಶಿವರಾಮು ಹೆಚ್.ಎಸ್. ಸಂಶೋಧನಾ ಅಧಿಕಾರಿ ಸಿಂಘು ರಘು ಹೆಚ್.ಎಸ್., ಡಾ.ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆ ಆಯುಕ್ತ ಪಿ.ಗಾದೆಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ವಸ್ತು ಸಂಗ್ರಹಾಲಯಗಳು ಜ್ಞಾನದ ಭಂಡಾರ: ಡಾ ಎಸ್ ಎಸ್ ವಾಣಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಅಂತರಾಷ್ಟ್ರೀಯ ವಸ್ತು ಸಂಗ್ರಹಾಲಯ ದಿನಾಚರಣೆ ಅಂಗವಾಗಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಕಲಬುರಗಿ, ಹಾಗೂ ಇನ್‌ಟ್ಯಾಕ್ ಕಲಬುರಗಿ ಅಧ್ಯಾಯ ಮತ್ತು ವಿಶ್ವನಾಥರೆಡ್ಡಿ ಮುದ್ನಾಳ ಪದವಿ ಮತ್ತು ಸ್ನಾತಕೋತ್ತರ ಮಹಾವಿದ್ಯಾಲಯಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ಸರ್ಕಾರಿ ವಸ್ತುಸಂಗ್ರಹಾಲಯದಲ್ಲಿ ಸ್ವಚ್ಛತ ಹಾಗೂ ವಸ್ತು ಸಂಗ್ರಹಾಲಯಗಳ ಅರಿವು ಕುರಿತು ಕಾರ್ಯಕ್ರಮವನ್ನು ಸೋಮವಾರರಂದು ಆಯೋಜಿಸಲಾಗಿತ್ತು. ವಿಶೇಷ ಉಪನ್ಯಾಸ ನೀಡಿದ ವಿಶ್ರಾಂತ ಇತಿಹಾಸ ಪ್ರಾಧ್ಯಾಪಕಡಾ. ಎಸ್.ಎಸ್. ವಾಣಿಯವರು ವಸ್ತುಸಂಗ್ರಹಾಲಯಗಳು ಜ್ಞಾನದ ಭಂಡಾರ ವಿದ್ದಂತೆ ಅವುಗಳಿಗೆ ಭೇಟಿ ನೀಡುವುದರಮೂಲಕ ತಮ್ಮ ಜ್ಞಾನವನ್ನು ಹೆಚ್ಚಿಸಿ ಕೊಳ್ಳಬಹುದು ಎಂದು ಹೇಳುತ್ತಾ ವಸ್ತು ಸಂಗ್ರಹಾಲಯಗಳಲ್ಲಿ ಹಲವು ಪ್ರಕಾರಗಳಿದ್ದು ಅವುಗಳಲ್ಲಿ ಪ್ರಜ್ಞಾನಿಕ, ತಾಂತ್ರಿಕ, ಪಾರಂಪರಿಕ, ಜಾನಪದ, ಮುಂತಾದವುಗಳು ತಮ್ಮ ತಮ್ಮ ಕ್ಷೇತ್ರದ ಅವಶೇಷಗಳನ್ನು ಸಂಗ್ರಹಿಸಿ ಸಂರಕ್ಷಿಸಿ ಮುಂದಿನ ಪೀಳಿಗೆಗೆ ಜ್ಞಾನವನ್ನು ರವಾನಿಸುವ ನಿಟ್ಟಿನಲ್ಲಿ ಕೆಲಸಮಾಡುತ್ತಿವೆ ಲಂಡನ್ನಿನ ವಸ್ತು ಸಂಗ್ರಹಾಲಯ ಶ್ರೀಮಂತವಾಗಲು ಕಾರಣ ಬ್ರಿಟಿಷರು ಭಾರತದ ನಾನಾ ಭಾಗಗಳಿಂದ ಹಲವು ಅವಶೇಷಗಳನ್ನು ಹೊತ್ತುಕೊಂಡು ಹೋಗಿ ಅಲ್ಲಿ ಪ್ರದರ್ಶನಕ್ಕೆ ಇಟ್ಟಿದ್ದಾರೆ. ಇದನ್ನು ನೋಡಿದ ಪ್ರತಿ ಒಬ್ಬರಿಗೂ ಭಾರತದ ಪರಂಪರ ಮನವರಿಕೆಯಾಗುತ್ತದೆ ಹೊರತು ಬ್ರಿಟಿಷ್ ಪರಂಪರ ಅಲ್ಲ ಎಂದು ತಮ್ಮ ಉಪನ್ಯಾಸದಲ್ಲಿ ಹೇಳಿದರು. ಕಲಬುರಗಿ ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕಿ ಬೇಬಿ ಮೋಘೇರಾ ಇವರು ಸಸಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ನಮ್ಮ ಪರಂಪರೆ ಶ್ರೀಮಂತವಾದ ಪರಂಪರ ಇದನ್ನು ನೋಡಲು ಪ್ರತಿಯೊಬ್ಬರು ವಸ್ತು ಸಂಗ್ರಹಾಲಯಗಳಿಗೆ ಭೇಟಿ ನೀಡಬೇಕು ಏಕೆಂದರೆ ಅಲ್ಲಿ ಹಲವು ಬಗ್ಗೆಯ ಅವಶೇಷಗಳ ಸಂಗ್ರಹ ನೋಡಬಹುದು ಅಲ್ಲದೆ ಪ್ರವಾಸಿ ತಾಣಗಳು ಸಹ ನಮ್ಮ ಗತವೈಭವದ ಪ್ರತೀಕಗಳು ಎಂದು ಹೇಳಿದರು.ಡಾ. ರಾಜಾರಾಮ್ ಬಿ ಸಿ ಸಹಾಯಕ ನಿರ್ದೇಶಕರು ಕಲಬುರಗಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರ ಇಲಾಖೆ ಸಹಾಯಕ ನಿರ್ದೇಶಕ ಡಾ ರಾಜಾರಾಮ ಬಿ ಸಿ ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಕಲಬುರಗಿ ವಸ್ತು ಸಂಗ್ರಹಾಲಯ 1964ರಲ್ಲಿ ಸ್ಥಾಪನೆಯಾಗಿದ್ದು ಇದು ಹಂತ ಹಂತವಾಗಿ ಹಲವು ಅವಶೇಷಗಳನ್ನು ತನ್ನಲ್ಲಿ ಸಂಗ್ರಹಿಸಿ ಕೊಂಡಿದೆ ಸುಮಾರು 700ಕ್ಕಿಂತ ಹೆಚ್ಚಿನ ಪ್ರಾಚ್ಯಾವಶೇಷಶಗಳಿದ್ದು ಅವುಗಳಲ್ಲಿ ಇತಿಹಾಸ ಪೂರ್ವ ಕಾಲದಿಂದ 18ನೇ ಶತಮಾನದವರೆಗಿನ ಅವಶೇಷಗಳನ್ನು ಇಲ್ಲಿ ಸಂಗ್ರಹಿಸಿಡಲಾಗಿದೆ. ಇವುಗಳ 'ನ್ನು ಸಾರ್ವಜನಿಕರಿಗೆ ವಿದ್ಯಾರ್ಥಿಗಳಿಗೆ ಸಂಶೋಧಕರಿಗೆ ಹಾಗೂ ಪರಂಪರೆಯ ಅಸಕ್ತರಿಗೆ ಮಾಹಿತಿ ನೀಡುವ ನಿಟ್ಟಿನಲ್ಲಿ ತೆರೆದು ಇಡಲಾಗಿದೆ ಎಂದು ತಿಳಿಸಿದರು. ಅತಿಥಿಗಳಾಗಿ ಆಗಮಿಸಿದ ಹಿರಿಯ ಚಿತ್ರಕಲಾವಿದನಾರಾಯಣ ಜೋಶಿ ಮತ್ತು ನಾಗೇಶ ಮಡಿವಾಳ ಉಪಪ್ರಾಚಾರ್ಯರು ಇವರು ಮಾತನಾಡಿದರು. ಜ್ಯೋತಿ ಇತಿಹಾಸ ಪ್ರಾಧ್ಯಾಪಕಿ ನಿರೂಪಿಸಿ ವಂದಿಸಿದರು. ಕಲಬುರಗಿ ಇನ್ ಟ್ಯಾಕ್ಸ್ ಪದಾಧಿಕಾರಿಗಳು ಇಲಾಖೆಯ ಸಿಬ್ಬಂದಿ ವರ್ಗ ಸ್ಥಳೀಯ ನಾಗರೀಕರು ಹಾಗೂ ವಿಶ್ವನಾಥ ರೆಡ್ಡಿ ಮುದ್ನಾಳ ಕಾಲೇಜಿನ ಬಿಎ, ಬಿಕಾಂ, ಬಿಬಿಎ, ದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಪ್ರಾಧ್ಯಾಪಕ ವರ್ಗದವರು ಉಪಸ್ಥಿತರಿದ್ದರು.

# ತಗ್ಗಿನ ಬೂದಿಹಾಳ್ ನಮ್ಮೂರ ಶಾಲೆ ನಮ್ಮೂರಲ್ಲಿ ಉಳಿಯಬೇಕು ಎಂದು ಬ್ಯಾನರ್ ಕಟ್ಟಿ ಹೋರಾಟ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ತಾಲೂಕಿನ ತಗ್ಗಿನ ಬೂದಿಹಾಳ ಗ್ರಾಮದಲ್ಲಿ ಎಐಡಿಎಸ್‌ಓ (ಆಲ್ ಇಂಡಿಯಾ ಡೆಮೊಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್) ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ನೇತೃತ್ವದಲ್ಲಿ ನಮ್ಮ ತಗ್ಗಿನ ಬೂದಿಹಾಳ ಗ್ರಾಮದ ಶಾಲೆಯಲ್ಲಿ 120ಕ್ಕೂ ಹೆಚ್ಚಿನ ಮಕ್ಕಳು ಓದುತ್ತಿದ್ದು ಎಲ್ಲರೂ ರೈತ ಕೂಲಿ ಕಾರ್ಮಿಕರ ಮಕ್ಕಳು 5 ಕಿ.ಮೀ ದೂರವಿರುವ ಕಕ್ಕಬೇವಿನಹಳ್ಳಿ ಆರಂಭವಾಗುವ ಕೆಪಿಎಸ್ ಶಾಲೆಗೆ ಮಕ್ಕಳನ್ನು ಕಳುಹಿಸಲು ಸಾದ್ಯವಿಲ್ಲ, ನಮ್ಮ ಮಕ್ಕಳನ್ನು ಸೇರಿಸಲು ಒಪ್ಪಿಗೆ ಇರುವುದಿಲ್ಲ ಎಂದು ನಮ್ಮ ಊರಿನ ಶಾಲೆಗೆ ಸಮರ್ಪಕ ಸೌಲಭ್ಯಗಳನ್ನು ನೀಡಿ ನಮ್ಮ ಊರಿನಲ್ಲಿ ಶಾಲೆ ಉಳಿಯಬೇಕು ಎಂದು ತಗ್ಗಿನ ಬೂದಿಹಾಳ್ ಗ್ರಾಮದ ಪೋಷಕರು ಹಾಗು ಗ್ರಾಮಸ್ಥರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಂದೆ ಬ್ಯಾನರ್ ಕಟ್ಟಿ, ಹೋರಾಟ ನಡೆಸಿದರು.

ನಂತರ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯಡಿಯಲ್ಲಿ ಶಾಲೆಗಳನ್ನು ವಿಲೀನಗೊಳಿಸುತ್ತಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿ ತೆಗ್ಗಿನ ಬೂದಿಹಾಳ ಗ್ರಾಮದ ಶಾಲೆಯನ್ನು ಉಳಿಸಬೇಕೆಂದು ಗ್ರಾಮ ಪಂಚಾಯಿತಿಯ ಮುಂದೆ ಪಿಡಿಓ ಮುಖಾಂತರ ಡಿಡಿಪಿಐ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಹೋರಾಟವನ್ನು ಉದ್ದೇಶಿಸಿ ಎಐಡಿಎಸ್‌ಓ ಜಿಲ್ಲಾ ಉಪಾಧ್ಯಕ್ಷರು ಎಂ.ಶಾಂತಿ ಅವರು ಮಾತನಾಡುತ್ತಾ... ನಮ್ಮೂರ ಶಾಲೆ ನಮ್ಮ ಊರಿನಲ್ಲಿ ಉಳಿಯಬೇಕು ಮತ್ತು ಕೆಪಿಎಸ್ ಯೋಜನೆ ರದ್ದಾಗಬೇಕೆಂದು ಆಗ್ರಹಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ರಚಿಸಿಕೊಂಡು ಕಳೆದ 5 ತಿಂಗಳಿಂದ ಗ್ರಾಮಸ್ಥರು ಹಾಗೂ ಪೋಷಕರು ಹೋರಾಟ ನಡೆಸಿದ್ದೇವೆ. ಗ್ರಾಮ ಮಟ್ಟದಿಂದ ಆರಂಭಿಸಿ ಜಿಲ್ಲಾ ಮಟ್ಟ ಹಾಗೂ ರಾಜ್ಯ ಮಟ್ಟದ ವರೆಗೂ ಪ್ರತಿಭಟನೆ ಹಾಗೂ ಸಮಾವೇಶಗಳನ್ನು ನಡೆಸಿದ್ದೇವೆ. ನಾಡಿನ ಹೆಸರಾಂತ ಸಾಹಿತಿಗಳು ಹಾಗೂ ಶಿಕ್ಷಣ ತಜ್ಞರು ನಮ್ಮೊಂದಿಗೆ ಧ್ವನಿಗೂಡಿಸಿದ್ದಾರೆ. ನಮ್ಮೂರ ಶಾಲೆ ನಮ್ಮೂರ ಮಕ್ಕಳ ಜ್ಞಾನದ ಮಂದಿರವಾಗಿದೆ. ನಮ್ಮೂರ ಶಾಲೆಯನ್ನು ಮುಚ್ಚಲು/ವಿಲೀನಗೊಳಿಸಲು ನಮ್ಮ ಒಪ್ಪಿಗೆಯಿಲ್ಲ ಎಂದು.

ಅಷ್ಟೇ ಅಲ್ಲದೇ ಸರ್ಕಾರವು 1ನೇ ತರಗತಿಯಿಂದಲೇ ಕನ್ನಡ ಮಾಧ್ಯಮದೊಂದಿಗೆ ಇಂಗ್ಲಿಷ್ ಮಾಧ್ಯಮ ಕೂಡ ಆರಂಭಿಸುತ್ತಿದೆ. ದ್ವಿಭಾಷಾ ಮಾಧ್ಯಮದ ಹೆಸರಲ್ಲಿ ಕೇವಲ ಇಂಗ್ಲಿಷ್ ಮಾಧ್ಯಮ ಕಲಿಸಲು ಹೇರಿಕೆ ನಡೆಸಲಾಗುತ್ತಿದೆ. ಯಾವುದೇ ಕಾರಣ–ಕ್ಕೂ ಕನ್ನಡ ಮಾಧ್ಯಮ ತೆಗೆದು ಹಾಕುವುದನ್ನು ಒಪ್ಪಲು ಸಾಧ್ಯವಿಲ್ಲ ಎಂಬುದು ಜನರ ಆಗ್ರಹ.

ಈ ದೇಶದ ಶಿಕ್ಷಣಕ್ಕಾಗಿ ಹೋರಾಡಿದ ಮಹಾತ್ಮಾ ಜ್ಯೋತಿಬಾಫುಲೆ ಅವರದು ಈ ವರ್ಷ ಜನ್ಮ ದ್ವಿ ಶತಮಾನೋತ್ಸವ ಸಂದರ್ಭದಲ್ಲಿ ಅವರ ಜೀವನ ಹೋರಾಟದಿಂದ ಸ್ಫೂರ್ತಿ ಪಡೆದು ನಮ್ಮೂರ ಶಾಲೆಯನ್ನು ಉಳಿಸಿಕೊಳ್ಳಲು ಪಣತೊಡಣ ಎಂದು ಕರೆ ನೀಡಿದರು.

ಈ ಸಂಧರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ಜಿಲ್ಲಾ ಉಪಾಧ್ಯಕ್ಷರಾದ ಶಾಂತ ಮತ್ತು ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಸದಸ್ಯರಾದ ನೀಲಮ್ಮ,

ವಂಡ್ರಮ್ಮ ಮತ್ತು ಪೋಷಕರು ಸಾಕಮ್ಮ, ಇನ್ನು ಹಲವರು ಉಪಸ್ಥಿತರಿದ್ದರು

# ಐಟಿ ಇಲಾಖೆಯ ದತ್ತಾಂಶದಿಂದ ಅನರ್ಹರ ಬೇಟೆ: ಬಳ್ಳಾರಿಯಲ್ಲಿ 4,764 ಬಿಪಿಎಲ್ ಕಾರ್ಡ್ ರದ್ದು

## ಅನ್ನಭಾಗ್ಯ ಸೌಲಭ್ಯ ದುರುಪಯೋಗಕ್ಕೆ ಕಡಿವಾಣ; ಅಧಿಕಾರಿಗಳ ಡಿಜಿಟಲ್ ಕಾರ್ಯಾಚರಣೆ ತೀವ್ರ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಗಣಿನಾಡು ಬಳ್ಳಾರಿ ಜಿಲ್ಲೆಯಲ್ಲಿ ಬಡವರಿಗಾಗಿ ರೂಪಿಸಲಾಗಿರುವ ಬಿಪಿಎಲ್ ಪಡಿತರ ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಂಡಿದ್ದ ಸಾವಿರಾರು ಅನರ್ಹರು ಇದೀಗ ಸರ್ಕಾರದ ಡಿಜಿಟಲ್ ಜಾಲದಲ್ಲಿ ಸಿಕ್ಕಿಬಿದ್ದಿದ್ದಾರೆ. ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಆದಾಯ ತೆರಿಗೆ ಇಲಾಖೆ ಹಾಗೂ ಸಾರಿಗೆ ಇಲಾಖೆಯ ದತ್ತಾಂಶಗಳನ್ನು ಸಮನ್ವಯಗೊಳಿಸಿ ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ಜಿಲ್ಲೆಯಾದ್ಯಂತ 4,764 ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಿರುವುದು ಬೆಳಕಿಗೆ ಬಂದಿದೆ.

ಜಿಲ್ಲೆಯಲ್ಲಿ ಪ್ರಸ್ತುತ 24,773 ಅಂತ್ಯೋದಯ ಕಾರ್ಡ್ ಹಾಗೂ 2,74,280 ಬಿಪಿಎಲ್ ಕಾರ್ಡ್‌ಗಳು ಚಾಲ್ತಿಯಲ್ಲಿವೆ. ಬಡ ಕುಟುಂಬಗಳಿಗೆ 'ಅನ್ನಭಾಗ್ಯ' ಯೋಜನೆಯಡಿ ಉಚಿತ ಅಕ್ಕಿ ಹಾಗೂ ರಿಯಾಯಿತಿ ದರದಲ್ಲಿ ಪಡಿತರ ವಿತರಣೆ ನಡೆಯುತ್ತಿದ್ದು, ಸರ್ಕಾರದ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಿಗೂ ಬಿಪಿಎಲ್ ಕಾರ್ಡ್ ಪ್ರಮುಖ ಆಧಾರವಾಗಿದೆ. ಆದರೆ, ಈ ಪಟ್ಟಿಯಲ್ಲಿಯೇ ಆರ್ಥಿಕವಾಗಿ ಸದೃಢರಾದವರು, ಆದಾಯ ತೆರಿಗೆ ಪಾವತಿಸುವವರು, ದೊಡ್ಡ ಪ್ರಮಾಣದ ಭೂಮಿ ಹೊಂದಿರುವವರು ಮತ್ತು ಐಷಾರಾಮಿ ವಾಹನಗಳಲ್ಲಿ ಸಂಚರಿಸುವವರೂ ಸೇರಿಕೊಂಡಿರುವುದು ಇಲಾಖೆ ಅಧಿಕಾರಿಗಳಿಗೆ ಆಘಾತ ಉಂಟುಮಾಡಿದೆ.

ಈವರೆಗೆ ಅನರ್ಹ ಕಾರ್ಡ್ ಪತ್ತೆ ಪ್ರಕ್ರಿಯೆ ಹೆಚ್ಚಾಗಿ ಸ್ಥಳೀಯ ಮಟ್ಟದ ಪರಿಶೀಲನೆ, ಮನೆಮನೆ ಭೇಟಿ ಹಾಗೂ ಸಾರ್ವಜನಿಕ ದೂರುಗಳ ಆಧಾರದಲ್ಲಿಯೇ ನಡೆಯುತ್ತಿತ್ತು. ಆದರೆ, ಈ ಬಾರಿ ಆಹಾರ ಇಲಾಖೆ ಸಂಪೂರ್ಣವಾಗಿ ಡಿಜಿಟಲ್ ತಂತ್ರಜ್ಞಾನಕ್ಕೆ ಮೊರೆ ಹೋಗಿದೆ. ಪಡಿತರ ಚೀಟಿಗೆ ಕಡ್ಡಾಯಗೊಳಿಸಲಾದ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆ ಹಾಗೂ ಪ್ಯಾನ್ ಕಾರ್ಡ್ ಮಾಹಿತಿಯೊಂದಿಗೆ ತಾಳೆ ಹಾಕಿ ಪರಿಶೀಲನೆ ನಡೆಸಲಾಗಿದೆ.

ಆದಾಯ ತೆರಿಗೆ ಇಲಾಖೆಯಿಂದ ಪಡೆದ ಮಾಹಿತಿಯ ಆಧಾರದಲ್ಲಿ ವರ್ಷಕ್ಕೆ ನಿಗದಿತ ಮಿತಿಗಿಂತ ಹೆಚ್ಚು ಆದಾಯ ಹೊಂದಿರುವವರ ವಿವರ ಸಂಗ್ರಹಿಸಲಾಯಿತು. ಇದೇ ವೇಳೆ ಸಾರಿಗೆ ಇಲಾಖೆಯ ದಾಖಲೆಗಳೊಂದಿಗೆ ಹೋಲಿಕೆ ನಡೆಸಿ, ಬಿಪಿಎಲ್ ಕಾರ್ಡ್ ಹೊಂದಿರುವವರ ಹೆಸರಿನಲ್ಲಿ ಟ್ಯಾಕ್ಸಿ ಹೊರತುಪಡಿಸಿ ಖಾಸಗಿ ನಾಲ್ಕು ಚಕ್ರದ ವಾಹನಗಳಿರುವುದನ್ನು ಪತ್ತೆ ಹಚ್ಚಲಾಗಿದೆ.

ಈ ಡಿಜಿಟಲ್ ಪರಿಶೀಲನೆಯಲ್ಲೇ ಸಾವಿರಾರು ಅನರ್ಹರು ಬಯಲಾಗಿದ್ದು, ಬಳ್ಳಾರಿ ನಗರ ಭಾಗದಲ್ಲಿಯೇ ಗರಿಷ್ಠ 3,960 ಕಾರ್ಡ್‌ಗಳು ರದ್ದಾಗಿವೆ. ನಗರ ಪ್ರದೇಶಗಳಲ್ಲಿ ಸರ್ಕಾರಿ ನೌಕರರು, ಸಣ್ಣ ಉದ್ಯಮಿಗಳು ಹಾಗೂ ಆರ್ಥಿಕವಾಗಿ ಸದೃಢ ಕುಟುಂಬಗಳು ಸಹ ಬಿಪಿಎಲ್ ಸೌಲಭ್ಯ ಪಡೆಯುತ್ತಿದ್ದ ವಿಚಾರ ಬಹಿರಂಗವಾಗಿದೆ.

ಆಹಾರ ಇಲಾಖೆಯ ಅಧಿಕಾರಿಗಳ ಪ್ರಕಾರ, ಬಿಪಿಎಲ್ ಕಾರ್ಡ್ ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳು ಸ್ಪಷ್ಟವಾಗಿವೆ. ಕುಟುಂಬದ ವಾರ್ಷಿಕ ಆದಾಯ ?1.20 ಲಕ್ಷ ಮೀರಿರಬಾರದು. ನಗರ ಪ್ರದೇಶದಲ್ಲಿ 1,000 ಚದರ ಅಡಿಗಿಂತ ದೊಡ್ಡ ಸ್ವಂತ ಪಕ್ಕಾ ಮನೆ ಇರಬಾರದು. ಗ್ರಾಮೀಣ ಪ್ರದೇಶದಲ್ಲಿ 3 ಹೆಕ್ಟೇರ್ ಒಣಭೂಮಿ ಅಥವಾ ಸಮಾನ ಪ್ರಮಾಣದ ನೀರಾವರಿ ಭೂಮಿ ಹೊಂದಿದ್ದರೂ ಅನರ್ಹರಾಗುತ್ತಾರೆ. ಜೀವನೋಪಾಯಕ್ಕಾಗಿ ಬಳಸುವ ಆಟೋ ಅಥವಾ ಟ್ಯಾಕ್ಸಿ ಹೊರತುಪಡಿಸಿ ಖಾಸಗಿ ನಾಲ್ಕು ಚಕ್ರದ ವಾಹನ ಹೊಂದಿರುವವರಿಗೂ ಬಿಪಿಎಲ್ ಸೌಲಭ್ಯ ಲಭ್ಯವಿಲ್ಲ. ಆದಾಯ ತೆರಿಗೆ ಅಥವಾ ವೃತ್ತಿ ತೆರಿಗೆ ಪಾವತಿಸುವವರು ಸಂಪೂರ್ಣ ಅನರ್ಹರಾಗುತ್ತಾರೆ.

ಆದರೆ, ಈ ನಿಯಮಗಳನ್ನು ಉಲ್ಲಂಘಿಸಿ ಹಲವು ಮಂದಿ ವರ್ಷಗಳಿಂದ ಪಡಿತರ ಪಡೆಯುತ್ತಿದ್ದರೆಂಬ ಸಂಗತಿ ಈಗ ಹೊರಬಿದ್ದಿದೆ. ಕೇವಲ ಅಕ್ಕಿ ಮತ್ತು ಪಡಿತರ ಸೌಲಭ್ಯವಷ್ಟೇ ಅಲ್ಲದೆ, ಉಚಿತ ವೈದ್ಯಕೀಯ ಸೇವೆ, ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್ ಸೇರಿದಂತೆ ಹಲವು ಯೋಜನೆಗಳ ಪ್ರಯೋಜನಕ್ಕೂ ಬಿಪಿಎಲ್ ಕಾರ್ಡ್ ಬಳಸಲಾಗುತ್ತಿದೆ. ಇದರಿಂದ ನಿಜವಾದ ಅರ್ಹ ಬಡ ಕುಟುಂಬಗಳಿಗೆ ಸಿಗಬೇಕಾದ ಸೌಲಭ್ಯದಲ್ಲಿ ಅನ್ಯಾಯವಾಗುತ್ತಿದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲೂ ಕೇಳಿಬರುತ್ತಿದೆ.

ಜಿಲ್ಲಾವಾರು ಅಂಕಿಅಂಶಗಳ ಪ್ರಕಾರ, ಬಳ್ಳಾರಿ ತಾಲೂಕಿನಲ್ಲಿ ಅತಿ ಹೆಚ್ಚು 3,960 ಕಾರ್ಡ್‌ಗಳು ರದ್ದಾಗಿದ್ದರೆ, ಸಿರಗುಪ್ಪದಲ್ಲಿ 243, ಕುರುಗೋಡಿನಲ್ಲಿ 190, ಸಂಡೂರಿನಲ್ಲಿ 168 ಹಾಗೂ ಕಂಪ್ಲಿಯಲ್ಲಿ 59 ಕಾರ್ಡ್‌ಗಳು ಅನರ್ಹವೆಂದು ಘೋಷಿಸಲ್ಪಟ್ಟಿವೆ.ಈ ಕುರಿತು ಪ್ರತಿಕ್ರಿಯಿಸಿದ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕ ದೇವರಾಜ್, "ಜಿಲ್ಲೆಯಲ್ಲಿ ಅನರ್ಹ ಪಡಿತರ ಕಾರ್ಡ್‌ಗಳನ್ನು ರದ್ದುಗೊಳಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ.

ಇದು ಕೇವಲ ಆರಂಭ ಮಾತ್ರ. ಇನ್ನಷ್ಟು ಪರಿಣಾಮಕಾರಿಯಾಗಿ ಪರಿಶೀಲನೆ ನಡೆಸಿ ಅರ್ಹರಿಗೆ ಮಾತ್ರ ಸೌಲಭ್ಯ ತಲುಪುವಂತೆ ಕ್ರಮ ಕೈಗೊಳ್ಳಲಾಗುವುದು" ಎಂದು ತಿಳಿಸಿದ್ದಾರೆ.ಸರ್ಕಾರದ ಸೌಲಭ್ಯಗಳು ನಿಜವಾದ ಬಡವರ ಕೈ ಸೇರಬೇಕಾದರೆ ಇಂತಹ ಡಿಜಿಟಲ್ ಪರಿಶೀಲನೆ ಹಾಗೂ ಇಲಾಖಾಂತರ ಸಮನ್ವಯ ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂಬ ಅಭಿಪ್ರಾಯವೂ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ

# ಸರ್ಕಾರಿ ಬಾಲಮಂದಿರಗಳಲ್ಲಿ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಾಗಿ ಶಿಕ್ಷಕರ ಹುದ್ದೆಯ ಭರ್ತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.18–ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಬರುವ ಸರ್ಕಾರಿ ಬಾಲಮಂದಿರಗಳಲ್ಲಿ ಮಿಷನ್ ವಾತ್ಸಲ್ಯ ಅನ್ವಯ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಾಗಿ ಕ್ರಾಫ್ಟ್ ಶಿಕ್ಷಕರು/ಸಂಗೀತ ಶಿಕ್ಷಕರು, ಇಂಗ್ಲೀಷ ಮತ್ತು ಗಣಿತ/ವಿಜ್ಞಾನ ಶಿಕ್ಷಕರ ಸೇವೆಯನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

ಗಣಿತ/ವಿಜ್ಞಾನ ಶಿಕ್ಷಕರು (ಮಹಿಳಾ ಅಭ್ಯರ್ಥಿ)–01 ಹುದ್ದೆಗೆ ಬಿ.ಎಡ್. (2 ವರ್ಷಗಳ ಅನುಭವ) ಹೊಂದಿರಬೇಕು. ಸಂಗೀತ/ಕ್ರಾಫ್ಟ್/ಆರ್ಟ ಶಿಕ್ಷಕರು–01 ಹುದ್ದೆಗೆ ಸಂಗೀತ/ವಾದ್ಯ ಹಾಗೂ ಕಲೆ ವಿಷಯದಲ್ಲಿ ಅಂಗೀಕೃತ ಸಂಸ್ಥೆಯಿಂದ ಸರ್ಟಿಫೈಡ್ ಕೋರ್ಸ್ ಪಾಸಾಗಿರಬೇಕು ಮತ್ತು (2 ವರ್ಷಗಳ ಅನುಭವ) ಹೊಂದಿರಬೇಕು. ಇಂಗ್ಲೀಷ ಶಿಕ್ಷಕರು (ಮಹಿಳಾ ಅಭ್ಯರ್ಥಿ) 01–ಹುದ್ದೆಗೆ ಬಿ.ಎಡ್ (2 ವರ್ಷಗಳ ಅನುಭವ) ಹಾಗೂ ಎಜುಕೇಟರ್ (ಮಹಿಳಾ ಅಭ್ಯರ್ಥಿ)–01 ಹುದ್ದೆಗೆ ಬಿ.ಎಡ್ (2 ವರ್ಷಗಳ ಅನುಭವ) ಹೊಂದಿರಬೇಕು. ಮಿಷನ್ ವಾತ್ಸಲ್ಯ ಮಾರ್ಗಸೂಚಿಯನ್ವಯ ನಿಗದಿಪಡಿಸಿದ ಮಾಸಿಕ 10,000 ರೂ.ಗಳ ಗೌರವಧನ ನೀಡಲಾಗುತ್ತದೆ. ಮೇಲ್ಕಂಡ ಹುದ್ದೆಗಳು ತಾತ್ಕಾಲಿಕವಾಗಿದ್ದು, (1 ವರ್ಷಕ್ಕೆ ಮಾತ್ರ ಅನ್ವಯವಾಗುವಂತೆ) ಯಾವುದೇ ಸಂದರ್ಭದಲ್ಲಿ ಖಾಯಂಗೊಳಿಸಲಾಗುವುದಿಲ್ಲ. ಅರ್ಹ ಅಭ್ಯರ್ಥಿಗಳು 2026ರ ಮೇ 25ರ ಮಧ್ಯಾಹ್ನ 1.30 ಗಂಟೆಯೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರಿ ವೀಕ್ಷಣಾಲಯ ಕಟ್ಟಡ, 1ನೇ ಮಹಡಿ, ಚಂದ್ರಶೇಖರ ಪಾಟೀಲ ಕ್ರೀಡಾಂಗಣ ಎದುರುಗಡೆ, ಕಲಬುರಗಿ ಕಚೇರಿಯಲ್ಲಿ ಸಲ್ಲಿಸಬೇಕು.

# ಮೇ 21 ರಂದು ಮೋಕಾದಲ್ಲಿ ಉದ್ಯೋಗ ಮೇಳ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ವತಿಯಿಂದ ಮೇ 21 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮೋಕಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಥಮ ಬಾರಿಗೆ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಈ ಉದ್ಯೋಗ ಮೇಳದಲ್ಲಿ 15ಕ್ಕೂ ಹೆಚ್ಚು ಪ್ರಮುಖ ಕಂಪನಿಗಳು ಭಾಗವಹಿಸುತ್ತಿದ್ದು, ಇದರಲ್ಲಿ ಪ್ರಮುಖವಾಗಿ ಸ್ಥಳೀಯ ಕಂಪನಿಗಳು ಸಹ ಪಾಲ್ಗೊಳ್ಳಲಿವೆ. ಕಂಪನಿಗಳು ತಮ್ಮಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಿವೆ. ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಪ್ರವೇಶ ಶುಲ್ಕ ಇರುವುದಿಲ್ಲ.

*ಅರ್ಹತೆ ಮತ್ತು ವಯೋಮಿತಿ:*

ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಐ.ಟಿ.ಐ., ಯಾವುದೇ ಪದವಿ ಮತ್ತು ಸ್ನಾತಕೋತ್ತರ ಪದವಿ ಮುಗಿಸಿರುವ 18 ರಿಂದ 40 ವರ್ಷ ವಯೋಮಿತಿಯ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು.

ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಹಾಗೂ ವಿದ್ಯಾರ್ಹತೆಯ ಸ್ವ–ವಿವರಗಳ ಪ್ರತಿಯೊಂದಿಗೆ ಈ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ

ಮೊ.7619207762, 7676774293, 9663263086, 6360408094 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕರು ಕುಡಿಯುವ ನೀರನ್ನು ಕಾಯಿಸಿ ಕುಡಿಯಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.18–ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲ ನದಿಯಾದ ಭೀಮಾ ನದಿಯಲ್ಲಿ ಒಳಹರಿವು ನಿಂತು ಹೋಗಿರುವುದರಿಂದ ನದಿಯಲ್ಲಿ ನಿಂತ ನೀರು ಪಾಚಿಗಟ್ಟಿರುತ್ತದೆ. ಈ ನೀರಿನ ಗುಣಮಟ್ಟ ಸರಿಯಾಗಿ ಇರುವುದಿಲ್ಲ. ಆದ್ದರಿಂದ ಈ ನೀರನ್ನು ಶುದ್ಧೀಕರಿಸಿ ಸೂಪರ ಕ್ಲೋರಿನೇಷನ್ ಮಾಡಿ ನೀರು ಸರಬರಾಜು ಮಾಡಲಾಗುತ್ತಿದೆ.

ಆದಗ್ಯೂ ಮುನ್ನೆಚ್ಚರಿಕೆ ಕ್ರಮವಾಗಿ ಭೀಮಾ ನದಿಯಿಂದ ಸರಬರಾಜು ಆಗುತ್ತಿರುವ ಬಡಾವಣೆಯ ಸಾರ್ವಜನಿಕರು ಈ ನೀರನ್ನು ಕುಡಿಯಲು ಉಪಯೋಗಿಸುವ ಮುಂಚೆ ನೀರನ್ನು ಕಾಯಿಸಿ ಆರಿಸಿ ಹಾಗೂ ಸೋಸಿ ನೀರನ್ನು ಉಪಯೋಗಿಸಬೇಕೆಂದು ಕಲಬುರಗಿ ಕೆಯುಡಬ್ಲ್ಯೂಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ನಗರದ ಸಾರ್ವಜನಿಕರು ತಮ್ಮ ಮನೆಗಳಿಗೆ ತೆಗೆದುಕೊಂಡ ನಳದ ಜೋಡಣೆಗೆ ತೊಟ್ಟಿಯನ್ನು ಕಡ್ಡಾಯವಾಗಿ ಕೂಡಿಸಿಕೊಳ್ಳಬೇಕು ಮತ್ತು ನಳದ ತಗ್ಗುಗಳನ್ನು ಮುಚ್ಚಬೇಕು.

ಏಕೆಂದರೆ ತಗ್ಗುಗಳಲ್ಲಿ ಕಲುಷಿತ ನೀರು ಸಂಗ್ರಹಣೆಯಾಗಿ ಅದೇ ನೀರು ಮತ್ತೇ ನಳದ ತೊಟ್ಟಿಯಲ್ಲಿ ಸೇರುವ ಮೂಲಕ ಮುಂದಿನ ಗ್ರಾಹಕರಿಗೆ ತಲುಪಿ ಇದರಿಂದ ಸಾಂಕ್ರಾಮಿಕ ರೋಗ ಹರಡುವ ಸಾಧ್ಯತೆ ಇರುತ್ತದೆ.

ಅದೇರೀತಿ ನೀರಿನ ತೊಟ್ಟಿ ಅಳವಡಿಸುವುದರಿಂದ ನೀರು ಪೋಲಾಗದಂತೆ ನೋಡಿಕೊಂಡು ಕಲಬುರಗಿ ಮಹಾನಗರಪಾಲಿಕೆ, ಕೆಯುಐಡಿಎಫ್‌ಸಿ ಹಾಗೂ ಮೆ॥ ಎಲ್ ಆಂಡ್ ಟಿ ಲಿಮಿಟೆಡ್ ರವರೊಂದಿಗೆ ಸಹಕರಿಸಬೇಕು.

ನೀರಿನ ಸಮಸ್ಯೆಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ಸೇವಾ ದೂರವಾಣಿ ಸಂಖ್ಯೆ: +91 1800 425 8247 (ccc) ಗೆ ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

# ಜಮೀರ್‌ಗೆ ಕೇರಳ ಸಿಎಂ ಕರೆ

**ಬೆಂಗಳೂರು:** ಕೇರಳದ ನೂತನ ಮುಖ್ಯಮಂತ್ರಿ ವಿ. ಡಿ. ಸತೀಶನ್ ಅವರು ಸಚಿವ ಜಮೀರ್ ಅಹಮದ್ ಖಾನ್ ಅವರಿಗೆ ಕರೆ ಮಾಡಿ ಕೃತಜ್ಞತೆ ಸಲ್ಲಿಸಿದರು. ಚುನಾವಣೆ ಸಂದರ್ಭದಲ್ಲಿ ಸ್ಟಾರ್ ಪ್ರಚಾರಕರಾಗಿ ಯುಡಿ ಎಫ್ ಅಭ್ಯರ್ಥಿಗಳ ಪರ ಪ್ರಚಾರ ಮಾಡಿದ್ದನ್ನು ಸತೀಶನ್ ಸ್ಮರಿಸಿದರು. ಇದೇ ಸಂದರ್ಭದಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಅವರು ಮುಖ್ಯಮಂತ್ರಿ ಸತೀಶನ್ ಅವರನ್ನು ಅಭಿನಂದಿಸಿ ನಿಮ್ಮ ನಾಯಕತ್ವದಲ್ಲಿ ಕೇರಳ ರಾಜ್ಯ ಪ್ರಗತಿಯತ್ತ ಮುನ್ನಡೆಯಲಿ ಎಂದು ಶುಭ ಕೋರಿದರು.

# ವ್ಯಕ್ತಿ ನಾಪತ್ತೆ: ಪತ್ತೆಗೆ ಮನವಿ



**ಬಳ್ಳಾರಿ:** ಇಲ್ಲಿನ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಮಾಜಕಾರ್ಯ ವಿಭಾಗದ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದ ಮೋಹನ್ ದಾಸ್ ಕೆ. (37) ಎಂಬುವವರು ಮೇ 13 ರಿಂದ ನಾಪತ್ತೆಯಾಗಿದ್ದಾರೆ. ಈ ಕುರಿತು ಅವರ ಪತ್ನಿ ಶಕುಂತಲ ಅವರು ನೀಡಿದ ದೂರಿನನ್ವಯ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಘಟನೆಯ ಹಿನ್ನೆಲೆ:** ಬಳ್ಳಾರಿಯ ಕುವೆಂಪು ನಗರದ 3ನೇ ವಾರ್ಡ್ನ ನಿವಾಸಿಯಾದ ಮೋಹನ್ ದಾಸ್ ಅವರು ಮೇ 13ರಂದು ವಿಶ್ವವಿದ್ಯಾಲಯಕ್ಕೆ ತೆರಳಿದ್ದರು. ಆದರೆ ಮಧ್ಯಾಹ್ನದ ನಂತರ ಅವರು ಮನೆಗೆ ಮರಳಿ ಬಂದಿಲ್ಲ. ಮೊಬೈಲ್ ಫೋನ್ ಹಾಗೂ ಡೈರಿಯನ್ನು ಕಚೇರಿಯಲ್ಲೇ ಬಿಟ್ಟು ಹೊರಟು ಹೋಗಿರುವುದು ತಿಳಿದುಬಂದಿದೆ.

**ನಾಪತ್ತೆಯಾದ ವ್ಯಕ್ತಿಯ ಚಹರೆ ವಿವರ:** ಎತ್ತರ 6 ಅಡಿ, ದುಂಡು ಮುಖ, ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, ಕಪ್ಪು ಕೂದಲು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಗೆರೆಗಳಿರುವ ಆಫ್ ಶರ್ಟ್ (ಅರ್ಧ ತೋಳಿನ ಚುಕ್ಕೆ ಮತ್ತು ನೀಲಿ ಬಣ್ಣದ ಗೆರೆಗಳುಳ್ಳ ಅಂಗಿ) ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಕನ್ನಡ, ತೆಲುಗು, ಇಂಗ್ಲೀಷ್ ಮತ್ತು ತಮಿಳು ಭಾಷೆ ಮಾತನಾಡುತ್ತಾರೆ.

ಈ ಚಹರೆಯುಳ್ಳ ವ್ಯಕ್ತಿಯ ಬಗ್ಗೆ ಯಾವುದೇ ಮಾಹಿತಿ ಲಭ್ಯವಾದಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392-276461, ಮೊ.9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ಗ್ರಾಮೀಣ ಪೊಲೀಸ್ ಉಪನಿರೀಕ್ಷಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಒಳ ಮೀಸಲಾತಿ ನೀಡಿಕೆಯಲ್ಲಿ ಕಾಂಗ್ರೆಸ್ ಗೊಂದಲ ಸೃಷ್ಟಿ




**ಬಳ್ಳಾರಿ:** ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದಾಗ ಮಾಡಿದ್ದ ಒಳ ಮೀಸಲಾತಿಯನ್ನು ಜಾರಿಗೊಳಿಸಬಾರದು ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಮೀಸಲಾತಿ ಅನುಷ್ಠಾನ ವಿಷಯದಲ್ಲಿ ಗೊಂದಲ ಸೃಷ್ಟಿಸಿದೆ ಎಂದು ಮಾದಿಗ ಮೀಸಲಾತಿ ಹೋರಾಟ ಸಮಿತಿ ರಾಜ್ಯಾಧ್ಯಕ್ಷಹ ಎಚ್.ಹನುಮಂತಪ್ಪ ಆರೋಪಿಸಿದ್ದಾರೆ.

ಅವರು ನಿನ್ನೆ ಬಿಜೆಪಿ ಕಚೇರಿಯಲ್ಲಿ ಹಮ್ಮಿಕೊಂಡಿದ್ದ

ಸುದ್ದಿಗೋಷ್ಠಿಯಲ್ಲಿ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ನಿಜಕ್ಕೂ ದಲಿತ ಪರ ಕಾಳಜಿಯಿದ್ದಿದ್ದರೆ ನಾಗಮೋಹನ್ ದಾಸ್ ವರದಿಯನ್ನು ಅನುಷ್ಠಾನಗೊಳಿಸಬೇಕಿತ್ತು. ಆದರೆ, ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ದಲಿತರ ಮತಗಳು ಮಾತ್ರ ಬೇಕೇ ವಿನಾ, ದಲಿತರ ಕಲ್ಯಾಣದ ಯಾವ ಕಾಳಜಿಯೂ ಈ ಸರ್ಕಾರಕ್ಕಿಲ್ಲ. ಶೋಷಿತ ಸಮುದಾಯಗಳ ಅಭಿವೃದ್ಧಿಗೆಂದೇ ಮೀಸಲಾಗಿರುವ ಎಸಿಪಿ, ಟಿಎಸ್ಪಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳುತ್ತಿರಲಿಲ್ಲ ಎಂದು ಆರೋಪಿಸಿದರು.

ವಿಧಾನಪರಿಷತ್ ಸದಸ್ಯ ವೈ.ಎಂ.ಸತೀಶ್ ನಗರದ ಮಾಜಿ ಶಾಸಕ ಜಿ.ಸೋಮಶೇಖರ ರೆಡ್ಡಿ ಮಾತನಾಡಿ, ದಲಿತರ ಮತಗಳನ್ನು ಪಡೆದು ಅಧಿಕಾರಕ್ಕೆ ಬರುವ ಕಾಂಗ್ರೆಸ್ಗೆ ಈ ಸಮುದಾಯಗಳ ಅಭಿವೃದ್ಧಿಯ ಬಗ್ಗೆ ಕಾಳಜಿ ಇಲ್ಲ. ಮೀಸಲಾತಿ ವಿಚಾರದಲ್ಲಿನ ಗೊಂದಲವನ್ನು ತಿಳಿಗೊಳಿಸಬೇಕು ಎಂದು ಆಗ್ರಹಿಸಿದರು.

# ಕಲೆಗಳು ದೇಶ ಬೆಳಗಿಸುವ ದೀಪ



**ಬೀದರ:** ಇಂದಿನ ಯಾಂತ್ರಿಕ ಯುಗದಲ್ಲಿ ಪ್ರತಿಯೊಬ್ಬರೂ ಒತ್ತಡದ ಬದುಕಿನಲ್ಲಿ ಜೀವನ ಸಾಗಿಸುತ್ತಿದ್ದು, ನೆಮ್ಮದಿ ಮತ್ತು ಶಾಂತಿಗಾಗಿ ಸಂಗೀತದ ಮೊರೆ ಹೋಗಬೇಕಾಗಿದೆ ಎಂದು ಖ್ಯಾತ ಉದ್ಯಮಿಗಳಾದ ಬಸವರಾಜ್ ಧನ್ನೂರ ಹೇಳಿದರು.

ನಗರದ ಮೈಲೂರು ಕ್ರಾಸ್ ಸಮೀಪದ ಶ್ರೀ ಕೃಷ್ಣ ಉಡುಪಿ ಹೋಟೆಲ್‌ನ ಮಹಾಲಕ್ಷ್ಮಿ ಸಭಾಂಗಣದಲ್ಲಿ ಮಂದಾರ ಕಲಾವಿದರ ವೇದಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಕವಿಗೋಷ್ಠಿ, ಗೌರವ ಸನ್ಮಾನ ಹಾಗೂ ಸಂಗೀತ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಗೀತ ಮತ್ತು ಸಾಹಿತ್ಯ ಮಾನವನ ಮನಸ್ಸಿಗೆ ಶಾಂತಿ, ತೃಪ್ತಿ ಹಾಗೂ ನೆಮ್ಮದಿ ನೀಡುವ ಅವಿಭಾಜ್ಯ ಅಂಗಗಳಾಗಿವೆ. ಸಾಹಿತ್ಯ ಮತ್ತು ಸಂಗೀತ ಕೇವಲ ಅಕ್ಷರಗಳಲ್ಲ, ಅವು ಭಾವನಾತ್ಮಕವಾಗಿ ಬೆಸೆಯುವ ಸಂಬಂಧಗಳಾಗಿವೆ. ನಾಡು ಕಟ್ಟುವ, ದೇಶ ಮುನ್ನಡೆಸುವ ಶಕ್ತಿಯುಳ್ಳ ಈ ಕಲೆಗಳು ದೇಶ ಬೆಳಗಿಸುವ ದೀಪಗಳಾಗಿವೆ. ಸಾಹಿತ್ಯ ವೈಚಾರಿಕತೆಯಿಂದ ಬೆಳಗುತ್ತಿದ್ದು, ಅದು ನಮ್ಮ ಸಂಸ್ಕೃತಿಯ ಬೆನ್ನೆಲುಬಾಗಿದೆ ಎಂದು ಹೇಳಿದರು.

ಸಂಗೀತಕ್ಕೆ ಯಾವುದೇ ಭಾಷೆ, ಜಾತಿ, ಮತ-ಪಂಥಗಳ ಗಡಿ ಇಲ್ಲ. ಅದು ಎಲ್ಲರನ್ನು ಒಂದೆಡೆ ಸೇರಿಸುವ ಶಕ್ತಿ ಹೊಂದಿದ್ದು, ಸಂಸ್ಕೃತಿ ಮತ್ತು ಸೃಜನಶೀಲತೆಯನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಎಲೆಮರೆಯ ಕಾಯಿಯಂತಿರುವ ಅನೇಕ ಕಲಾವಿದರಿಗೆ ಪ್ರೋತ್ಸಾಹ ನೀಡುವುದು ಸಂಘ-ಸಂಸ್ಥೆಗಳ ಕರ್ತವ್ಯ ಎಂದು ಹೇಳಿದರು.

# ಡೆಂಗ್ಯೂ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಡೆಂಗ್ಯೂ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಟಿ.ಲಿಂಗರಾಜು ಅವರು ಹೇಳಿದರು.

ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ-2026ರ ಅಂಗವಾಗಿ ಕೊಪ್ಪಳ ಜಿಲ್ಲೆಯಲ್ಲಿ ಡೆಂಗ್ಯೂ ಜ್ವರದ ಹರಡುವಿಕೆ, ನಿಯಂತ್ರಣ ಹಾಗೂ ರೋಗಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಜನಸಮುದಾಯವನ್ನು ಜಾಗೃತಿಗೊಳಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಇತ್ತೀಚೆಗೆ ಕೊಪ್ಪಳ ನಗರದ ಹಳೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಂಡಿದ್ದ ಡೆಂಗ್ಯೂ ಜಾಗೃತಿಯ ಜಾಥಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತ ಘನ ಸರ್ಕಾರದ ಆರೋಗ್ಯ ಸಚಿವಾಲಯದ ನಿರ್ದೇಶನದ ಮೇರೆಗೆ ಪ್ರತಿವರ್ಷದ ಮೇ-16 ಅನ್ನು ಜಿಲ್ಲೆಯಾದ್ಯಂತ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆಯನ್ನಾಗಿ ಆಚರಿಸಿ ಡೆಂಗ್ಯೂ ರೋಗ ಪ್ರಸರಣ ಅವಧಿಯ ಮುನ್ನವೇ ಜನಸಮುದಾಯವನ್ನು ಜಾಗೃತಿಗೊಳಿಸಲು ವ್ಯಾಪಕ ಅಭಿಯಾನ, ಜಾಥಗಳು, ರ್‍ಯಾಲಿ, ಅಂತರ್ ಇಲಾಖಾ ಸಭೆ ಸಮಾರಂಭಗಳನ್ನು ಜಿಲ್ಲೆಯಾದ್ಯಂತ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣ ಪ್ರತಿಯೊಬ್ಬರ ಸಹಕರಿಸಬೇಕು ಎಂದರು.

ಡೆಂಗ್ಯೂ ನಿಯಂತ್ರಣಕ್ಕೆ ಆರೋಗ್ಯ ಇಲಾಖೆಯಿಂದ ಎಲ್ಲಾ ಸೂಕ್ತ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗಿದೆ.



ಡೆಂಗ್ಯೂ-ಚಿಕೂನ್‌ಗುನ್ಯಾ ಜ್ವರಗಳಿಗೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಅಥವಾ ಲಸಿಕೆಯಾಗಲಿ ಪ್ರಸ್ತುತ ಲಭ್ಯವಿಲ್ಲದಿದ್ದರೂ ಸಹ ಜನರೂ ಭಯಪಡುವ ಅವಶ್ಯಕತೆ ಇಲ್ಲ. ಡೆಂಗ್ಯೂ-ಚಿಕೂನ್‌ಗುನ್ಯಾ ಜ್ವರಗಳ ಲಕ್ಷಣಗಳನ್ನಾಧರಿಸಿ ಸೂಕ್ತ ಚಿಕಿತ್ಸೆ ನೀಡಲಾಗುವುದು. ಯಾವುದೇ ಜ್ವರ ಕಾಣಿಸಿಕೊಂಡರೇ ಜನಸಮುದಾಯ ಶೀಘ್ರವೇ ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರಗಳಿಗೆ ತೆರಳಿ ಪರೀಕ್ಷೆ ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆಯಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಕ್ತ ಚಿಕಿತ್ಸೆ ಮತ್ತು ಉಚಿತ ಪ್ರಯೋಗಾಲಯ ಪರೀಕ್ಷೆಗಳನ್ನು ಮಾಡಲಾಗುತ್ತಿದ್ದು, ಜನರು ಅನಗತ್ಯ ಭಯಕ್ಕೆ ಒಳಗಾಗದೆ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಬಹುದು ಎಂದು ಹೇಳಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ. ಎಚ್.ನಂದಕುಮಾರ್ ಅವರು ಮಾತನಾಡಿ, ಡೆಂಗ್ಯೂ ಜ್ವರವು ವೈರಸ್ ಕಾಯಿಲೆಯಾಗಿದ್ದು, ಇದು ಈಡಿಸ್ ಜಾತಿಯ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುತ್ತದೆ. ಈ ಸೊಳ್ಳೆಗಳು ಬಹುತೇಕ ಹಗಲು ಹೊತ್ತಿನಲ್ಲಿಯೇ ಕಚ್ಚುತ್ತವೆ. ಈಡಿಸ್ ಸೊಳ್ಳೆಗಳು ನೀರು ಶೇಖರಣೆ ಸಲಕರಣೆಗಳಲ್ಲಿ ಶುದ್ಧ ನೀರಿನಲ್ಲಿಯೇ ಸಂತಾನಾಭಿವೃದ್ಧಿ ಮಾಡುತ್ತವೆ. ಹಾಗಾಗಿ ನೀರು ಶೇಖರಣೆ ಸಲಕರಣೆಗಳನ್ನು ಸದಾಕಾಲ ಮುಚ್ಚಿಡಬೇಕು. ಇದರ ಜೊತೆಗೆ ಮನೆಯ ಒಳಾಂಗಣ ಮತ್ತು ಹೊರಾಂಗಣದಲ್ಲಿ ನೀರು ನಿಲ್ಲದಂತೆ ಎಚ್ಚರವಹಿಸಿ ಸೊಳ್ಳೆಗಳ ಉತ್ಪತ್ತಿಯನ್ನು ತಡೆಗಟ್ಟಬೇಕೆಂದರು.

ಈಡೀಸ್ ಲಾರ್ವಾ ಸಮೀಕ್ಷೆಗಾಗಿ ಮನೆಗೆ ಬೇಟಿ ನೀಡುವ ಆರೋಗ್ಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತರಿಗೆ ಜನರು ಸಹಕಾರ ನೀಡಿ ಅವರ ಸಲಹೆಗಳನ್ನು ಪಾಲಿಸಬೇಕು. ಈ ವರ್ಷದ ಧ್ಯೇಯವಾಕ್ಯ "ಡೆಂಗ್ಯೂ ನಿಯಂತ್ರಣಕ್ಕಾಗಿ ಸಮುದಾಯದ ಸಹಭಾಗಿತ್ವ ಪರಿಶೀಲಿಸಿ, ಸ್ವಚ್ಛಗೊಳಿಸಿ ಹಾಗೂ ಮುಚ್ಚಿಡಿ" ಎಂಬುದಾಗಿದೆ ಎಂದು ಹೇಳಿದರು.

ಜಿಲ್ಲಾ ವಿ.ಬಿ.ಡಿ ನಿಯಂತ್ರಣಾಧಿಕಾರಿಗಳಾದ ಡಾ. ಕುಮಾರಸ್ವಾಮಿ ಗೋನಾಳ್ ಅವರು ಮಾತನಾಡಿ, ಪ್ರಸ್ತುತ ಪೂರ್ವ ಮುಂಗಾರು ಮಳೆಗಾಲ ಪ್ರಾರಂಭವಾಗಿದ್ದು, ಅಲ್ಲಲ್ಲಿ ನಿಂತ ನೀರಿನ ತಾಣಗಳು ಉತ್ಪತ್ತಿಯಾಗುತ್ತವೆ ಹಾಗೂ ನೀರಿನ ಶೇಖರಣಾ ಸಲಕರಣೆಗಳಲ್ಲಿ ನೀರು ಶೇಖರಣೆಯಾಗಿ ಸೊಳ್ಳೆ ಉತ್ಪತ್ತಿಯಾಗಿ ಸೊಳ್ಳೆಗಳ ಸಾಂದ್ರತೆ ಹೆಚ್ಚಾಗುತ್ತದೆ. ಕಾರಣ, ಸೊಳ್ಳೆಗಳಿಂದ ಹರಡುವ ರೋಗಗಳಾದ ಡೆಂಗ್ಯೂ, ಚಿಕೂನ್‌ಗುನ್ಯಾ ಹಾಗೂ ಮಲೇರಿಯಾದಂತಹ ಕಾಯಿಲೆಗಳು ಹೆಚ್ಚಾಗುವ ಸಂಭವವಿರುತ್ತದೆ. ಅದರಲ್ಲೂ ಡೆಂಗ್ಯೂ-ಚಿಕೂನ್‌ಗುನ್ಯಾ ಹರಡುವ ಈಡಿಸ್ ಸೊಳ್ಳೆಗಳು ಮನೆಯ ಒಳಗಡೆ ಕಚ್ಚುವುದರಿಂದ ಡೆಂಗ್ಯೂ-ಚಿಕೂನ್‌ಗುನ್ಯಾ ಜ್ವರಗಳು ಹರಡುವ ಸಾಧ್ಯತೇ ಇರುತ್ತದೆ. ಕಾರಣ ಯಾವುದೇ ಜ್ವರವಿರಲಿ ಶೀಘ್ರವೇ ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರದಲ್ಲಿ ರಕ್ತ ಪರೀಕ್ಷೆ ಮಾಡಿಸಿ, ಉಚಿತ ಚಿಕಿತ್ಸೆ ಪಡೆಯಬೇಕು. ಹಾಗೂ ಮಲಗುವಾಗ ಸೊಳ್ಳೆ ಪರದೆಗಳನ್ನು ಬಳಕೆಮಾಡಿ. ವಾರಕ್ಕೊಮ್ಮೆ ನೀರು ಶೇಖರಣ ಸಲಕರಣೆಗಳನ್ನು ಖಾಲಿಮಾಡಿ ಸ್ವಚ್ಛಗೊಳಿಸಿ ನೀರು ತುಂಬಿ ಮುಚ್ಚಿಡಬೇಕು. ಸೊಳ್ಳೆ ಕಡಿತದಿಂದ ದೂರವಿರಲು ಸಾಧ್ಯವಾದ ಎಲ್ಲಾ ಸ್ವಯಂ ರಕ್ಷಣ ವಿಧಾನಗಳನ್ನು ಅನುಸರಿಸಿ. ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಜನಸಮುದಾಯದ ಸಹಕಾರ, ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಹಾಗೂ ಜನಜಾಗೃತಿಯೊಂದೆ ಪರಿಹಾರ ಮಾರ್ಗ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳಾದ ಡಾ. ಪ್ರಕಾಶ್ ಎಚ್.ಎಸ್., ಕೊಪ್ಪಳ ತಾಲೂಕ ಆರೋಗ್ಯಾಧಿಕಾರಿಗಳಾದ ಡಾ. ರಾಮಾಂಜನೇಯಾ ಹಾಗೂ ಜಿಲ್ಲಾ & ತಾಲೂಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ವ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ರಿದಮ್ ಹೌಸ್ ಡ್ಯಾನ್ಸ್, ಕ್ಯಾಂಪ್ ಯಶಸ್ವಿ




• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ರಿದಮ್ ಹೌಸ್ ಡ್ಯಾನ್ಸ್ ಸ್ಟುಡಿಯೋ, ಹುಣಸೂರು (ಹಳೆಯ ITI ಕಾಲೇಜ್ ಎದುರು) ಇಲ್ಲಿ ಇಂದು ಸಮರ್ ಕ್ಯಾಂಪ್ ಅನ್ನು ಯಶಸ್ವಿಯಾಗಿ ನಡೆಸಲಾಯಿತು ಹಾಗೂ ಇದರ ಸಮಾರೋಪ ಕಾರ್ಯಕ್ರಮವನ್ನು ಸಹ ಯಶಸ್ವಿಯಾಗಿ ಆಯೋಜಿಸಲಾಯಿತು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಹೊಸೂರು ಕುಮಾರ್ ಸರ್ ಹಾಗೂ ಡಾ. ಸಂಗೀತಾ ಮ್ಯಾಡಂ ಆಗಮಿಸಿದ್ದರು. ಜೊತೆಗೆ ಸಮ್ಮರ್ ಕ್ಯಾಂಪ್‌ನ ತರಬೇತುದಾರರಾದ ಭಾರ್ಗವ್ (ಯೋಗ), ಅಭಿಷೇಕ್ (ಚಿತ್ರಕಲೆ), ಪ್ರಸನ್ನ (ಕರಾಟೆ), ಮೃದಂಗ್ (ಭರತನಾಟ್ಯ) ಮತ್ತು ಸಿಂಚನಾ (ಗಾನ) ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು.

ರಿದಮ್ ಹೌಸ್ ಡ್ಯಾನ್ಸ್ ಸ್ಟುಡಿಯೋದ ವಿದ್ಯಾರ್ಥಿಗಳು ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿ, ಇದೀಗ ಅಂತರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಚಾರವಾಗಿದೆ.

ಮುಂದಿನ ಅಂತರಾಷ್ಟ್ರೀಯ ಸ್ಪರ್ಧೆಯು 2026ರ ಜೂನ್ 26ರಂದು ಮಲೇಶಿಯಾದಲ್ಲಿ ನಡೆಯಲಿದ್ದು, ರಿದಮ್ ಹೌಸ್ ಡ್ಯಾನ್ಸ್ ಸ್ಟುಡಿಯೋದ ವಿದ್ಯಾರ್ಥಿಗಳಿಗೆ ಹೊಸೂರು ಕುಮಾರ್ ರವರು ಶುಭ ಹಾರೈಸಿದರು.

# ಜನಜಾತೀಯ ಗೌರವ ಉತ್ಸವ-2026

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜಿಲ್ಲೆಯಲ್ಲಿ 'ಜನಜಾತೀಯ ಗೌರವ ಉತ್ಸವ-2026'ಕ್ಕೆ ಇಂದು ಅದ್ದೂರಿ ಚಾಲನೆ ನೀಡಲಾಯಿತು.

ಶ್ರೀ ಲವೀಶ್ ಓರಾಡಿಯಾ, ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಯಾದಗಿರಿ, ಶ್ರೀ ರಮೇಶ್ ಕೋಲಾರ, ಮಾನ್ಯ ಅಪರ ಜಿಲ್ಲಾಧಿಕಾರಿಗಳು, ಯಾದಗಿರಿ, ಶ್ರೀ ಕುಮಲಯ್ಯ, ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ್ ಯಾದಗಿರಿ ಹಾಗೂ 17 ಜಿಲ್ಲಾ ಮಟ್ಟದ ಅನುಷ್ಠಾನ ಅಧಿಕಾರಿಗಳ ಸಹಯೋಗದಲ್ಲಿ ಈ ಕಾರ್ಯಕ್ರಮ ಜರುಗಿತು.

PM-JANMAN&DA-JGUA ಯೋಜನೆಯಡಿ "Sabse Door, Sabse Pehle" ಅಭಿಯಾನದ ಭಾಗವಾಗಿ ಕರಪತ್ರವನ್ನು ಬಿಡುಗಡೆ ಮಾಡುವ ಮೂಲಕ ಇಂದು ಅಧಿಕೃತ ಚಾಲನೆ ನೀಡಲಾಯಿತು.

ಪರಿಶಿಷ್ಟ ಪಂಗಡ ಸಮುದಾಯದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದಿಂದ ಸಿಗಬೇಕಾದ ಮೂಲಭೂತ ಸೌಲಭ್ಯಗಳನ್ನು ತಲುಪಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ. ಎಲ್ಲಾ ಬುಡಕಟ್ಟು ಸಮುದಾಯದವರು ಈ ಅಭಿಯಾನದ ಪ್ರಯೋಜನ ಪಡೆದು ತಮ್ಮ ಕುಂದುಕೊರತೆಗಳನ್ನು ಬಗೆಹರಿಸಿಕೊಳ್ಳಲು ಇದೊಂದು ಮುಖ್ಯ ವೇದಿಕೆಯಾಗಲಿದೆ ಎಂದು ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಡಗಳು ತಿಳಿಸಿದರು.



# ಶೈಕ್ಷಣಿಕ ಗುಣಮಟ್ಟ ಹೆಚ್ಚಳಕ್ಕೆ ಬದ್ಧ: ಬಿಇಓ ಜಗದೀಶ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಶಾಲಾ ಪ್ರಾರಂಭ ಹಂತದಲ್ಲಿನ "ಸೇತುಬಂಧ" ಯೋಜನೆಯನ್ನು ಇನ್ನಷ್ಟು ಪರಿಣಾಮಕಾರಿ ಹಾಗೂ ಏಕರೂಪವಾಗಿ ರೂಪಿಸುವ ಮೂಲಕ ತಾಲೂಕಿನ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು "ಹೊಸ ದಿಕ್ಕು-ನವ ಹೆಜ್ಜೆ" ಯೋಜನೆಯಡಿಯಲ್ಲಿ ಸೇತುಬಂಧದ ಕಲಿಕಾಂಶದ ಆಧಾರದಲ್ಲಿ ಪ್ರಶ್ನೆಪತ್ರಿಕೆಗಳನ್ನು ರೂಪಿಸಲಾಗಿದೆ ಎಂದು ಬಿ ಇ ಓ ಜಗದೀಶ ಎಸ್ ಎಸ್ ಅವರು ತಾಲೂಕಿನ ಬಿ ಆರ್ ಸಿಯಲ್ಲಿ ಪ್ರಶ್ನೆಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಸೇತುಬಂಧವು ಹಿಂದಿನ ತರಗತಿಯ ಕಲಿಕಾಫಲ ಮತ್ತು ಮುಂದಿನ ತರಗತಿಯ ಕಲಿಕಾ ಸಾಮರ್ಥ್ಯಗಳ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ. ಈ ಹಿನ್ನಲೆಯಲ್ಲಿ ರಾಜ್ಯದಲ್ಲಿಯೇ ವಿನೂತನವಾದ 4 ರಿಂದ 8ನೇ ತರಗತಿಯ ಮಕ್ಕಳಿಗಾಗಿ, ತಾಲೂಕಿನ ನುರಿತ ಸಂಪನ್ಮೂಲ ವ್ಯಕ್ತಿಗಳು ಮತ್ತು ಎಲ್ಲಾ ಅಧಿಕಾರಿಗಳ



ಮಾರ್ಗದರ್ಶನದಲ್ಲಿ ಸೇತುಬಂಧದ ನೈದಾನಿಕ ಹಾಗೂ ಸಾಪಲ್ಯ ಪರೀಕ್ಷೆಗಳ ಪ್ರಶ್ನೆಪತ್ರಿಕೆಗಳನ್ನು ಸಿದ್ಧಪಡಿಸಲಾಗಿದೆ. ಇದು ತಾಲೂಕಿನ ಎಲ್ಲಾ ಶಾಲೆಗಳ ಶಿಕ್ಷಕರಿಗೆ ಉಪಯುಕ್ತವಾದುದಾಗುವುದರ ಜೊತೆಗೆ ಶೈಕ್ಷಣಿಕ ರಂಗದಲ್ಲಿ ಹೊಸ ಮೈಲುಗಲ್ಲಾಗಿದೆ ಎಂದು ಅವರು ಹೇಳಿದರು. ಮುಖ್ಯ ಅತಿಥಿಗಳಾದ ಬಿ ಆರ್ ಸಿ ಪ್ರಭಾಕರ ಎಂ.ಎಸ್ ಅವರು ಸಂವಿಧಾನದ ಆಶಯಗಳಾದ "ಸಾರ್ವತ್ರಿಕ ಅವಕಾಶ", "ಸಾರ್ವತ್ರಿಕ ದಾಖಲಾತಿ", "ಸಾರ್ವತ್ರಿಕ ಉಳಿಕೆ" ಮತ್ತು "ಸಾರ್ವತ್ರಿಕ ಕಲಿಕೆ" ಎಂಬ ಇಲಾಖೆಯ ಯೋಜನೆಗೆ ಕಲಿಕಾ ಅವಕಾಶ, ಕಲಿಕಾರ್ಥಿಯ ಅನುಭವ, ಪೂರ್ವಜ್ಞಾನ, ವೈಯಕ್ತಿಕ ವಿಭಿನ್ನತೆಮುಂತಾದ ಕಾರಣಗಳಿಂದ ಮಕ್ಕಳಲ್ಲಿ ಕಲಿಕಾ ಮಟ್ಟದಲ್ಲಿ ವ್ಯತ್ಯಾಸಗಳು ಅಥವಾ ಕೊರತೆಗಳು ಕಂಡುಬರುತ್ತವೆ. ಸಮಗ್ರ ಮೌಲ್ಯಮಾಪನದ ಮೂಲಕ ಮಗುವಿನ ಕಲಿಕೆಯ ಮಟ್ಟವನ್ನು ಗುರುತಿಸಿ, ಕೊರತೆಗಳಿದ್ದಲ್ಲಿ ಅವುಗಳನ್ನು ನಿವಾರಿಸುತ್ತಾ ಮುಂದಿನ ತರಗತಿಗೆ ಸನ್ನದ್ಧಗೊಳಿಸುವ ಕಾರ್ಯವನ್ನು ನಾವು ನಿರಂತರವಾಗಿ ಕೈಗೊಳ್ಳುತ್ತೇವೆ. ಈ ನಿಟ್ಟಿನಲ್ಲಿ ಈಗಾಗಲೇ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಮಾದರಿಯಲ್ಲಿ 6 ರಿಂದ 8ನೇ ತರಗತಿ ವಿದ್ಯಾರ್ಥಿಗಳನ್ನು ಕೇಂದ್ರವಾಗಿಟ್ಟುಕೊಂಡು ಎಲ್ಲಾ ವಿಷಯಗಳ ಪ್ರಶ್ನೆಪತ್ರಿಕೆಗಳನ್ನು ಸಿದ್ಧಪಡಿಸಿ ಕಲಿಕೆಯನ್ನು ದೃಢೀಕರಿಸುವ ಪ್ರಯತ್ನದಲ್ಲಿ ಎಲ್ಲಾ ಶಿಕ್ಷಕರ ಸಹಕಾರದಿಂದ ಯಶಸ್ಸು ಕಂಡಿದ್ದೇವೆ. ಆ ನಿಟ್ಟಿನಲ್ಲಿ ಮತ್ತೊಂದು ಹೆಜ್ಜೆ ಈಗ ಮುಂದಕ್ಕೆ ಸಾಗಿದ್ದೇವೆ ಎಂದರು. ನೌಕರರ ಸಂಘದ ಅಧ್ಯಕ್ಷರದ ಎಂ.ಪಿ.ಎಂ ಮಂಜುನಾಥ, ಪ್ರೌ.ಸಹ .ಶಿಕ್ಷಕರ ಸಂಘದ ಅಧ್ಯಕ್ಷರಾದ ರವಿಚಂದ್ರನಾಯ್ಕ್, ಶಿಕ್ಷಕರ ಸಂಘದ ಅಧ್ಯಕ್ಷರಾದ ಹ್ಯಾಟಿ ಲೋಕಪ್ಪ, ಕಾರ್ಯದರ್ಶಿ ಬಿ ಕೊಟ್ರಪ್ಪ, ಮು.ಗು.ಸಂಘದ ಅಧ್ಯಕ್ಷರಾದ ಚಂದ್ರಪ್ಪ, ಜಿಪಿಟಿ ಸಂಘದ ಕಾರ್ಯದರ್ಶಿ ಕೆ.ಗಾಳೆಪ್ಪ, ಸಂಪನ್ಮೂಲ ವ್ಯಕ್ತಿ ಎಸ್.ಕೊಟ್ರೇಶ್. ಎಪಿಎಫ್‌ನ ಸಂತೋಷ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಈ ವಿನೂತನ ಯೋಜನೆಯ ಉಸ್ತುವಾರಿಯಾಗಿದ್ದ ಬಿಆರ್‌ಪಿ ಡಾ.ಪರಮೇಶ್ವರಯ್ಯ ಸೊಪ್ಪಿಮಠ ಅವರು ಕಾರ್ಯಕ್ರಮದ ಯೋಚನೆ, ಯೋಜನೆ ಮತ್ತು ಅನುಷ್ಠಾನ ಕುರಿತು ಮಾಹಿತಿಯನ್ನು ಹಂಚಿಕೊಂಡರು.

# ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ



## ವಿವಿಧ ಗ್ರಾಮಗಳಿಗೆ ಭೇಟಿ

ಮುತ್ತಂಗಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಗುಡಿ ತಾಂಡಕ್ಕೆ ಹಾಗೂ ಮೀನಕೇರಾ ಗ್ರಾಮ ಪಂಚಾಯ ವ್ಯಾಪ್ತಿಯಲ್ಲಿ ಬಸಿರಾಪೂರ ಗ್ರಾಮಕ್ಕೆ ಭೇಟಿ ನೀಡಿ, ಟ್ಯಾಂಕರ ಮೂಲಕ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡುತ್ತಿರುವದನ್ನು ವಿಕ್ಷಿಸಿ ಹೊಸದಾಗಿ ಕೊರೆಸಿದ ಕೊಳವೆ ಬಾವಿಯ ನೀರು ಹೊರ ಬಿಡುವ ಮೂಲಕ ಚಾಲನೆ ನೀಡಿದರು. ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾದಂತೆ ಸರಿಯಾದ ಸಮಯಕ್ಕೆ ನೀರು ಪೊರೈಸಬೇಕು ಎಂದು ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಕಾರ್ಯನಿರ್ವಹ ಅಧಿಕಾರಿ ಲಕ್ಷ್ಮೀ ಬಿರಾದಾರ, ಕುಡಿಯುವ ನೀರು ಇಲಾಖೆಯ ಅಭಿಯಂತರ ಶೇಖರ ರಾಥಾ ಸೇರಿದಂತೆ ಅಭಿವೃದ್ದಿ ಅಧಿಕಾರಿಗಳು ಉಪಸ್ಥಿತರಿದ್ದರು.

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ತೆರೆದ ಬಾವಿ, ಕೊಳವೆ ಭಾವಿಗಳಲ್ಲಿ ನೀರಿನ ಮಟ್ಟ ಕುಸಿಯುತ್ತಿದ್ದು, ವಿವಿಧ ಗ್ರಾಮಗಳಲ್ಲಿ, ತಾಂಡಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಎಚ್ಚರ ವಹಿಸಿ ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ ಹೇಳಿದರು. ಪಟ್ಟಣದಲ್ಲಿರುವ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜರುಗಿದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದಿನದಿಂದ ದಿನಕ್ಕೆ ಬಿಸಿಲಿನ ತಾಪಮಾನ ಹೆಚ್ಚಾಗುತ್ತಿದೆ, ಗ್ರಾಮಗಳಲ್ಲಿ, ತಾಂಡಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವವಾಗುತ್ತದೆ ಅಂಥ ಕಡೆಗಳಲ್ಲಿ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಿ ಟ್ಯಾಂಕರ್ ಮುಖಾಂತರ ಅಥವಾ ಖಾಸಗಿ ಬೋರವೆಲಗಳ ಮೂಲಕ ಸಾರ್ವಜನಿಕರಿಗೆ ಕುಡಿಯುವ ನೀರು ಪೊರೈಸುವ ಮೂಲಕ ಕಟ್ಟುನಿಟ್ಟಿನ ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಅನುಮೋದಿತ ಕ್ರೀಯಾ ಯೋಜನೆಯಡಿ ನರೇಗಾ ಕೂಲಿ ಕಾರ್ಮಿಕರಿಗೆ ಕೆಲಸ ಕೊಡಬೇಕು. ಕೂಲಿ ಕಾರ್ಮಿಕರು ಕಾಮಗಾರಿ ಕೈಗೊಳ್ಳುವ ಸ್ಥಳದಲ್ಲಿ ನೆರಳಿನ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಉತ್ತಮವಾಗಿ ಕಲ್ಪಿಸಬೇಕು ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

# ಕರ್ನಾಟಕ ಸಾರಿಗೆ ಮೂರು ವರ್ಷಗಳ ಪ್ರಗತಿಯ ಪಯಣ



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

## ಹೊಸ ಬಸ್ಸುಗಳ ಸೇರ್ಪಡೆ

**7800** ಹೊಸ ಬಸ್ಸುಗಳ ಸೇರ್ಪಡೆಗೆ ಅನುಮೋದನೆ | ಈಗಾಗಲೇ **5998** ಬಸ್ಸುಗಳ ಸೇರ್ಪಡೆ (ಕರಾರಸಾನಿ-**1286** (EV ಬಸ್ - **50**), ಬಿಎಂಟಿಸಿ-**2329** (EV ಬಸ್ - **1730**), ವಾಕರಸಾಸಂ-**1210**, ಕಕರಸಾನಿ-**1173**)





## ಪ್ರಾಜೆಕ್ಟ್ ಮೆಜೆಸ್ಟಿಕ್

ಬೆಂಗಳೂರಿನ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ಸಾರ್ವಜನಿಕ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ **'ಸಾರಿಗೆ ಹಬ್'** ನಿರ್ಮಾಣಕ್ಕೆ ಕಾರ್ಯ ಯೋಜನೆ ರೂಪಿಸಲಾಗಿದೆ

## ವೇತನ ಪರಿಷ್ಕರಣೆ

**1.05** ಲಕ್ಷ ನೌಕರರಿಗೆ ಶೇ. **12.5** ರಷ್ಟು ವೇತನ ಹೆಚ್ಚಳ | ನಾಲ್ಕು ಸಾರಿಗೆ ನಿಗಮಗಳಿಗೆ ಪ್ರತಿ ತಿಂಗಳು **ರೂ. 72.80** ಕೋಟಿ, ಪ್ರತಿ ವರ್ಷ **ರೂ. 873.64** ಕೋಟಿ ಹೆಚ್ಚುವರಿ ವೆಚ್ಚ

## ಮಾರ್ಚ್ 2023 ರ ವೇತನ ಹೆಚ್ಚಳ ಹಿಂಬಾಕಿ

ವೇತನ ಪರಿಷ್ಕರಣೆಯ ಹಿಂಬಾಕಿ ಮೊತ್ತ **ರೂ. 1271.92** ಕೋಟಿ ಪಾವತಿಗೆ ಅನುಮೋದನೆ ಮೊದಲ ಕಂತಿನ ಹಣ **ರೂ. 450** ಕೋಟಿ ಬಿಡುಗಡೆ

## ಕೆ ಎಸ್ ಆರ್ ಟಿ ಸಿ ಆರೋಗ್ಯ

**280**ಕ್ಕೂ ಹೆಚ್ಚು ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳಿಗೆ ಹಾಗೂ ಅವಲಂಬಿತರಿಗೆ ಚಿಕಿತ್ಸೆ | ಇಲ್ಲಿಯವರೆಗೆ ಒಟ್ಟು **1,86,973** ಕ್ಲೇಮುಗಳು | **ರೂ. 55.02** ಕೋಟಿ ಪಾವತಿ | ವೈದ್ಯಕೀಯ ಮರುಪಾವತಿ ವೆಚ್ಚ ವಾರ್ಷಿಕ **ರೂ.16** ಕೋಟಿ

## ಸಾರಿಗೆ ಸುರಕ್ಷಾ / ಕುಟುಂಬ ಕಲ್ಯಾಣ ವಿಮಾ ಯೋಜನೆ

ಅಪಘಾತದಲ್ಲಿ (ಆನ್ ಡ್ಯೂಟಿ / ಆಫ್ ಡ್ಯೂಟಿ) ಮೃತಪಟ್ಟ ಸಿಬ್ಬಂದಿಯ ಅವಲಂಬಿತರಿಗೆ **ರೂ.1** ಕೋಟಿ / **ರೂ. 50** ಲಕ್ಷ / **ರೂ. 30** ಲಕ್ಷದಂತೆ **ರೂ. 66.50** ಕೋಟಿ ಪಾವತಿ, ಅಪಘಾತ ಹೊರತು ಪಡಿಸಿ ಮೃತಪಟ್ಟ ಸಿಬ್ಬಂದಿಗಳ ಕುಟುಂಬಕ್ಕೆ **ರೂ. 3** ಲಕ್ಷದಿಂದ **ರೂ. 14** ಲಕ್ಷದವರೆಗೆ ಹೆಚ್ಚಳ, ಒಟ್ಟು **ರೂ. 93.28** ಕೋಟಿ ಪಾವತಿ

## ಸಾರಿಗೆ ಮಿತ್ರ (HRMS 2.0)

ನೌಕರರ ರಜೆ ಹಾಗೂ ಹಾಜರಾತಿಯಲ್ಲಿ ಪಾರದರ್ಶಕತೆ / ಏಕರೂಪತೆ, ಸಮಗ್ರ ಸೇವಾ ದಾಖಲಾತಿ, ಭವಿಷ್ಯ ನಿಧಿ ಮಾಹಿತಿ

## ಡಿಜಿಟಲ್ ಉಪಕ್ರಮಗಳು

ಬಸ್ಸುಗಳಲ್ಲಿ ಯುಪಿಐ ಡಿಜಿಟಲ್ ಪಾವತಿ ಅವತಾರ್ 4.0 | ಶೇ. **52** ರಷ್ಟು UPI ಬಳಕೆ | ಇನ್ವೆಂಟರಿ ಮ್ಯಾನೇಜ್‌ಮೆಂಟ್ (ಇ-ಉಗ್ರಾಣ) | 'ನಮ್ಮ ಬಿಎಂಟಿಸಿ' ಮೊಬೈಲ್ ಅಪ್ಲಿಕೇಶನ್ | ಲ್ಯಾಂಡ್ ಬೀಟ್ ಆಪ್ | ಇ-ವಾಣಿಜ್ಯ | ವಾಯುವ್ಯ ಸ್ನೇಹಿ | ನಮ್ಮ ಕಲಬುರಗಿ | ಅಪಘಾತ ನಿರ್ವಹಣಾ ತಂತ್ರಾಂಶ | ಇ-ಮಳಿಗೆ | ನ್ಯಾಯ ಪಥ



## ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳಿಗೆ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಪ್ರಶಸ್ತಿಗಳು

| 1997-2026 | ಮೇ 2023 - ಮೇ 2026 |
|---|---|
| **694** | **245** |

**ಶಕ್ತಿ ಯೋಜನೆಯಡಿಯಲ್ಲಿ ಮಹಿಳಾ ಪ್ರಯಾಣಿಕರ ಪ್ರಯಾಣವು ವಿಶ್ವದಾಖಲೆಗಳಲ್ಲಿ ಸೇರ್ಪಡೆ**

## ಹೊಸ ನೇಮಕಾತಿ

**10497** ಹುದ್ದೆಗಳ ನೇಮಕಾತಿ | **9000** ಹೊಸ ನೇಮಕಾತಿ | **1497** ಅನುಕಂಪದ ನೇಮಕಾತಿ ಪೂರ್ಣ

## ಬಸ್ಸುಗಳ ಪುನಃಶ್ಚೇತನ ಕಾರ್ಯ

**2109** ಬಸ್ಸುಗಳ ಪುನಃಶ್ಚೇತನ ಕಾರ್ಯ

## ಬಸ್ ಟ್ರಿಪ್‌ಗಳು

ಪ್ರತಿದಿನದ ಬಸ್ ಟ್ರಿಪ್‌ಗಳ ಸಂಖ್ಯೆ **154955** ರಿಂದ **186506**ಕ್ಕೆ ಹೆಚ್ಚಳ

## ಧ್ವನಿ ಸ್ಪಂದನ

**ದೃಷ್ಟಿ ವಿಶೇಷ ಚೇತನ** ಪ್ರಯಾಣಿಕ ಸ್ನೇಹಿ ಉಪಕ್ರಮ

## ತರಬೇತಿ

ಸಂಸ್ಥೆಗಳಲ್ಲಿ ಪರಿಣಾಮಕಾರಿ ತರಬೇತಿ ಕಾರ್ಯಯೋಜನೆ ರೂಪಿಸಿದ್ದು, ಒಂದು ವರ್ಷದ ಅವಧಿಯಲ್ಲಿ **33482** ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ



ಮಾನ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರಾದ **ಶ್ರೀ ರಾಮಲಿಂಗಾ ರೆಡ್ಡಿ** ಅವರು ನೂತನವಾಗಿ ನೇಮಕಗೊಂಡ ಚಾಲನಾ ಸಿಬ್ಬಂದಿಗಳಿಗೆ ನೇಮಕಾತಿ ಆದೇಶ ನೀಡಿದರು

## ಮೂಲಸೌಕರ್ಯ ಅಭಿವೃದ್ಧಿ ಕಾರ್ಯ

ಮೈಸೂರು ನಗರದಲ್ಲಿ **ರೂ.120** ಕೋಟಿ ವೆಚ್ಚದಲ್ಲಿ ಬಸ್ ನಿಲ್ದಾಣ ನಿರ್ಮಾಣಕ್ಕೆ ಕ್ರಮ | ಬೆಳಗಾವಿ, ಹುಬ್ಬಳ್ಳಿ ಮತ್ತು ಧಾರವಾಡದಲ್ಲಿ ಬಸ್ ನಿಲ್ದಾಣ ನಿರ್ಮಾಣ | ರಾಜ್ಯಾದ್ಯಂತ **31** ಬಸ್ ನಿಲ್ದಾಣಗಳು | **12** ಬಸ್ ಘಟಕಗಳು | **12** ಸ್ಥಳ/ಘಟಕಗಳಲ್ಲಿ ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಸ್ಟೇಷನ್‌ಗಳು | **10** ಸಿಬ್ಬಂದಿ ವಸತಿ ಗೃಹಗಳು ಮತ್ತು **02** ತರಬೇತಿ ಕೇಂದ್ರಗಳ ನಿರ್ಮಾಣ / ಮೇಲ್ದರ್ಜೆಗೇರಿಸಲಾಗಿದೆ | **ಸ್ಮಾರ್ಟ್ ಸಿಟಿ ಯೋಜನೆ**ಯಡಿ ಬೆಳಗಾವಿ, ತುಮಕೂರು (ಮೊದಲ ಹಂತ), ದಾವಣಗೆರೆ ಮತ್ತು ಬೇತೂರು ರಸ್ತೆ ಬಸ್ ನಿಲ್ದಾಣಗಳ ಮರುನಿರ್ಮಾಣ

## ಬಸ್ಸುಗಳ ಬ್ರಾಂಡಿಂಗ್

ಅಶ್ವಮೇಧ | ಪಲ್ಲಕ್ಕಿ | ಅಂಬಾರಿ ಉತ್ಸವ | ಕಲ್ಯಾಣ ರಥ | ಐರಾವತ ಕ್ಲಬ್ ಕ್ಲಾಸ್ 2.0 | ಅಮೋಘವರ್ಷ | ರಾಜ ರಥ

## ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ

**18,758** ಸಿಬ್ಬಂದಿಗಳಿಗೆ ಹೃದಯ ತಪಾಸಣೆ, **10** ಸಿಬ್ಬಂದಿಗಳಿಗೆ ತೆರೆದ ಹೃದಯ ಚಿಕಿತ್ಸೆ ಹಾಗೂ **42** ಸಿಬ್ಬಂದಿಗಳಿಗೆ ಸ್ಟಂಟ್ ಅಳವಡಿಕೆ, ವೆಚ್ಚ **ರೂ. 50.56** ಲಕ್ಷ ಪಾವತಿ

## ಸಾರಿಗೆ ವಿದ್ಯಾ ಚೇತನ / ವಿದ್ಯಾ ಸ್ಫೂರ್ತಿ

ಸಿಬ್ಬಂದಿಗಳ ಮಕ್ಕಳಿಗೆ ಅತ್ಯಧಿಕ ಮೊತ್ತದ ವಿದ್ಯಾರ್ಥಿ ವೇತನ ಹೆಚ್ಚಳ ಹಾಗೂ ಇಲ್ಲಿಯವರೆಗೆ **ರೂ. 4.25** ಕೋಟಿ ಪಾವತಿ

## ಮೊಬೈಲ್ ಕಾರ್ಯಾಗಾರ/ ಮೆಟ್ರೋ ಫೀಡರ್ ವ್ಯವಸ್ಥೆ

ಅಪಘಾತ ತುರ್ತು ಸ್ಪಂದನ ವಾಹನ | ಸಂಚಾರಿ ಕಾರ್ಯಾಗಾರ ನಿಯೋಜನೆ | **241** ಮೆಟ್ರೋ ಫೀಡರ್ ಬಸ್ಸುಗಳು | **12** ಪ್ಯಾಕೇಜ್ ಟೂರ್ | **142** ಎಕ್ಸ್ ಪ್ರೆಸ್ | **33** ನೈಸ್ ರಸ್ತೆಗಳ ಸೇವೆಗಳು | **10292** ಪ್ರತಿ ದಿನ ಹೆಚ್ಚುವರಿ ಟ್ರಿಪ್‌ಗಳು

**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳು** **ನುಡಿದಂತೆ ನಡೆದಿದ್ದೇವೆ**
ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.